ಸಂಪುಟ: 04 ಸಂಚಿಕೆ: 298 ಪುಟಗಳು: 08 ಶುಕ್ರವಾರ 10 ಜನವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಮುಂಜಾನೆ ಮಾತು
ಜ್ಞಾನವೇ ಶಕ್ತಿ. ನಾವೆಲ್ಲರೂ ಅದನ್ನು ಒಪ್ಪುತ್ತೇವೆ. ಜ್ಞಾನವು ಈಗಾಗಲೇ ಮನುಷ್ಯನಲ್ಲಿರುವ ಶಕ್ತಿಯ ಅಭಿವ್ಯಕ್ತಿಯಾಗಿದೆ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಬೈ ಎಲೆಕ್ಷನ್‌ನಲ್ಲಿ ಪುತ್ರ ಸ್ಪರ್ಧಿಸಿದಾಗ '100 ಕೋಟಿ' ಖರ್ಚು ಮಾಡಿದ್ರು

• ಉದಯವಾಹಿನಿ, ಬೆಂಗಳೂರು

ಸರ್ಕಾರದ ವಿರುದ್ಧ ಎಚ್ ಡಿ ಕುಮಾರಸ್ವಾಮಿ 60% . ಕಮಿಷನ್ ಆರೋಪ ಮಾಡಿರುವ ವಿಚಾರವಾಗಿ ಬಿಜೆಪಿ ಶಾಸಕ ಎಸ್ ಟಿ ಸೋಮಶೇಖರ್ ಎಚ್ ಡಿ ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದ್ದು. ಉಪಚುನಾವಣೆಗೆ ಪುತ್ರನನ್ನು ನಿಲ್ಲಿಸಿದಾಗ 100 ಕೋಟಿ ಖರ್ಚು ಮಾಡಿದರು.100 ಕೋಟಿ ಹಣವನ್ನು ಆಲುಗಡ್ಡೆ ಬೆಳೆದು ಸಂಪಾದನೆ ಮಾಡಿದ್ರಾ ಎಂದು ಬೆಂಗಳೂರಿನಲ್ಲಿ ಎಚ್ ಡಿ ಕುಮಾರಸ್ವಾಮಿ ವಿರುದ್ಧ ಎಸ್‌ಟಿ ಸೋಮಶೇಖರ್ ವಾಗ್ದಾಳಿ ನಡೆಸಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮಂಡ್ಯದಲ್ಲಿ ನೀವು ನಿಂತಾಗ ಕೋಟ್ಯಾಂತರ ರೂಪಾಯಿ ಹಣ ಖರ್ಚು ಮಾಡಿದ್ರಿ. ರಾಮನಗರದಲ್ಲೂ ಕೂಡ ಸ್ಪರ್ಧಿಸಿದಾಗ ಕೋಟ್ಯಾಂತರ ಹಣ ಖರ್ಚು ಮಾಡಿದ್ರಿ. ಎಲ್ಲಿಂದ ಬಂತು ಅಷ್ಟು ಹಣ? ಮೊದಲು ಅದನ್ನು ಹೇಳಿ ಎಂದು ಸೋಮಶೇಖರ್ ಕುಮಾರ ಸ್ವಾಮಿಗೆ ಸವಾಲು ಹಾಕಿದರು.

ಏಪ್ರಿಲ್‌ನಲ್ಲಿ ಸರ್ಕಾರ ಬೀಳೋದು ಅಷ್ಟೇ ಸತ್ಯ

• ಉದಯವಾಹಿನಿ, ದಾವಣಗೆರೆ

ಡಿನ್ನರ್ ಪಾಲಿಟಿಕ್ಸ್‌ನಲ್ಲಿ ಬ್ಯುಸಿಯಾಗಿರುವ ಕಾಂಗ್ರೇಸ್ ಸರ್ಕಾರ ಏಪ್ರಿಲ್‌ನಲ್ಲಿ ಬಿಳಲಿದೆ. ಸೂರ್ಯ ಚಂದ್ರ ಇರುವುದು ಎಷ್ಟು ಸತ್ಯವೋ ಸರ್ಕಾರ ಬೀಳುವುದು ಅಷ್ಟೇ ಸತ್ಯ ಎಂದು ಮಾಜಿ ಸಚಿವ ಎಂ.ಪಿ ರೇಣುಕಾಚಾರ್ಯ ಭವಿಷ್ಯ ನುಡಿದಿದ್ದಾರೆ.ದಾವಣಗೆರೆಯಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಈ ವೇಳೆ, ಗ್ಯಾರಂಟಿ ಹೆಸರು ಹೇಳಿಕೊಂಡು ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಸರ್ಕಾರ ಹಣ ಹೊಂದಿಸಲು ಪರದಾಡುತ್ತಿದೆ. ಶಾಸಕರು ಖುರ್ಚಿಗಾಗಿ ಹಾದಿ ಬೀದಿಯಲ್ಲಿ ಕಿತ್ತಾಡುತ್ತಿದ್ದಾರೆ. ಪ್ರತ್ಯೇಕವಾಗಿ ಅವರವರ ಬಣದ ಡಿನ್ನರ್ ಪಾರ್ಟಿ ಮಾಡಿಕೊಳ್ಳುತ್ತಿದೆ ಎಂದು ಕಿಡಿಕಾರಿದ್ದಾರೆ. ರಾಜ್ಯ ಸರ್ಕಾರದಲ್ಲಿ 60% ಕಮಿಷನ್ ದಂಧೆ ನಡೆಯುತ್ತಿದೆ. ಕಮಿಷನ್ ಆರೋಪಕ್ಕೆ ಸಿಎಂ ದಾಖಲೆ ಬಿಡುಗಡೆ ಮಾಡಿ ಎಂದು ಹೇಳಿದ್ದಾರೆ. ಓತಿಕ್ಯಾತಕ್ಕೆ ಬೇಲಿ ಸಾಕ್ಷಿ ಎನ್ನುವಂತಾಗಿದೆ ಇವರು ಹೇಳುವ ಮಾತು. ರಾಜ್ಯದ ಜನರು ನಿಮ್ಮ ಅಂಗಿ ಹರಿತಾರೆ, ವಿಧಾನಸೌಧದ ಮೂರನೇ ಮಹಡಿಯಲ್ಲಿ ಕೂರಲು ಬಿಡುವುದಿಲ್ಲ ಎಂದು ಆಕ್ರೋಶ ಹೊರಹಾಕಿದ್ದಾರೆ. ಜಾರಕಿಹೊಳಿ ನಮ್ಮ ಊಟ ನಮ್ಮ ಮೀಟಿಂಗ್ ಎಂದು ಹೇಳಿದ್ದಾರೆ.

ನಕ್ಸಲರ ಶರಣಾಗತಿ ಬಗ್ಗೆ ಸರ್ಕಾರದ ವಿರುದ್ಧ ಯತ್ನಾಳ್ ಕಿಡಿ

• ಉದಯವಾಹಿನಿ, ವಿಜಯಪುರ

ಆರು ನಕ್ಸಲರು ಸಮಾಜದ ಮುಖ್ಯವಾಹಿನಿಗೆ ಬಂದಿರುವ ವಿಚಾರಕ್ಕೆ ಸಂಬಂಧಿಸಿದಂತೆ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಟ್ವೀಟ್ ಮಾಡಿ ವಿರೋಧ ವ್ಯಕ್ತಪಡಿಸಿದ್ದಾರೆ. ನಕ್ಸಲರ ಬೇಡಿಕೆಗಳನ್ನು ಆಲಿಸಿ ಅವರನ್ನು ಮುಖ್ಯವಾಹಿನಿಗೆ ತಂದು ಅವರು ಕೂಡ ಸಾಮಾನ್ಯರಂತೆ ಬದುಕುವುದಕ್ಕೆ ಹಕ್ಕಿದೆ. ಆದರೆ, ಶರಣಾಗಲು ಪ್ಯಾಕೇಜ್ ಕೊಡುವುದು ಸರಿಯಾದ ಕ್ರಮವಲ್ಲ. ನಕ್ಸಲರು ಕೈಗೊಂಡ ಹಿಂಸೆಗಳಿಂದ ಅನೇಕ ಪೊಲೀಸ್ ಅಧಿಕಾರಿಗಳು, ಕಾರ್ಯಾಚರಣಾ ತಂಡದ ಸದಸ್ಯರು ಜೀವ ಕಳೆದುಕೊಂಡಿದ್ದಾರೆ. ಯಾರದ್ದೋ ಮೇಲೆ ಕೋಪಕ್ಕೆ ಬಡ ಗ್ರಾಮಸ್ಥರ ಮೇಲೆ, ಪೊಲೀಸರನ್ನು ಬಲಿ ತೆಗೆದುಕೊಂಡವರಿಗೆ ವಿಶೇಷ ಆತಿಥ್ಯ ಕೊಡುವುದು ಖಂಡಿತ ಸರಿಯಾದ ಕ್ರಮವಲ್ಲ. ಅವರು ಮಾಡಿರುವ ಅಪರಾಧಕ್ಕೆ ತಕ್ಕಂತೆ ಶಿಕ್ಷೆ ಅನುಭವಿಸಿ ನಂತರ ಮುಖ್ಯವಾಹಿನಿಗೆ ಬರಲಿ ಎಂದು ಪೋಸ್ಟ್ ಹಾಕಿಕೊಂಡಿದ್ದಾರೆ.

ತಿರುಪತಿಯಲ್ಲಿ ರಾಜ್ಯದ ಯಾವ ಭಕ್ತರಿಗೂ ತೊಂದರೆಯಾಗಿಲ್ಲ

• ಉದಯವಾಹಿನಿ, ಬೆಂಗಳೂರು

ತಿರುಪತಿಯಲ್ಲಿರುವ ವೈಕುಂಠ ದ್ವಾರ ದರ್ಶನ ಟಿಕೆಟ್ ಖರೀದಿಸುವ ಕೇಂದ್ರಗಳ ಬಳಿ ಕಾಲ್ತುಳಿತ ಸಂಭವಿಸಿ 6 ಜನರು ಸಾವನ್ನಪ್ಪಿದ್ದು, 40 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಈ ವಿಚಾರವಾಗಿ ಮುಜರಾಯಿ ಇಲಾಖೆಯ ಸಚಿವ ರಾಮಲಿಂಗಾರೆಡ್ಡಿ ಅವರು ತಿರುಪತಿಯಲ್ಲಿ ರಾಜ್ಯದ ಭಕ್ತರಿಗೆ ಯಾವುದೇ ರೀತಿಯಾದ ತೊಂದರೆ ಆಗಿಲ್ಲ ಎಂದು ಸ್ಪಷ್ಟನೆ ನೀಡಿದರು.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ತಿರುಪತಿಯಲ್ಲಿ ರಾಜ್ಯದ ಯಾವ ಭಕ್ತರಿಗೂ ತೊಂದರೆಯಾಗಿಲ್ಲ. ರಾಜ್ಯದ ಎಂಡೋಮೆಂಟ್ ಅಧಿಕಾರಿಯ ಜೊತೆ ನಾನು ಸಂಪರ್ಕದಲ್ಲಿ ಇದ್ದೇನೆ. ತಿರುಪತಿಯಲ್ಲಿ ಕರ್ನಾಟಕ ಭವನದ ಕ್ಷೇತ್ರದಲ್ಲಿ ಭಕ್ತಾದಿಗಳಿಗೆ ಸ್ನಾನ ತಿಂಡಿ ಹಾಗೂ ಊಟದ ವ್ಯವಸ್ಥೆ ಮಾಡಲಾಗಿದೆ. ಅಲ್ಲಿ ತಕ್ಷಣಕ್ಕೆ ಬೇಕಾಗುವ ಅಗತ್ಯ ಕ್ರಮಕ್ಕೆ ಸ್ಪಂದಿಸಲು ಸೂಚಿಸಿದ್ದೇನೆ ಎಂದು ತಿಳಿಸಿದರು. ಬಳ್ಳಾರಿ ಮೂಲದ ಮಹಿಳೆಯ ಸಾವಾಗಿಲ್ಲ, ಡಿಸಿ ಸ್ಪಷ್ಟನೆ ತಿರುಪತಿಯಲ್ಲಿರುವ ವೈಕುಂಠ ದ್ವಾರ ದರ್ಶನ ಟಿಕೆಟ್ ಖರೀದಿಸುವ ಕೇಂದ್ರಗಳ ಬಳಿ ಕಾಲ್ತುಳಿತ ಸಂಭವಿಸಿ 6 ಜನರು ಸಾವನ್ನಪ್ಪಿದ್ದು, 40 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಇದಕ್ಕೆ ಸ್ಪಷ್ಟನೆ ನೀಡಿರುವ ಬಳ್ಳಾರಿ ಜಿಲ್ಲಾಧಿಕಾರಿಗಳು ತಿರುಪತಿ ಕಾಲ್ತುಳಿತದಲ್ಲಿ ಬಳ್ಳಾರಿ ಮೂಲದ ಯಾವುದೇ ಮಹಿಳೆ ಸಾವನ್ನಪ್ಪಿಲ್ಲ ಎಂದು ತಿಳಿಸಿದ್ದಾರೆ.

ಒಂದು ವೇಳೆ ರಾಜ್ಯ ಬಿಜೆಪಿ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆದರೆ ಹಾಲಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ಸ್ಪರ್ಧೆ ಮಾಡಲು ಇಬ್ಬರು ಕೇಂದ್ರ ಸಚಿವರು ಒಲವು ತೋರಿದ್ದಾರೆ. ಕೇಂದ್ರ ಸಚಿವರಾದ ವಿ.ಸೋಮಣ್ಣ ಮತ್ತು ಶೋಭಾ ಕರಂದ್ಲಾಜೆ ಚುನಾವಣೆಗೆ ಸ್ಪರ್ಧೆ ಮಾಡುವ ಬಗ್ಗೆ ತಮ್ಮ ಆಪ್ತರ ಬಳಿ ಇಂಗಿತವನ್ನು ವ್ಯಕ್ತಪಡಿಸಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ. ಕೇಂದ್ರದಲ್ಲಿ ಸಚಿವರಾಗಿದ್ದರೂ ರಾಜ್ಯ ರಾಜಕಾರಣದ ಮೇಲೆ ಹೆಚ್ಚು ಆಸಕ್ತಿ ಹೊಂದಿರುವ ಸೋಮಣ್ಣ ಮತ್ತು ಶೋಭಾ ಕರಂದ್ಲಾಜೆ ಚುನಾವಣೆಗೆ ನಿಲ್ಲುವ ಬದಲು ತಮನ್ನು ರಾಜ್ಯಾಧ್ಯಕ್ಷ ಸ್ಥಾನಕ್ಕೆ ನೇರವಾಗಿ ಆಯ್ಕೆ ಮಾಡುವಂತೆ ವರಿಷ್ಠರಿಗೆ ದುಂಬಾಲು ಬಿದ್ದಿದ್ದಾರೆ. ಸದ್ಯದ ಪರಿಸ್ಥಿತಿಯಲ್ಲಿ ಚುನಾವಣೆ ನಡೆಯುವ ಸಾಧ್ಯತೆಗಳು ತೀರಾ ವಿರಳ ಎಂದು ಹೇಳಲಾಗುತ್ತಿದೆಯಾದರೂ ಅಧ್ಯಕ್ಷ ಸ್ಥಾನದ ಮೇಲೆ ಈ ಇಬ್ಬರೂ ಸಚಿವರು ಕಣ್ಣಿಟ್ಟಿರುವುದು ಗುಟ್ಟಾಗಿ ಉಳಿದಿಲ್ಲ.

ದೆಹಲಿಯಲ್ಲಿ ರೆಬಲ್ಸ್

ಬಣ ಬಡಿದಾಟ ಬಿವೈವಿ ಔತಣಕೂಟ

ಬಿಜೆಪಿಯಲ್ಲೂ ಭೋಜನ ಸಭೆ ಪರ್ವ



ಇತ್ತೀಚೆಗೆ ದೆಹಲಿಗೆ ತೆರಳಿದ್ದ ಬಿಜೆಪಿ ರೆಬಲ್ಸ್ ಟೀಂ ರಹಸ್ಯವಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿದೆ. ಈ ಭೇಟಿ ವಿಚಾರವನ್ನು ಗೌಪ್ಯವಾಗಿಡುವಂತೆ ರೆಬಲ್ಸ್‌ಗಳಿಗೆ ಅಮಿತ್ ಶಾ ಸೂಚನೆ ನೀಡಿದ್ದಾರೆ ಎನ್ನಲಾಗಿದೆ. ಮಂಗಳವಾರ ಸುಮಾರು 45 ನಿಮಿಷಗಳ ಕಾಲ ಅಮಿತ್ ಶಾ ಜೊತೆ ಬಿಜೆಪಿ ರೆಬಲ್ಸ್ ಟೀಂ ಮಾತನಾಡಿದೆ ಎಂದು ತಿಳಿದು ಬಂದಿದೆ. ಯತ್ನಾಳ್ ಅನುಪಸ್ಥಿತಿಯಲ್ಲಿ ಅಮಿತ್ ಶಾ ಜೊತೆ ರೆಬಲ್ಸ್ ಮಾತುಕತೆ ನಡೆಸಿದ್ದು, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಬಗ್ಗೆ ದೂರು ನೀಡಿದ್ದಾರೆ ಎನ್ನಲಾಗಿದೆ. ಅಲ್ಲದೆ ರಾಜ್ಯಾಧ್ಯಕ್ಷರ ಬದಲಾವಣೆಯ ಅವಶ್ಯಕತೆ ಬಗ್ಗೆ ಅಮಿತ್ ಶಾ ಗಮನಕ್ಕೆ ತಂದಿದ್ದಾರೆ ಎನ್ನಲಾಗಿದೆ.

• ಉದಯವಾಹಿನಿ, ಬೆಂಗಳೂರು

ವಿಜಯೇಂದ್ರ ಅವರನ್ನು ವಿರೋಧಿಸುತ್ತಿರುವ ಯತ್ನಾಳ್ ಬಣ ಶೋಭಾ ಇಲ್ಲವೇ ಸೋಮಣ್ಣ ಅವರನ್ನು ಕಣಕ್ಕಿಳಿಸುವ ಬಗ್ಗೆಯೂ ಚಿಂತನೆ ನಡೆಸಿದೆ. ಚುನಾವಣೆ ನಡೆದಿದ್ದೇ ಆದರೆ ಬಹುತೇಕ ಜಿಲ್ಲಾಧ್ಯಕ್ಷರು, ಉಪಾಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು ವಿಜಯೇಂದ್ರ ಬಣಕ್ಕೆ ನಿಷ್ಠುರರಾಗಿರುವುದರಿಂದ ಚುನಾವಣೆ ನಡೆಯುವ ಸಾಧ್ಯತೆಗಳು ಇಲ್ಲ ಎನ್ನಲಾಗುತ್ತಿದೆ.

ಹಾಗೊಂದು ವೇಳೆ ಚುನಾವಣೆ ನಡೆದಿದ್ದೇ ಆದರೆ ಅದಕ್ಕೆ ಬೇಕಾದ ಅಗತ್ಯ ಪೂರ್ವ ಸಿದ್ಧತೆಗಳನ್ನು ಕೂಡ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಮಾಡಿಕೊಂಡಿದ್ದಾರೆ. ಯಾವುದೇ ಕಾರಣಕ್ಕೂ ಅಧ್ಯಕ್ಷ ಸ್ಥಾನದಿಂದ ತಮ್ಮ ಪುತ್ರನಿಗೆ ಹಿನ್ನೆಡೆಯಾಗಬಾರದು ಎಂಬ ಕಾರಣಕ್ಕಾಗಿ ಆಪ್ತರ ಬಳಿ ಈಗಾಗಲೇ ಒಂದು ಸುತ್ತಿನ ಚರ್ಚೆ ನಡೆಸಿದ್ದಾರೆ. ರಾಜ್ಯ ರಾಜಕಾರಣದ ಮೇಲೆ ಸೋಮಣ್ಣ ಮತ್ತು ಶೋಭಾ ಕಣ್ಣಿಟ್ಟಿದ್ದರಾದರೂ ಪ್ರಧಾನಿ ಮೋದಿ ಈ ಇಬ್ಬರನ್ನೂ ಸಂಪುಟದಿಂದ ಹೊರಗಿಡುವುದು ಕಷ್ಟಸಾಧ್ಯ. ಕೇಂದ್ರ ಸಚಿವ ಸಂಪುಟ ವಿಸ್ತರಣೆಯಾಗುವ ವೇಳೆಯೇ ಜಾತಿ ಲೆಕ್ಕಾಚಾರ ಹಾಕಿಯೇ ಕರ್ನಾಟಕಕ್ಕೆ ಕೋಟಾವನ್ನು ನಿಗದಿಪಡಿಸಲಾಗಿತ್ತು. ಒಕ್ಕಲಿಗ ಸಮುದಾಯದಿಂದ ಶೋಭಾಕರಂದ್ಲಾಜೆ ಮತ್ತು ವೀರಶೈವ ಸಮುದಾಯದಿಂದ ವಿ.ಸೋಮಣ್ಣ ಅವರಿಗೆ ಸ್ಥಾನ ಕಲ್ಪಿಸಲಾಗಿತ್ತು. ಏಕಾಏಕಿ ತಾವು ರಾಜ್ಯ ರಾಜಕಾರಣಕ್ಕೆ ಮರಳುತ್ತೇವೆ ಎಂದು ಮೋದಿ ಬಳಿ ಉಭಯ ನಾಯಕರು ಮನವಿ ಮಾಡಿಕೊಂಡರೂ ಇದನ್ನು ಪ್ರಧಾನಿ ಒಪ್ಪುವುದು ಕಷ್ಟಸಾಧ್ಯ ಎನ್ನಲಾಗುತ್ತಿದೆ. 2028ರ ಕರ್ನಾಟಕ ವಿಧಾನಸಭೆಯನ್ನು ಗಮನದಲ್ಲಿಟ್ಟುಕೊಂಡೇ ಹಲವು ವಿರೋಧದ ನಡುವೆಯೇ ವಿಜಯೇಂದ್ರಗೆ ಅಧ್ಯಕ್ಷ ಸ್ಥಾನ ನೀಡಲಾಗಿದೆ. ಏಕಾಏಕಿ ವಿಜಯೇಂದ್ರ ಅವರನ್ನು ಬದಲಾವಣೆ ಮಾಡಿದರೆ ಪಕ್ಷದಿಂದ ದೂರ ಸರಿದಿರುವ ವೀರಶೈವ ಲಿಂಗಾಯತ ಸಮುದಾಯದ ಮತಗಳು ಇನ್ನಷ್ಟು ಛಿದ್ರವಾಗಬಹುದು ಎಂಬ ಕಾರಣಕ್ಕಾಗಿ ಅವರನ್ನೇ ಮುಂದುವರೆಸುವ ಸಾಧ್ಯತೆ ಇದೆ.

ಗುರುವಾರ ಬಿವೈವಿ ಔತಣ ಕೂಟ: ರಾಜ್ಯ ಬಿಜೆಪಿಯಲ್ಲಿ ಬಣ ಬಡಿದಾಟ ಜೋರಾಗಿರುವ ಬೆನ್ನಲ್ಲೇ ಅಧ್ಯಕ್ಷ ವಿಜಯೇಂದ್ರ ಅವರು ಗುರುವಾರ ಮಾಜಿ ಶಾಸಕರು ಮತ್ತು ಸಚಿವರ ಔತಣ ಕೂಟ ಕರೆದಿರುವುದು ಕುತೂಹಲಕ್ಕೆ ಎಡೆಮಾಡಿಕೊಟ್ಟಿದೆ. ಗುರುವಾರ ಮಧ್ಯಾಹ್ನ ಕ್ಯಾಪಿಟಲ್ ಹೋಟೆಲ್‌ನಲ್ಲಿ ಮಾಜಿ ಶಾಸಕರು ಹಾಗೂ ವಿಧಾನಪರಿಷತ್ ಸದಸ್ಯರಿಗೆ ವಿಜಯೇಂದ್ರ ಔತಣಕೂಟ ಏರ್ಪಡಿಸಿದ್ದು, ಸಭೆಗೆ ಕಡ್ಡಾಯವಾಗಿ ಎಲ್ಲಾರೂ ಆಗಮಿಸಬೇಕೆಂದು ಸೂಚನೆ ನೀಡಲಾಗಿದೆ. ಮೇಲ್ನೋಟಕ್ಕೆ ಇದೊಂದು ಪಕ್ಷದ ಸಂಘಟನೆ ಕುರಿತಾಗಿ ನಡೆಯಲಿರುವ ಸಭೆ ಎಂದೇ ಹೇಳಲಾಗುತ್ತಿದೆಯಾದರೂ ಬಿಜೆಪಿ ಒಳಗೆ ನಡೆಯುತ್ತಿರುವ ವಿದ್ಯಮಾನಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದು ಹೇಳಲಾಗುತ್ತಿದೆ. ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ, ಬಿ.ಪಿ.ಹರೀಶ್, ಮಾಜಿ ಸಂಸದರಾದ ಜಿ.ಎಂ.ಸಿದ್ದೇಶ್, ಅಣ್ಣಾ ಸಾಹೇಬ್ ಜೊಲ್ಲೆ ಮತ್ತಿತರರು ನಡೆಸುತ್ತಿರುವ ಪ್ರತ್ಯೇಕ ಸಭೆಗೆ ಪರ್ಯಾಯವಾಗಿ ಕೈಗೊಳ್ಳಬೇಕಾದ ನಿರ್ಧಾರಗಳ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಲಿದೆ ಎಂದು ಹೇಳಲಾಗುತ್ತದೆ.

ವಿಜಯೇಂದ್ರ ವಿರುದ್ಧ ಸ್ಪರ್ಧೆಗೆ ಕೇಂದ್ರದ ಇಬ್ಬರು ಸಚಿವರು ಸಜ್ಜು

1. ವಿಜಯೇಂದ್ರ ಅವರನ್ನು ವಿರೋಧಿಸುತ್ತಿರುವ ಯತ್ನಾಳ್ ಬಣ ಶೋಭಾ ಇಲ್ಲವೇ ಸೋಮಣ್ಣ ಅವರನ್ನು ಕಣಕ್ಕಿಳಿಸುವ ಬಗ್ಗೆಯೂ ಚಿಂತನೆ
2. ಬಿಜೆಪಿ ರೆಬಲ್ಸ್‌ಗಳು ರಾಜ್ಯಾಧ್ಯಕ್ಷರ ವಿರುದ್ಧ ರಣತಂತ್ರ
3. ಯತ್ನಾಳ್ ಅನುಪಸ್ಥಿತಿಯಲ್ಲಿ ಅಮಿತ್ ಶಾ ಜೊತೆ ರೆಬಲ್ಸ್ ಮಾತುಕತೆ

ವಿಶ್ವಾಸಕ್ಕೆ ತೆಗೆದುಕೊಳ್ಳಲು ಕಸರತ್ತು

ಒಂದೆಡೆ ದೆಹಲಿಯಲ್ಲಿ ಬಿಜೆಪಿ ರೆಬಲ್ಸ್‌ಗಳು ರಾಜ್ಯಾಧ್ಯಕ್ಷರ ವಿರುದ್ಧ ರಣತಂತ್ರ ಹೆಣೆಯುತ್ತಿದ್ದರೆ ಇತ್ತ ವಿಜಯೇಂದ್ರ ಅವರು ಪಕ್ಷದ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಮುಂದಾಗಿದ್ದಾರೆ. ಶುಕ್ರವಾರ ನಡೆಯಲಿರುವ ಸಭೆಗೆ ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಕೂಡ ಆಗಮಿಸುತ್ತಿದ್ದಾರೆ. ಶುಕ್ರವಾರ ನಡೆಯಲಿರುವ ಸಭೆಗೆ ಮಾಜಿ ಶಾಸಕರುಗಳು, ಮಾಜಿ ಮಂತ್ರಿಗಳು, ಮಾಜಿ ಪರಿಷತ್ ಸದಸ್ಯರುಗಳಿಗೆ ಮಾತ್ರ ಆಹ್ವಾನ ನೀಡಲಾಗಿದೆ.

ರಾಜ್ಯಾಧ್ಯಕ್ಷ ಸ್ಥಾನಕ್ಕೆ ಕುಮಾರ್ ಬಂಗಾರಪ್ಪ ಹೆಸರು?



ಕುಮಾರ್ ಬಂಗಾರಪ್ಪಗೆ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ನೀಡುವಂತೆ ಅಮಿತ್ ಶಾ ಮುಂದೆ ರೆಬಲ್ಸ್ ಬೇಡಿಕೆ ಇಟ್ಟಿದ್ದಾರೆ ಎಂದು ತಿಳಿದುಬಂದಿದೆ. ವಕ್ಫ್ ಹೋರಾಟದ ವರದಿ ಬಗ್ಗೆಯೂ ಅಮಿತ್ ಶಾ ಅವರಿಗೆ ಮಾಹಿತಿ ರೆಬಲ್ಸ್ ಮಾಹಿತಿ ನೀಡಿದ್ದು, ವಕ್ಫ್ ಹೋರಾಟಕ್ಕೆ ಬಿಜೆಪಿ ರೆಬಲ್ಸ್‌ಗಳಿಗೆ ಅಮೀತ್ ಶಾ ಶಹಬ್ಬಾಸ್ ಎಂದಿದ್ದಾರೆ. ಅಲ್ಲದೆ ತಾಲ್ಲೂಕು ಹಂತದಲ್ಲಿ ವಕ್ಫ್ ಹೋರಾಟ ಕೊಂಡೊಯ್ಯುವಂತೆ ಅಮಿತ್ ಶಾ ಸೂಚನೆ ನೀಡಿದ್ದಾರೆ ಎನ್ನಲಾಗಿದೆ. ಅಮಿತ್ ಶಾ ಭೇಟಿಗಾಗಿಯೇ ನಿನ್ನೆಯಿಂದ ದೆಹಲಿಯಲ್ಲಿ ಠಿಕಾಣಿ ಹೂಡಿದ್ದ ಬಿಜೆಪಿ ರೆಬಲ್ಸ್, ಅಂದುಕೊಂಡಂತೆ ಭೇಟಿ ಮಾಡಿದ್ದಾರೆ ಎನ್ನಲಾಗಿದೆ.

ಗಣಿಗಾರಿಕೆ ಮೇಲೆ ಹೆಚ್ಚುವರಿ ತೆರಿಗೆ ಹೇರಿಕೆ ?

• ಉದಯವಾಹಿನಿ, ನವದೆಹಲಿ

ಗಣಿಗಾರಿಕೆ ಮೇಲೆ ಕರ್ನಾಟಕ ಸರ್ಕಾರ ಹಲವು ಪಟ್ಟು ಹೆಚ್ಚುವರಿ ತೆರಿಗೆ ವಿಧಿಸುತ್ತಿರುವ ಹಿನ್ನೆಲೆಯಲ್ಲಿ ಗಣಿ ಮತ್ತು ಉಕ್ಕು ವಲಯಗಳ ಮೇಲೆ ಬೀರಬಹುದಾದ ಪ್ರತಿಕೂಲಕರ ಪರಿಣಾಮಗಳ ಬಗ್ಗೆ ಕೇಂದ್ರ ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರೊಂದಿಗೆ ಮಹತ್ವದ ಸಭೆ ನಡೆಸಿದರು.

ನವದೆಹಲಿಯ ಬೃಹತ್ ಕೈಗಾರಿಕೆ ಸಚಿವಾಲಯದಲ್ಲಿ ಗುರುವಾರ ನಡೆದ ಸಭೆಯಲ್ಲಿ ಉಕ್ಕು ಸಚಿವಾಲಯದ ಕಾರ್ಯದರ್ಶಿ ಸಂದೀಪ್ ಪೌಂಡ್ರಿಕ್, ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮದ ಅಧ್ಯಕ್ಷ ಅಮಿತವ್ ಮುಖರ್ಜಿ, ಕಾನೂನು ಸಚಿವಾಲಯದ ಅಧಿಕಾರಿಗಳು ಹಾಗೂ ಹಲವು ಗಣಿ ಕಂಪನಿಗಳ ಉನ್ನತಮಟ್ಟದ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು. ರಾಜ್ಯ ಸರ್ಕಾರ ಹೆಚ್ಚುವರಿ ತೆರಿಗೆ ವಿಧಿಸುತ್ತಿರುವ ಪರಿಣಾಮ ದೇಶೀಯ ಉಕ್ಕು ಮತ್ತು ಗಣಿ ಉದ್ಯಮದ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಒಟ್ಟಾರೆ ಸಾಧಕ-ಬಾಧಕಗಳ ಬಗ್ಗೆ ಮಾಹಿತಿ ಹಂಚಿಕೊಂಡರು. ಜೊತೆಗೆ ಸಭೆಯಲ್ಲಿ ಕೇಂದ್ರದ ಉಕ್ಕು ಸಚಿವರು ಹಲವು ಮಹತ್ವದ ಅಂಶಗಳ ಬಗ್ಗೆ ಅಭಿಪ್ರಾಯ ಹಂಚಿಕೊಂಡರು. 2047ಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ವಿಕಸಿತ ಭಾರತ ಸಾಹಕಾರ ಮಾಡುವ ಗುರಿ ಹೊಂದಿದ್ದಾರೆ. ಜಗತ್ತಿನ ಮೂರನೇ ಬೃ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಶಿರಸಂಗಿ ಲಿಂಗರಾಜ ಸರದೇಸಾಯಿ

ಇಂದು ರಾಮದುರ್ಗ ತಾಲ್ಲೂಕಿನ ಶಿರಸಂಗಿ ಲಿಂಗರಾಜ ಸರದೇಸಾಯಿಯವರ 164 ನೇ ಜಯಂತಿ. ವೀರಶೈವ ಕುಡು ಒಕ್ಕಲಿಗ ರಾಜಮನೆತನ ಶಿರಸಂಗಿ ಸಂಸ್ಥಾನದ ಜಯಗೊಂಡ ದೇಸಾಯಿ 1869 ರಲ್ಲಿ ನಿಧನರಾದ ಬಳಿಕ ಜನಿಸಿದ ಏಕೈಕ ಪುತ್ರ 1871 ರಲ್ಲಿಯೇ ನಿಧನವಾದ ಕಾರಣ ರಾಜಮನೆತನ ಅಪುತ್ರಕವಾಯಿತು. 10.1.1861 ರಲ್ಲಿ ಹಾವೇರಿ ಜಿಲ್ಲೆಯ ವನಶಿಗ್ಲಿಯಲ್ಲಿ ಜನಿಸಿದ ರಾಮಪ್ಪ ಗೂಳಪ್ಪ ಮಡ್ಲಿ 11ನೇ ವಯಸ್ಸಿನಲ್ಲಿಯೇ ಶಿರಸಂಗಿ ರಾಜಮನೆತನದ ದತ್ತಕ ಪುತ್ರನಾಗಿ ಲಿಂಗರಾಜ ಸರದೇಸಾಯಿ ಹೆಸರು ಪಡೆದು ಅರಸನಾದ. 23.8.1906 ರಲ್ಲಿ 45 ನೇ ವಯಸ್ಸಿನಲ್ಲಿ ಲಿಂಗೈಕ್ಯರಾದರು. ಈ ಅಲ್ಪ ಅವಧಿಯಲ್ಲಿನ ಅವರ ಸಾಧನೆ ಅಪೂರ್ವ. ಕರ್ನಾಟಕ ಲಿಂಗಾಯತ ಶಿಕ್ಷಣ ಸಂಸ್ಥೆಯನ್ನು (ಕೆಎಲ್ಇ) ಸ್ಥಾಪಿಸಿದರು. ಹಾನಗಲ್ ಕುಮಾರ ಸ್ವಾಮಿಗಳ ಆಶೀರ್ವಾದ ಪಡೆದು, ಅರಟಾಳ ರುದ್ರಗೌಡ, ವಾರದ ಮಲ್ಲಪ್ಪ, ಪುಟ್ಟಣ್ಣ ಶೆಟ್ಟಿ ಮುಂತಾದವರನ್ನು ಒಗ್ಗೂಡಿಸಿ ಅಖಿಲ ಭಾರತ ವೀರಶೈವ ಮಹಾಸಭೆಯನ್ನು ಹುಟ್ಟು ಹಾಕಿದರು. ಕಾಶಿಯ ಜಂಗಮವಾಡಿ ಮಠಕ್ಕೆ ಸಂಸ್ಥಾನದ 150 ಎಕರೆ ಭೂಮಿಯನ್ನು ನೀಡಿದರು. ಹಾವೇರಿ ಬಳಿ ದೇವೀಹೊಸೂರಿನಲ್ಲಿ 150 ಎಕರೆ ಖರೀದಿಸಿ ಕೃಷಿ ತರಬೇತಿ ಶಾಲೆ ತೆರೆದರು. ಸಿದ್ದಗಿರಿಯಲ್ಲಿ ಕಾಡಸಿದ್ದನ ಭವ್ಯ ಕೋಟೆ, ಧಾರವಾಡ ವಿಜಯಪುರಗಳಲ್ಲಿ ಟೌನ್ ಹಾಲ್, ಹಾಸ್ಟೆಲ್, ದಲ್ಲಾಳಿ ಮಂಡಳಿ ಕಟ್ಟಿದರು. ಅನೇಕ ಕೆರೆ ಕಟ್ಟೆ ಬಾವಿ ನೀರಾವರಿ ಯೋಜನೆ ಅನುಷ್ಠಾನಗೈದರು. ಪ್ರಗತಿಪರ ಚಿಂತಕರಾಗಿ ವಿಧವಾವಿವಾಹ ಬೆಂಬಲಿಸಿದರು. ಮಕ್ಕಳಾಗದ್ದರಿಂದ ಲೋಕದ ಮಕ್ಕಳೇ ತನ್ನ ಮಕ್ಕಳೆಂದು ಭಾವಿಸಿ ಆಸ್ತಿ ಸಮಾಜಕ್ಕೆ ದಕ್ಕಲೆಂದು ಮೃತ್ಯುಪತ್ರ ಬರೆದರು. ಇದರ ಪ್ರತಿಫಲವಾಗಿ ನವಲಗುಂದ ಶಿರಸಂಗಿ ಟ್ರಸ್ಟ್ ಫಂಡ್ ಆಸ್ತಿತ್ವಕ್ಕೆ ಬಂತು. ಡಿ ಸಿ ಪಾವಟೆ, ಎಸ್ ಸಿ ನಂದಿಮಠ, ಡಿ. ಸಿ. ಕರ್ಕಿ, ಬಿ. ಡಿ. ಜತ್ತಿ, ಎಸ್ ಆರ್ ಕಂಠಿ, ಹಳ್ಳಿಕೇರಿ ಗುದ್ದೆಪ್ಪರಂಥವರು ಇದರ ನೆರವು ಪಡೆದು ನಾಡಿನ ಮಹಾನ್ ಚೇತನರಾದರು.

ವೈಕುಂಠ ಏಕಾದಶಿ ಪ್ರಯುಕ್ತ ಅಖಂಡ ಭಾಗವತ ಪ್ರವಚನ

• ಉದಯವಾಹಿನಿ, ಬೆಂಗಳೂರು

ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ವೈಕುಂಠ ಏಕಾದಶಿ ಪ್ರಯುಕ್ತ ಜನವರಿ 10, ಶುಕ್ರವಾರ ಬೆಳಗ್ಗೆ 7-30 ರಿಂದ ರಾತ್ರಿ 12-00ರ ವರೆಗೆ ಅಖಂಡ ಭಾಗವತ ಪ್ರವಚನ ಏರ್ಪಡಿಸಿದೆ. ಉಪನ್ಯಾಸಕರು : ಶ್ರೀ ಚಂದ್ರಶೇಖರ ಆಚಾರ್ಯ (ಪ್ರಥಮ ಸ್ಕಂದ), ಶ್ರೀ ದ್ವೈಪಾಯನಾಚಾರ್ಯ ಜೋಷಿ (ದ್ವಿತೀಯ ಸ್ಕಂದ), ಶ್ರೀ ದಂಬಳ ಜಯಸಿಂಹಾಚಾರ್ಯ (ತೃತೀಯ ಸ್ಕಂದ), ಶ್ರೀ ಕೃಷ್ಣಾಚಾರ್ಯ ಕೆಂಪದಾಳಿಹಳ್ಳಿ (ಚತುರ್ಥ ಸ್ಕಂದ), ಶ್ರೀ ಪ್ರಶಾಂತ ಭಾರ್ಗವಾಚಾರ್ಯ (ಪಂಚಮ ಸ್ಕಂದ), ಶ್ರೀ ರಾಮವಿಠಲಾಚಾರ್ಯ (ಷಷ್ಟಮ ಸ್ಕಂದ), ಶ್ರೀ ಬ್ರಹ್ಮಣ್ಯಾಚಾರ್ಯ (ಸಪ್ತಮ ಸ್ಕಂದ), ಶ್ರೀ ವ್ಯಾಸನಕೆರೆ ಪ್ರಭಂಜನಾಚಾರ್ಯ (ಅಷ್ಟಮ ಸ್ಕಂದ), ಶ್ರೀ ಆನಂದತೀರ್ಥಾಚಾರ್ಯ ಮಾಳಗಿ (ನವಮ ಸ್ಕಂದ), ಶ್ರೀ ಶ್ರೀನಿಧಿ ಆಚಾರ್ಯ (ದಶಮ ಸ್ಕಂದ) ಮತ್ತು ಶ್ರೀ ರಾಘವಾಚಾರ್ಯ ಮಿಟ್ಟಿ (ಏಕಾದಶ ಸ್ಕಂದ). ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು-560003

ಉಗ್ರ ಸ್ವರೂಪಿಣಿ ಪ್ರತ್ಯಂಗಿರಾ ದೇವಿ ದರ್ಶನ ಪಡೆದ ಡಿ.ಕೆ.ಶಿವಕುಮಾರ್

• ಉದಯವಾಹಿನಿ, ಬೆಂಗಳೂರು

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಳಿಗ್ಗೆ ತಮಿಳುನಾಡಿನ ಕುಂಭಕೋಣಂಗೆ ತೆರಳಿ ಪ್ರತ್ಯೇಂಕರ ಹೋಮದಲ್ಲಿ ಭಾಗಿಯಾಗಿದ್ದಾರೆ. ಹೆಲಿಕಾಪ್ಟರ್‌ನಲ್ಲಿ ಪತ್ನಿ ಉಷಾ ಅವರೊಂದಿಗೆ ತೆರಳಿದ ಡಿ.ಕೆ.ಶಿವಕುಮಾರ್ ಶ್ರೀ ಮಹಾ ಪ್ರತ್ಯಂಗಿರ ದೇವಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಹೋಮ ಚಟುವಟಿಕೆಯಲ್ಲಿ ಭಾಗವಹಿಸಿದ್ದರು. ವೈಕುಂಠ ಏಕಾದಶಿಗೂ ಮುನ್ನ ಡಿಕೆಶಿ ದೇವಸ್ಥಾನಗಳ ದರ್ಶನಕ್ಕೆ ತೆರಳಿರುವುದು ಕುತೂಹಲ ಕೆರಳಿಸಿದೆ. ಇತ್ತೀಚೆಗೆ ರಾಜ್ಯ ರಾಜಕಾರಣದಲ್ಲಿ ನಾನಾ ರೀತಿಯ ಚಟುವಟಿಕೆಗಳು ನಡೆಯುತ್ತಿವೆ. ಅದರ ನಡುವೆ ಡಿಕೆಶಿ ದೇವರ ಮೊರೆ ಹೋಗಿದ್ದಾರೆ. ತಮಿಳುನಾಡಿನಲ್ಲಿ ಡಿಕೆಶಿ ಅವರನ್ನು ಸ್ಥಳೀಯ ಮೇಯರ್ ಶರವಣನ್, ತಾಂಜಾವೂರು ಜಿಲ್ಲಾ ಕಾಂಗ್ರೇಸ್ ಅಧ್ಯಕ್ಷ ಲೋಕನಾಥನ್, ಕಾಂಗ್ರೇಸ್ ಮುಖಂಡ ಕೃಷ್ಣಸ್ವಾಮಿ ವೆಂಕಟೇಶ್ ಮತ್ತಿತರರು ಬರಮಾಡಿಕೊಂಡರು. ಇದೇ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿರುವ ಡಿ.ಕೆ. ಶಿವಕುಮಾರ್, ಕೇಂದ್ರ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಬಿಜೆಪಿಯೇತರ ಆಡಳಿತ ಇರುವ ರಾಜ್ಯಸರ್ಕಾರಗಳಿಗೆ ಸಮರ್ಪಕವಾದ ಅನುದಾನ ನೀಡುತ್ತಿಲ್ಲ. ತೆರಿಗೆ ಹಂಚಿಕೆಯಲ್ಲೂ ಅನ್ಯಾಯ ಮಾಡುತ್ತಿದೆ ಎಂದು ಕಿಡಿಕಾರಿದರು.

ಅಂತರರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ನಟ ಕಿಶೋರ್ ರಾಯಭಾರಿ

• ಉದಯವಾಹಿನಿ, ಬೆಂಗಳೂರು

16ನೇ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ ರಾಜಭಾರಿಯನ್ನಾಗಿ ಖ್ಯಾತ ನಟ ಕಿಶೋರ್ ಕುಮಾರ್ ಜಿ. ಅವರನ್ನು ಆಯ್ಕೆ ಮಾಡಲಾಗಿದೆ.ಈ ಸಂಬಂಧ ಸರ್ಕಾರ ಆದೇಶ ಹೊರಡಿಸಿದೆ. ಕಿಶೋರ್ ಅವರು ಹಿಂದಿ ಹಾಗೂ ದಕ್ಷಿಣ ಭಾರತದ ಎಲ್ಲಾ ಭಾಷೆಗಳಲ್ಲಿಯೂ ನಟಿಸಿ ಜನಪ್ರಿಯತೆ ಗಳಿಸಿದ್ದಾರೆ.ಮಾರ್ಚ್ 1 ರಿಂದ 8 ರವರೆಗೆ ಬೆಂಗಳೂರಿನಲ್ಲಿ ನಡೆಯುವ ಚಿತ್ರೋತ್ಸವಕ್ಕೆ ಹೆಚ್ಚಿನ ಪ್ರಚಾರ ತಂದುಕೊಡುವ ಸಲುವಾಗಿ ಅವರನ್ನು ರಾಯಭಾರಿಯನ್ನಾಗಿ ನೇಮಕ ಮಾಡಲಾಗಿದೆ ಎಂದು ತಿಳಿಸಿದೆ. ಈ ಸಾಲಿನ ಚಲನ ಚಿತ್ರೋತ್ಸವವು 'ಸರ್ವ ಜನಾಂಗದ ಶಾಂತಿಯ ತೋಟ' ಶೀರ್ಷಿಕೆಯಡಿ ನಡೆಯಲಿದೆ.ಸುಮಾರು 60 ದೇಶಗಳ ಸಿನಿಮಾಗಳು, ಚಿತ್ರೋತ್ಸವದಲ್ಲಿ ಭಾಗವಹಿಸಲಿವೆ. ಕನ್ನಡ ಸೇರಿದಂತೆ ವಿವಿಧ ಭಾಷೆಗಳ 200 ಚಲನಚಿತ್ರಗಳು 13 ಚಿತ್ರಮಂದಿರಗಳಲ್ಲಿ 400 ಪ್ರದರ್ಶನಗೊಳ್ಳಲಿವೆ

ಅತ್ಯಾಚಾರ ಕೇಸ್‌ನಲ್ಲಿ ಆರೋಪ ನಿಗದಿ ಮಾಡದಂತೆ ತಡೆಯಾಜ್ಞೆ ನೀಡಿ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಮಹಿಳೆಯ ಮೇಲೆ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಪಟ್ಟಂತೆ, ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಇದೀಗ ಹೈಕೋರ್ಟ್ ಬಿಗ್ ರಿಲೀಫ್ ನೀಡಿದೆ. ಕಾರಣ ಏನೆಂದರೆ ಅತ್ಯಾಚಾರ ಆರೋಪ ನಿಗದಿ ಪಡಿಸಲು ಟ್ರಯಲ್ ನಡೆಸ ಬೇಕಾಗಿತ್ತು. ಆದರೆ ಇದೀಗ ಹೈಕೋರ್ಟ್ ಆರೋಪ ನಿಗದಿ ಮಾಡದಂತೆ ತಡೆಯಾಜ್ಞೆ ನೀಡಿ ಆದೇಶ ಹೊರಡಿಸಿದೆ ಹೌದು ತಮ್ಮ ವಿರುದ್ಧ ದಾಖಲಾಗಿರುವ ಅತ್ಯಾಚಾರ ಪ್ರಕರಣವನ್ನು ರದ್ದು ಮಾಡುವಂತೆ ಕೋರಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಹೈಕೋರ್ಟ್‌ಗೆ ಅರ್ಜಿ ಸಲ್ಲಿಕೆ ಮಾಡಿದ್ದರು. ಈ ಒಂದು ಅರ್ಜಿ ವಿಚಾರಣೆ ಮಾಡಿದ ಹೈಕೋರ್ಟ್, ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಆರೋಪ ನಿಗದಿ ಮಾಡದಂತೆ ತಡೆ ನೀಡಿ ಆದೇಶ ಹೊರಡಿಸಿದೆ.ಇದೇ ಜನವರಿ 13 ರಂದು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಆರೋಪ ನಿಗದಿ ಪ್ರಕ್ರಿಯೆ ಆರಂಭಿಸಲು ದಿನಾಂಕ ನಿಗದಿಯಾಗಿತ್ತು. ಆದರೆ, ಇದೀಗ ಹೈಕೋರ್ಟ್‌ನೊಂದ ಪ್ರಜ್ವಲ್ ರೇವಣ್ಣ ಅವರಿಗೆ ಬಿಗ್ ರಿಲೀಫ್ ಸಿಕ್ಕಂತಾಗಿದೆ.ಜನವರಿ 13ರಂದು ಆರಂಭವಾಗಬೇಕಿದ್ದ ಆರೋಪ ನಿಗದಿ ಪ್ರಕ್ರಿಯೆ ಸದ್ಯ ತಾತ್ಕಾಲಿಕ ಸ್ಥಗಿತವಾಗಿದ್ದು, ಟ್ರಯಲ್ ಎದುರಿಸಬೇಕಿದ್ದ ಪ್ರಜ್ವಲ್ ರೇವಣ್ಣಗೆ ಹೈ ಕೋರ್ಟ್ ಆದೇಶದಿಂದ ಬಿಗ್ ರಿಲೀಫ್ ಸಿಕ್ಕಿದೆ. ಅಲ್ಲದೆ ಮುಂದಿನ ಆದೇಶದವರೆಗೂ ಯಾವುದೇ ಆರೋಪ ನಿಗದಿ ಮಾಡದಂತೆ ಹೈಕೋರ್ಟ್ ಸೂಚನೆ ನೀಡಿದೆ. ಬಳಿಕ ವಿಚಾರಣೆಯನ್ನು ಜನವರಿ 16ಕ್ಕೆ ಮುಂದೂಡಲಾಯಿತು.

ಕಾಂಗ್ರೇಸ್ ಪಕ್ಷದಲ್ಲಿ ಯಾವ ಗೊಂದಲವೂ ಇಲ್ಲ: ಡಾ. ಜಿ.ಪರಂ ಸ್ಪಷ್ಟನೆ

ಶರಣಾದ ನಕ್ಸಲಿಗರ ಮೇಲೆ ಬೇರೆ ರಾಜ್ಯಗಳಲ್ಲಿ ಪ್ರಕರಣಗಳಿವೆ. ಆ ರಾಜ್ಯದ ಸರ್ಕಾರಗಳು ಸಹ ತೀರ್ಮಾನ ಕೈಗೊಳ್ಳಬೇಕು

• ಉದಯವಾಹಿನಿ, ಬೆಂಗಳೂರು

ಕಾಂಗ್ರೇಸ್ ಶಾಸಕಾಂಗ ಪಕ್ಷದ ಸಭೆಯ ಅಜೆಂಡ ಏನಿದೆ ಎಂಬುದು ಗೊತ್ತಿಲ್ಲ. ಪಕ್ಷದಲ್ಲಿ ಯಾವ ಗೊಂದಲವೂ ಇಲ್ಲ. ಎಸ್‌ಸಿ, ಎಸ್‌ಟಿ ಸಮಾವೇಶದ ಕುರಿತು ಕರೆದಿದ್ದ ಸಭೆ ಮುಂದೂಡಲು ಅನೇಕ ಕಾರಣಗಳಿವೆ. ಎಐಸಿಸಿ ವರಿಷ್ಠರು ಭಾಗವಹಿಸುವುದಾಗಿ ತಿಳಿಸಿದ್ದರಿಂದ ಮುಂದೂಡಲಾಗಿದೆ. ಎಐಸಿಸಿ ನಮ್ಮ ಮೇಲೆ ನಂಬಿಕೆ ಇಟ್ಟಿಲ್ಲ ಎಂಬ ಪ್ರಶ್ನೆ ಈಗ ಬರುವುದಿಲ್ಲ. ನೀವೆ ಬೆಳಗ್ಗೆ ಒಂದು, ಸಂಜೆ ಒಂದು ನಂಬಿಕೆಯ ಪ್ರಶ್ನೆ ಹುಟ್ಟು ಹಾಕುತ್ತಿದ್ದೀರಿ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನ ಕಾರ್ಯದರ್ಶಿಗಳಾದ ರಾಜ್ಯ ಕಾಂಗ್ರೇಸ್ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲಾ ಅವರು ನನ್ನ ಹತ್ತಿರ ಮಾತನಾಡಿದ್ದಾರೆ ಗೌಪ್ಯ ಸಭೆ ಏನು ಇಲ್ಲ. ನಮ್ಮ ಸಮಸ್ಯೆಗಳನ್ನು ಚರ್ಚಿಸಬೇಕು ಅಂತ ಸಭೆ ಸೇರುತ್ತಿದ್ದೇವೆ. ಅದಕ್ಕೆ ನೀವೆ ಬನ್ನಿ ಎಂದು ಕರೆದಿದ್ದೇನೆ. ಅವರು ದಿನಾಂಕ ಸೂಚಿಸುವುದಾಗಿ ತಿಳಿಸಿದ್ದಾರೆ. ನಂತರ ಸಭೆ ಮಾಡುತ್ತೇವೆ ಎಂದರು. ಸ್ಪಷ್ಟವಾದ ಸಭೆಯ ಬಗ್ಗೆ ಕೆಲವರು ಆತಂಕಕ್ಕೆ ಒಳಗಾಗಿದ್ದಾರೆ ಎಂದು ಮಾಧ್ಯಮದವರ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಯಾರು ಆತಂಕಕ್ಕೆ ಒಳಗಾಗಿದ್ದಾರೆ? ನನಗೆ ಗೊತ್ತಿರುವ ಹಾಗೇ ಯಾವ ಆತಂಕನೂ ಇಲ್ಲ. ಯಾರು ಆತಂಕ ಪಡುವ ಅಗತ್ಯತೆಯು ಇಲ್ಲ ಎಂದು ಈಗಾಗಲೇ ಸ್ಪಷ್ಟವಾಗಿ ಹೇಳಿದ್ದೇನೆ. ಪಕ್ಷದಿಂದ ಹೊರತಾಗಿ ಸಮಾವೇಶ ಮಾಡುತ್ತೇವೆ ಎಂದು ನಾನು ಎಲ್ಲೂ ಹೇಳಿಲ್ಲ. ನಾನಾ ವಿಶ್ಲೇಷಣೆಗಳಿಗೆ ಉತ್ತರಿಸಲು ಆಗುತ್ತದೆಯೇ? ಒಬ್ಬೊಬ್ಬರು ಒಂದೊಂದು ರೀತಿಯ ವಿಶ್ಲೇಷಣೆ ಮಾಡುವುದು ಸಹಜ. ಡಿ.ಕೆ.ಶಿವಕುಮಾರ್ ಅವರು ನನಗೆ ಆತಂಕವಿದೆ ಎಂದು ಎಲ್ಲಾದರು ಹೇಳಿದ್ದಾರೆಯೇ? ಶರಣಾದ ನಕ್ಸಲಿಗರ ಮೇಲೆ ಬೇರೆ ರಾಜ್ಯಗಳಲ್ಲಿ ಪ್ರಕರಣಗಳಿವೆ. ಆ ರಾಜ್ಯದ ಸರ್ಕಾರಗಳು ಸಹ ತೀರ್ಮಾನ ಕೈಗೊಳ್ಳಬೇಕು ಎಂದರು. ತಿರುಪತಿಯಲ್ಲಿ ಕಾಲ್ತುಳಿತದಿಂದ ಭಕ್ತರು ಸಾವನ್ನಪ್ಪಿರುವುದು ದುರದೃಷ್ಟಕರ. ಈ ರೀತಿ ಆಗಬಾರದಿತ್ತು. ಮೃತರ ಕುಟುಂಬದವರಿಗೆ ಭಗವಂತನು ದುಃಖ ಭರಿಸುವ ಶಕ್ತಿ ಕರುಣಿಸಲಿ. ಈವರೆಗಿನ ಮಾಹಿತಿ ಪ್ರಕಾರ, ಘಟನೆಯಲ್ಲಿ ರಾಜ್ಯದವರು ಇದ್ದರು ಎಂಬುದು ಗೊತ್ತಾಗಿಲ್ಲ ಎಂದು ಹೇಳಿದರು.

ಉದಯವಾಹಿನಿ ಚಿತ್ರ

ಗೃಹ ಸಚಿವ ಜಿ. ಪರಮೇಶ್ವರ್ ಹೇಳಿಕೆ

ಸುಮ್ಮನೆ ಹೇಳುವುದು ಬೇಡ. ನಿನ್ನೆ ಇಡೀ ದಿನ ಅವರೊಂದಿಗೆ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದೇನೆ. ಪತ್ರಿಕಾಗೋಷ್ಠಿಯನ್ನು ನಡೆಸಿದ್ದೇವೆ. ನನಗೆ ನಿಮ್ಮ ಆತಂಕ ಇದೆ ಅಂತ ಅವರು ಹೇಳೇ ಇಲ್ಲ ಎಂದು ಪ್ರತಿಕ್ರಿಯಿಸಿದರು. ದೆಹಲಿಯಲ್ಲಿ ಎಐಸಿಸಿ ಕಚೇರಿ ನಿರ್ಮಾಣಕ್ಕೆ 2009ರಲ್ಲಿ ಅಡಿಗಲ್ಲು ಹಾಕಲಾಗಿತ್ತು. ಬಹಳ ವರ್ಷಗಳಿಂದ ನೆನೆಗುದಿಗೆ ಬಿದ್ದಿತ್ತು. ಈಗ ಉದ್ಘಾಟನೆಗೆ ಸಿದ್ಧವಾಗಿದ್ದು, ಜನವರಿ 15ರಂದು ನಡೆಯುವ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿರುವುದಾಗಿ ತಿಳಿಸಿದರು. ನಕ್ಸಲರು ಮುಖ್ಯಮಂತ್ರಿಯವರ ಕಚೇರಿಗೆ ಬಂದು ಶರಣಾಗತರಾಗಿರುವುದರಲ್ಲಿ ತಪ್ಪೇನಿದೆ. ನಕ್ಸಲ್ ಚಟುವಟಿಕೆಗೆ ಬರಬಾರದು ಎಂಬ ಸಂದೇಶ ಇಡೀ ಸಮಾಜಕ್ಕೆ ತಲುಪಬೇಕು. ಮುಖ್ಯಮಂತ್ರಿಯವರ ಮುಂದೆ ಶರಣಾದಾಗ ರಾಜ್ಯದಲ್ಲಿ ಎಲ್ಲರಿಗೂ ಗೊತ್ತಾಗುತ್ತದೆ. ನಕ್ಸಲರ ಪರಿವರ್ತನೆಗೆ ಸರ್ಕಾರ ಅವಕಾಶ ಕೊಟ್ಟಿದೆ. ಅದರಲ್ಲಿ ತಪ್ಪೇನಿದೆ. ಬಿಜೆಪಿ ಶಾಸಕ ಸುನೀಲ್ ಕ್ಷೇತ್ರದಲ್ಲಿ ನಕ್ಸಲ್ ಚಟುವಟಿಕೆ ಜಾಸ್ತಿ ಇದೆ. ಎಎನ್‌ಎಫ್ ಕಾರ್ಕಳದಲ್ಲಿ ಇದೆಯಲ್ಲವೇ? ಎಂದು ಪ್ರಶ್ನಿಸಿದರು.

ತುರ್ತು ಆರೋಗ್ಯ ಸೇವೆಗೆ ಮಹತ್ವದ ಕ್ರಮ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದಿಂದ ಆಸ್ಪತ್ರೆಗಳಲ್ಲಿ ತುರ್ತು ವೈದ್ಯಕೀಯ ಸೇವೆಯನ್ನು ಉತ್ತಮ ರೀತಿಯಲ್ಲಿ ಒದಗಿಸಲು ಮಹತ್ವದ ಕ್ರಮ ವಹಿಸಲಾಗಿದೆ. ಕೂಡಲೇ 587 ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ಕೂಡಲೇ ನೇಮಕಾತಿ ಮಾಡಿಕೊಳ್ಳುವಂತೆ ಆದೇಶಿಸಿದೆ. ಇಂದು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಸರ್ಕಾರದ ಅಧೀನ ಕಾರ್ಯದರ್ಶಿ ಸುತ್ತೋಲೆ ಹೊರಡಿಸಿದ್ದು, ಆಯುಕ್ತರ ಏಕ ಕಡತ ಸಂಖ್ಯೆ: 1634358 ರಲ್ಲಿ ಸ್ವೀಕರಿಸಿರುವ ಪ್ರಸ್ತಾವನೆಯಲ್ಲಿ ಪ್ರಸ್ತುತ ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳ 706 ಹುದ್ದೆಗಳು ಮಂಜೂರಾಗಿದ್ದು, ಅದರಲ್ಲಿ ಕೇವಲ 241 ಹುದ್ದೆಗಳು ಭರ್ತಿ ಯಾಗಿದ್ದು, 465 ಹುದ್ದೆಗಳು ಖಾಲಿ ಇರುತ್ತವೆ.ಇವುಗಳನ್ನು ತುರ್ತಾಗಿ ತುಂಬಲು ಕೋರಲಾಗಿರುತ್ತದೆ ಎಂದಿದ್ದಾರೆ. ದಿ: 31.01.2024 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಇವರ ಅಧ್ಯಕ್ಷತೆಯಲ್ಲಿ ನಡೆದ DHO ಮತ್ತು RCHO ಸಭೆಯಲ್ಲಿ ಸಾರ್ವಜನಿಕ ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ತುರ್ತು ಚಿಕಿತ್ಸಾ ವೈದ್ಯರು/ ಅಪಘಾತ ವೈದ್ಯಕೀಯ ಅಧಿಕಾರಿಗಳ ಹುದ್ದೆಗಳ ಖಾಲಿಯಿರುವುದರಿಂದ ತುರ್ತು ವೈದ್ಯಕೀಯ ಸೇವೆ ಹಾಗೂ ತಾಯಿ ಮತ್ತು ಮಕ್ಕಳ ಆರೋಗ್ಯ ಸೇವೆಯಲ್ಲಿ ತೊಂದರೆ ಉಂಟಾಗುತ್ತಿರುವುದರಿಂದ CMO ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಅನುಮತಿ ನೀಡುವಂತೆ ಕೋರಲಾಗಿದೆ ಎಂದು ಹೇಳಿದ್ದಾರೆ. ದಿ: 07.01.2025 ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪರಿಶೀಲನಾ ಸಭೆಯಲ್ಲಿ ಇಲಾಖೆಯಲ್ಲಿ CNO ಹುದ್ದೆಗಳು ಖಾಲಿಯಿರುವುದರಿಂದ ಇಲಾಖೆಯಲ್ಲಿ ತುರ್ತು ವೈದ್ಯಕೀಯ ಸೇವೆ ಹಾಗೂ ತಾಯಿ ಮತ್ತು ಮಕ್ಕಳ ಆರೋಗ್ಯ ಸೇವೆಯಲ್ಲಿ ತೊಂದರೆ ಉಂಟಾಗುತ್ತಿರುವುದರಿಂದ ಈ ಹುದ್ದೆಗಳಿಗೆ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳುವ ಬಗ್ಗೆ ತುರ್ತಾಗಿ ಕ್ರಮ ತೆಗೆದುಕೊಳ್ಳಲು ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.



ಬಿಬಿಎಂಪಿ ಮಾಜಿ ಕಾರ್ಪೊರೇಟರ್‌ಗಳಿಗೆ ಇಡಿ ಬಿಸಿ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ಪ್ರಧಾನ ಅಭಿಯಂತರ ಪ್ರಹ್ಲಾದ್ ಅವರ ಕಚೇರಿ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿ ಪ್ರಮುಖ ದಾಖಲೆಗಳನ್ನು ವಶಪಡಿಸಿಕೊಂಡಿರುವುದರಿಂದ ಪಾಲಿಕೆ ಮಾಜಿ ಕಾರ್ಪೋರೇಟರ್ ಗಳಿಗೆ ನಡುಕ ಶುರುವಾಗಿದೆ. 2016ರಲ್ಲಿ ಕೆಆರ್‌ಡಿಎಲ್ ವತಿಯಿಂದ ನಗರದಲ್ಲಿ ಕೊರೆಸಿರುವ ಬೋರ್ ವೆಲ್ ಹಾಗೂ ಅರ್ ಓ ಪ್ಲಾಂಟ್ ಬಗ್ಗೆ, ಮಹತ್ವದ ದಾಖಲೆಗಳನ್ನು ಇಡಿ ಅಧ

ಚೀನಾ ವೈರಸ್ ಆತಂಕ ಬೇಡ: ಸಚಿವ ದಿನೇಶ್ ಗುಂಡೂರಾವ್

● ವೈರಸ್ ಹರಡದಂತೆ ನಿಗ್ರಹಿಸಲು ಅಗತ್ಯವಿರುವ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಸರ್ಕಾರ ತೆಗೆದುಕೊಂಡಿದೆ

• ಉದಯವಾಹಿನಿ ಮಾಲೂರು

ಚೀನಾದ ವೈರಸ್ ಬಗ್ಗೆ ರಾಜ್ಯದ ಜನರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ಬಿಜೆಪಿ ನಾಯಕರು ಮತ್ತು ಮಾಧ್ಯಮ ಪ್ರತಿನಿಧಿಗಳು ಈ ಬಗ್ಗೆ ಮಾಹಿತಿ ಇಲ್ಲದೆ ಮಾತನಾಡುತ್ತಿದ್ದಾರೆ. ವೈರಸ್ ಹರಡದಂತೆ ನಿಗ್ರಹಿಸಲು ಅಗತ್ಯವಿರುವ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಸರ್ಕಾರ ತೆಗೆದುಕೊಂಡಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ವಿಕ್ರಮ್ ಚಾರಿಟಬಲ್ ಟ್ರಸ್ಟ್ ವತಿಯಿಂದ ತಾಲ್ಲೂಕು ಆರೋಗ್ಯ ಇಲಾಖೆಗೆ ಎರಡು ಆ್ಯಂಬುಲೆನ್ಸ್ ನೀಡುತ್ತಿರುವ ಕಾರ್ಯಕ್ರಮವು ಗುರುವಾರ ನಡೆಯಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, 'ನಕ್ಸಲರನ್ನು ಸಮಾಜದ ಮುಖ್ಯ ವಾಹಿನಿಗೆ ತರುವುದು ನಮ್ಮ ಕರ್ತವ್ಯ.

ಅದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮ್ಮುಖದಲ್ಲಿ ನಡೆದಿದೆ. ಬಿಜೆಪಿ ಅವರು ದುರುದ್ದೇಶದಿಂದ ಮಾತನಾಡುತ್ತಾರೆ' ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. ವಿಕ್ರಮ್ ಅಫಘಾತದಲ್ಲಿ ಸಾವನ್ನಪ್ಪಿದ್ದ

> ಇಲ್ಲಿನ ಸರ್ಕಾರಿ ಆಸ್ಪತ್ರೆ ಕಟ್ಟಡವು ಸಂಪೂರ್ಣವಾಗಿ ಶಿಥಿಲಗೊಂಡಿದೆ. ಈ ಆಸ್ಪತ್ರೆ ದುರಸ್ತಿಗೆ ಶಾಸಕ ನಂಜೇಗೌಡ ನನ್ನ ಮೇಲೆ ಒತ್ತಡ ಹಾಕುತ್ತಿದ್ದಾರೆ. ಮುಂದಿನ ಬಜೆಟ್‌ನಲ್ಲಿ ನೂತನ ಆಸ್ಪತ್ರೆ ನಿರ್ಮಾಣಕ್ಕೆ ಅಗತ್ಯವಿರುವ ಹಣ ಬಿಡುಗಡೆ ಮಾಡಲಾಗುವುದು
> –ದಿನೇಶ್ ಗುಂಡೂರಾವ್

ಕಾರಣ ವಿಕ್ರಮ್ ಚಾರಿಟಬಲ್ ಟ್ರಸ್ಟ್ ವತಿಯಿಂದ ರಕ್ತದಾನ ಶಿಬಿರ, ದ್ವಿಚಕ್ರ ವಾಹನ ಚಾಲಕರಿಗೆ ಹೆಟ್ ವಿತರಿಸಲಾಯಿತು. ವಿಕ್ರಮ್ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಕೃಷ್ಣಪ್ಪ ತಮ್ಮ ಮಗನ ಹೆಸರಿನಲ್ಲಿ ಸುಮಾರು ಏಳು ವರ್ಷಗಳಿಂದ ಸಮಾಜಮುಖಿ ಕೆಲಸ ಮಾಡಿಕೊಂಡು ಬರುತ್ತಿದ್ದಾರೆ. ಪತ್ರಿ ವರ್ಷ ತಮ್ಮ ಮಗನ ನೆನಪಿಗಾಗಿ, ರಕ್ತದಾನ ಶಿಬಿರ, ದ್ವಿಚಕ್ರ ವಾಹನ ಚಾಲಕರಿಗೆ ಉಚಿತವಾಗಿ ಹೆಟ್‌ಗಳನ್ನು ನೀಡಲಾಗುತ್ತಿದೆ. ಇವರು ಸತತ ಏಳು ವರ್ಷಗಳಿಂದ

ಉದಯವಾಹಿನಿ ಚಿತ್ರ

ಸಮಾಜಮುಖಿ ಕೆಲಸ ಮುಂದುವರಿಸಿಕೊಂಡು ಬರುತ್ತಿದ್ದಾರೆ ಎಂದು ಹೇಳಿದರು. ಸ್ಥಳೀಯ ಶಾಸಕ ಕೆ.ವೈ.ನಂಜೇಗೌಡ ತಾಲ್ಲೂಕಿನ ಅಭಿವೃದ್ಧಿ ಕಡೆ ಕ್ರಿಯಾಶೀಲರಾಗಿ ಕೆಲಸ ಮಾಡುತ್ತಿದ್ದಾರೆ.

ಮುಖ್ಯಮಂತ್ರಿಗಳಿಂದ ಹಿಡಿದು, ಸಚಿವರ ಬಳಿ ಉತ್ತಮ ಬಾಂಧವ್ಯ ಬೆಳಸಿಕೊಂಡಿದ್ದು, ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದಿಂದ ಅಗತ್ಯ ಅನುದಾನ ತರುತ್ತಿದ್ದಾರೆ. ಮಾಲೂರು ತಾಲ್ಲೂಕು ಅಭಿವೃದ್ಧಿಗೆ ಸರ್ಕಾರದಿಂದ ಸುಮಾರು 2,008 ಕೋಟಿ ಬಿಡುಗಡೆ ಮಾಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ ಎಂದರು. ಶಾಸಕ ಕೆ.ವೈ. ನಂಜೇಗೌಡ ಮಾತನಾಡಿ. ಸಚಿವ

ಸುಸಜ್ಜಿತ ಆಸ್ಪತ್ರೆ ಭರವಸೆ

> ಶೀಘ್ರವೇ ಸುಸಜ್ಜಿತ ಆಸ್ಪತ್ರೆ ಭರವಸೆ ರಾಜ್ಯದ ತಾಲ್ಲೂಕು ಕೇಂದ್ರಗಳ ಸರ್ಕಾರಿ ಆಸ್ಪತ್ರೆಗಳನ್ನು ಅಭಿವೃದ್ಧಿ ಪಡಿಸಲಾಗುತ್ತದೆ. ಈ ಮೂಲಕ ಆಸ್ಪತ್ರೆಗಳಿಗೆ ವೈದ್ಯರು ಮತ್ತು ಸಿಬ್ಬಂದಿ ಕೊರತೆ ಇಲ್ಲದಂತೆ ನೋಡಿಕೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಚರ್ಚಿಸಲಾಗಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಬಿಜೆಪಿ ವಿರುದ್ಧ ವಾಗ್ದಾಳಿ

ದಿನೇಶ್ ಗುಂಡೂರಾವ್ ಹಿಂದೆ ರಾಜ್ಯ ಕಾಂಗ್ರೇಸ್ ಕಾರ್ಯಾಧ್ಯಕ್ಷರಾಗಿದ್ದಾಗ ಕಾಂಗ್ರೇಸ್ ಕಾರ್ಯಕರ್ತರ ಸಮಾವೇಶದಲ್ಲಿ ಭಾಗಿಯಾಗಲು ಮಾಲೂರಿಗೆ ಬಂದಿದ್ದರು.

ಇಲ್ಲಿನ ಸರ್ಕಾರಿ ಆಸ್ಪತ್ರೆ ಕಟ್ಟಡ ಶಿಥಿಲವಾಗಿದ್ದು, ಸಾರ್ವಜನಕರಿಗೆ ತುಂಬಾ ತೊಂದರೆಯಾಗಿದೆ. ಈ ನಿಟ್ಟಿನಲ್ಲಿ ನೂತನ ಆಸ್ಪತ್ರೆ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಅನುದಾನ ಬಿಡುಗಡೆ ಮಾಡಲಿದೆ ಎಂದು ಸಚಿವರು ಭರವಸೆ ನೀಡಿದ್ದಾರೆ. ಆಸ್ಪತ್ರೆ ನಿರ್ಮಾಣಕ್ಕಾಗಿ ಕಂದಾಯ ಇಲಾಖೆ ವತಿಯಿಂದ 10 ಎಕರೆ ಸರ್ಕಾರಿ ಭೂಮಿ ಗುರುತಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ರಮೇಶ್, ಇಒ ಕೃಷ್ಣಪ್ಪ, ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಸಿ.ಲಕ್ಷ್ಮಿನಾರಾಯಣ್, ವಿಕ್ರಮ್ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಲಿಂಗಾಪುರ ಕಿಟ್ಟಿ, ಪುರಸಭಾಧ್ಯಕ್ಷೆ ಕೋಮಲ ನಾರಾಯಣ್, ರಾಜಪ್ಪ, ಜಿಲ್ಲಾ ಆರೋಗ್ಯಾಡಳಿತಾಧಿಕಾರಿ ಡಾ. ಶ್ರೀನಿವಾಸ್, ತಾಲ್ಲೂಕು ಆರೋಗ್ಯ ಆಡಳಿತಾಧಿಕಾರಿ ಡಾ.ವಸಂತ್, ಕೆಪಿಸಿಸಿ ಸದಸ್ಯರಾದ ಅಂಜನಿ ಸೋಮಣ್ಣ, ಪ್ರದೀಪ್ ರೆಡ್ಡಿ, ಆಹಮದ್ ನಯುಂ, ಮದು ಸೂದನ್, ವಿಜಯನಾರಸಿಂಹ, ಮಂಜುನಾಥ್ (ಜಾಕಿ), ಹನುಮಂತರೆಡ್ಡಿ, ಬಾಳಿಗಾನಹಳ್ಳಿ ಶ್ರೀನಿವಾಸ್ ಭಾಗವಹಿಸಿದ್ದರು.

ಉಕ್ಕುಡದಲ್ಲಿ ಪೌರಕಾರ್ಮಿಕರಿಗೆ 'ಗೃಹಭಾಗ್ಯ'

• ಉದಯವಾಹಿನಿ ಮಡಿಕೇರಿ

ನಗರಸಭೆ ವ್ಯಾಪ್ತಿಯ ಕರ್ಣಂಗೇರಿ ಗ್ರಾಮದ ಬಳಿಯ ಉಕ್ಕುಡದಲ್ಲಿ ಪೌರಕಾರ್ಮಿಕರಿಗೆ 'ಗೃಹಭಾಗ್ಯ' ಯೋಜನೆಯಡಿ ಮನೆ ನಿರ್ಮಾಣ ಸೇರಿದಂತೆ ಒಟ್ಟು 12.3 ಕೋಟಿ ಮೊತ್ತದ ಕಾಮಗಾರಿಗೆ ಶಾಸಕ ಡಾ.ಮಂತರ್‌ಗೌಡ ಚಾಲನೆ ನೀಡಿದರು.

ಈ ಯೋಜನೆಯಡಿ ತಲಾ 7.50 ಲಕ್ಷ ವೆಚ್ಚದಲ್ಲಿ 12 ಮನೆಗಳಿಗೆ 90 ಲಕ್ಷ ವೆಚ್ಚದಲ್ಲಿ ನೆಲಮಹಡಿ ಸೇರಿ 3 ಅಂತಸ್ತಿನ 12 ಮನೆಗಳನ್ನು ಒಳಗೊಂಡ ಕಾಮಗಾರಿಗೆ ಅವರು ಭೂಮಿ ಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ಸರ್ಕಾರ ಪೌರಕಾರ್ಮಿಕರಿಗೆ ಅಗತ್ಯ ಮೂಲಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಹೆಚ್ಚಿನ ಕಾಳಜಿ ವಹಿಸಿದೆ' ಎಂದರು. ನಿತ್ಯವೂ ನಗರದ ಸ್ವಚ್ಛತೆಗೆ ಬೆವರಿಳಿಸುವ ಇವರಿಗೆ ಶೀಘ್ರದಲ್ಲೇ ಮನೆ ನಿರ್ಮಾಣ ಕಾರ್ಯ ಆರಂಭಿಸಿ, ಪೂರ್ಣಗೊಳಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು. ಉಕ್ಕುಡದಲ್ಲಿ ಅಂಬೇಡ್ಕರ್ ಭವನ ಉಕ್ಕುಡದಲ್ಲಿ 2 ಎಕರೆ ಜಾಗವನ್ನು ಕಾಯ್ದಿರಿಸಿ ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಪ್ರಯತ್ನಿಸಲಾಗುವುದು. ಅದಕ್ಕಾಗಿ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಎಚ್.ಸಿ.ಮಹದೇವಪ್ಪ

ಉದಯವಾಹಿನಿ ಚಿತ್ರ

ಅವರನ್ನು ಭೇಟಿ ಮಾಡಿ ಹೆಚ್ಚಿನ ಅನುದಾನ ಬಿಡುಗಡೆಗೆ ಮನವಿ ಮಾಡಲಾಗುವುದು ಎಂದು ತಿಳಿಸಿದರು. ಉಕ್ಕುಡ ಜಾಗಕ್ಕೆ ಬರುವ ರಸ್ತೆ ಮಾರ್ಗವನ್ನು ವಿಸ್ತರಣೆ ಮಾಡಬೇಕು. ಈಗಾಗಲೇ ಪೈಸಾರಿ ಜಾಗದಲ್ಲಿ ವಾಸಿಸುತ್ತಿರುವವರಿಗೆ ಜಾಗ ಹಕ್ಕುಪತ್ರ ನೀಡಬೇಕು. ನಿವೇಶನ ರಹಿತರಿಗೂ ನಿವೇಶನ ಒದಗಿಸಬೇಕು ಎಂದು ಸಲಹೆ ನೀಡಿದರು.

ಬಳಿಕ ನಗರೋತ್ಥಾನ 4ನೇ ಹಂತದಡಿ ಪಿಕೆಜಿಬಿ ನಿವೇಶನಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು 12 ಲಕ್ಷ, ಪಿಕೆಜಿಬಿ ಜಾಗಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು 6.75 ಲಕ್ಷ, ಪಿಕೆಜಿಬಿ ಸೈಟ್ ವ್ಯಾಪ್ತಿಯಲ್ಲಿ ಮಳೆ ನೀರು ಚರಂಡಿ ನಿರ್ಮಾಣ ಕಾಮಗಾರಿಗೆ 10 ಲಕ್ಷ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗೆ 5 ಲಕ್ಷ, ಗೃಹಭಾಗ್ಯ ಸೇರಿದಂತೆ ಒಟ್ಟು 12.3 ಕೋಟಿ ಮೊತ್ತದ ಕಾಮಗಾರಿಗೆ ಅವರು ಚಾಲನೆ ನೀಡಿದರು.

ಲೋಕಾಯುಕ್ತ ಕಾಯ್ದೆಯ ಫಲಕ ಅಳವಡಿಸಿ: ಡಿವೈಎಸ್‌ಪಿ ಕೆ.ಸಿ.ಪ್ರಕಾಶ್

• ಉದಯವಾಹಿನಿ, ಮಡಿಕೇರಿ

ಕೊಡಗು ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಲೋಕಾಯುಕ್ತ ಕಾಯ್ದೆಯ ಮಾಹಿತಿ ಫಲಕವನ್ನು ಕಡ್ಡಾಯವಾಗಿ ಅಳವಡಿಸಬೇಕು.

ಯಾವುದೇ ಕಾರಣಕ್ಕೂ ವಿಳಂಬ ಮಾಡಬಾರದು ಎಂದು ಲೋಕಾಯುಕ್ತ ಡಿವೈಎಸ್‌ಪಿ ಕೆ.ಸಿ.ಪ್ರಕಾಶ್ ಸೂಚಿಸಿದರು.ನಗರದಲ್ಲಿ ಲೋಕಾಯುಕ್ತ ಕಾಯ್ದೆಯಡಿ ದೂರು ಅರ್ಜಿ ಸ್ವೀಕರಿಸಿ ಅವರು ಮಾತನಾಡಿದರು.

ಸಾರ್ವಜನಿಕರ ಸಮಸ್ಯೆಗಳನ್ನು ಸಕಾಲದಲ್ಲಿ ಇತ್ಯರ್ಥಪಡಿಸಲು ಅಧಿಕಾರಿಗಳು ಶ್ರಮಿಸಬೇಕು. ಸರ್ಕಾರಿ ಅಧಿಕಾರಿಗಳು ಸಾರ್ವಜನಿಕ ಸೇವೆಯ ಉತ್ತರಾದಾಯಿತ್ವ ಹೊಂದಿರಬೇಕು ಎಂದು ಕಿವಿಮಾತು ಹೇಳಿದರು. ಕಂದಾಯ, ಪಂಚಾಯತ್ ರಾಜ್, ಸ್ಥಳೀಯ ಸಂಸ್ಥೆಗಳು ಸೇರಿದಂತೆ ವಿವಿಧ ಇಲಾಖೆ ವ್ಯಾಪ್ತಿಯಲ್ಲಿ ಸಾರ್ವಜನಿಕರು ತಮ್ಮ ಕೆಲಸಕ್ಕಾಗಿ ಭೇಟಿ ನೀಡುತ್ತಾರೆ. ಅವರಿಗೆ ಸ್ಪಂದಿಸಿ ಕರ್ತವ್ಯ ನಿರ್ವಹಿಸುವುದು ಅಧಿಕಾರಿ ಮತ್ತು ಸಿಬ್ಬಂದಿಯ ಜವಾಬ್ದಾರಿಯಾಗಿದೆ ಎಂದರು. ನಗರಸಭೆ ವ್ಯಾಪ್ತಿ

ಉದಯವಾಹಿನಿ ಚಿತ್ರ

ಯಲ್ಲಿ ರಸ್ತೆ ಬದಿ ಸ್ವಚ್ಛತೆಗೆ ಒತ್ತು ನೀಡಬೇಕು. ಸಾರ್ವಜನಿಕರ ಕುಂದುಕೊರತೆ ಆಲಿಸಬೇಕು. ಪ್ಲಾಸ್ಟಿಕ್ ಬಿಸಾಕದಂತೆ ಅರಿವು ಮೂಡಿಸಬೇಕು. ಬೀದಿದೀಪ ಸಮರ್ಪಕ ನಿರ್ವಹಣೆ ಮಾಡಬೇಕು. ರಸ್ತೆ ಗುಂಡಿ ಮುಚ್ಚಬೇಕು. ವಾಹನ ನಿಲುಗಡೆಗೆ ವ್ಯವಸ್ಥೆ ಮಾಡಬೇಕು ಎಂದು ಸೂಚಿಸಿದರು.

ಕೃಷಿ, ತೋಟಗಾರಿಕೆ, ಮೀನುಗಾರಿಕೆ, ಪಶುಪಾಲನೆ, ಕಾರ್ಮಿಕ ಇಲಾಖೆ, ಲೋಕೋಪಯೋಗಿ, ಪಂಚಾಯತ್ ರಾಜ್, ಶಾಲಾ ಶಿಕ್ಷಣ ಹೀಗೆ ವಿವಿಧ ಇಲಾಖೆಯ ಕಾರ್ಯಕ್ರಮ ಸಂಬಂಧಿಸಿದಂತೆ ಮಾಹಿತಿ ಪಡೆದರು. ನಡೆದ ಲೋಕಾಯುಕ್ತ ದೂರು ಅರ್ಜಿ ಸ್ವೀಕಾರ ಸಂದರ್ಭದಲ್ಲಿ 4 ಅರ್ಜಿಗಳು ಸಲ್ಲಿಕೆಯಾದವು. ಕಂದಾಯ ಕಂದಾಯ ಹಾಗೂ

> ವಿದ್ಯಾರ್ಥಿ ನಿಲಯಗಳಲ್ಲಿ ಸ್ವಚ್ಛತೆಗೆ ಹೆಚ್ಚಿನ ಒತ್ತು ನೀಡಬೇಕು. ಗುಣಮಟ್ಟದ ಆಹಾರ ವಿತರಿಸಬೇಕು. ಸುಭದ್ರತೆಯತ್ತ ಗಮನಹರಿಸಬೇಕು. ನೋಂದಣಿ ಪುಸ್ತಕ (ರಿಜಿಸ್ಟರ್) ನಿರ್ವಹಿಸಬೇಕು. ಕುಡಿಯಲು ಶುದ್ಧ ನೀರು ಮತ್ತು ಸ್ನಾನಕ್ಕೆ ಬಿಸಿನೀರು ವ್ಯವಸ್ಥೆ ಮಾಡಬೇಕು' ಎಂದು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸೂಚಿಸಿದರು.

ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಹೆಚ್ಚಿನ ಅರ್ಜಿಗಳು ಸಲ್ಲಿಕೆಯಾದವು.

ತಹಶೀಲ್ದಾರ ಪ್ರವೀಣ್ ಕುಮಾರ್ ಅವರು ಕಂದಾಯ ಇಲಾಖೆಗೆ ಸಂಬಂಧಿಸಿದ ಅರ್ಜಿಗಳನ್ನು ಆದಷ್ಟು ಶೀಘ್ರ ವಿಲೇವಾರಿ ಮಾಡಲಾಗುವುದು ಎಂದು ತಿಳಿಸಿದರು. ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ರಾಮನಗರ ಅಭಿವೃದ್ಧಿ ಕೆಲಸಗಳ ಬಗ್ಗೆ ಚರ್ಚೆಗೆ ಸಿದ್ದ: ಬಾಲಕೃಷ್ಣ

• ಉದಯವಾಹಿನಿ, ಮಾಗಡಿ

ತಿಪ್ಪಸಂದ್ರದ ಸಮಗ್ರ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ಈಗಾಗಲೇ ಚಾಲನೆ ನೀಡಲಾಗಿದ್ದು ಫೆಬ್ರವರಿಯಲ್ಲಿ ಇದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾರ್ಪಣೆ ಮಾಡಲಿದ್ದಾರೆ ಎಂದು ಶಾಸಕ ಎಚ್.ಸಿ. ಬಾಲಕೃಷ್ಣ ಹೇಳಿದರು. ತಾಲ್ಲೂಕಿನ ತಿಪ್ಪಸಂದ್ರದ ನೂತನ ವಿವಿಧೋದ್ದೇಶ ಪ್ರಾಥಮಿಕ ಕೃಷಿ ಗ್ರಾಮೀಣ ಸಹಕಾರಿ ಸಂಘದ ನೂತನ ಕಟ್ಟಡ, ತಿಪ್ಪಸಂದ್ರ ಗ್ರಾಮ ಪಂಚಾಯಿತಿ ಸಭಾಂಗಣ ಉದ್ಘಾಟನೆ, ತಿಪ್ಪಸಂದ್ರ ಹೋಬಳಿ, ನಾಡಕಚೇರಿ ಕಟ್ಟಡ ಉದ್ಘಾಟನೆ, ರೈತ ಸಂಘ ಕೇಂದ್ರ ಗೋಧಾಮು ಕಟ್ಟಡ ಶಂಕುಸ್ಥಾಪನೆ, ರಸ್ತೆ ಮತ್ತು ಚರಂಡಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಚರ್ಚೆಗೆ ಸಿದ್ದ: ಸಂಸದ ಡಾ. ಸಿ.ಎನ್. ಮಂಜುನಾಥ್ ಜೊತೆ ಅಭಿವೃದ್ಧಿ ಕೆಲಸಗಳ ಬಗ್ಗೆ ಚರ್ಚಿಸಲು ನಾವು ಸಿದ್ದ ನಮ್ಮ ಕಾರ್ಯಕ್ರಮಗಳಲ್ಲಿ ಡಾ.ಸಿ.ಎನ್.ಮಂಜುನಾಥ್ ಭಾಗವಹಿಸುತ್ತಿಲ್ಲ. ಅವರು ಕ್ಷೇತ್ರಕ್ಕೆ ಯಾವ ಕೊಡುಗೆಯನ್ನು ಕೊಡುತ್ತಿದ್ದಾರೆ ಎಂಬುದನ್ನು ನೇರವಾಗಿ ನಮ್ಮ ಮುಂದೆ ಇಡಲಿ. ನಮ್ಮ ಸಮಸ್ಯೆಯನ್ನು ಅವರ ಮುಂದೆ ಇಡುತ್ತೇವೆ.ಆಗ ಅಭಿವೃದ್ಧಿ ವೇಗ ಪಡೆಯುತ್ತದೆ. ತಿಪ್ಪಸಂದ್ರ ರೈಲ್ವೆ ನಿಲ್ದಾಣವನ್ನು ಮೇಲ್ದರ್ಜೆಗೆ ಏರಿಸುವ ಕೆಲಸ, ಹೇಮಾವತಿ ಎಕ್ಸ್

ಉದಯವಾಹಿನಿ ಚಿತ್ರ

ನಾಡಕಚೇರಿ ಕಟ್ಟಡ ಉದ್ಘಾಟನೆ

ಪ್ರೆಸ್ ಕೆನಾಲ್ ಯೋಜನೆಯನ್ನು ಚುರುಕುಗೊಳಿಸಬೇಕು ಎಂದು ಬಾಲಕೃಷ್ಣ ಹೇಳಿದರು. ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಎಚ್.ಎಂ.ರೇವಣ್ಣ ಮಾತನಾಡಿ, ಗುತ್ತಿಗೆದಾರ ಆತ್ಮಹತ್ಯೆ ಮಾಡಿಕೊಂಡರೆ ಸಚಿವ ಪ್ರಿಯಾಂಕ ಖರ್ಗೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿಯವರು ಹೋರಾಟ ಮಾಡುತ್ತಾರೆ. ಇದರಲ್ಲಿ ಅರ್ಥವಿಲ್ಲ ಎಂದು ಟೀಕಿಸಿದರು. ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಎಚ್.ಎನ್. ಅಶೋಕ್ ಮಾತನಾಡಿ, ತಾಲ್ಲೂಕಿನ 29 ಪ್ರಾಥಮಿಕ ಸಹಕಾರಿ ಸಂಘಗಳಿಂದ 175 ಕೋಟಿ ಸಾಲವನ್ನು ರೈತರಿಗೆ ನೀಡಲಾಗಿದೆ.

ಸ್ವಾವಲಂಬಿ ಜೀವನ ನಡೆಸಲು ಸಹಕಾರಿ ಸಂಘಗಳು ನೆರವಾಗಿದ್ದು ವಾರ್ಷಿಕ ಶೇ 3ರ ಬಡ್ಡಿ ದರದಲ್ಲಿ ಕುರಿ, ಕೋಳಿ, ಮೇಕೆ ಸಾಕಾಣಿಕೆಗೆ ಸಾಲ ನೀಡಲಾಗುತ್ತಿದೆ ಎಂದು ತಿಳಿಸಿದರು.

ಮಹೇಶ ಜೋಶಿ ಕ್ಷಮೆ ಕೇಳದಿದ್ದರೆ ಮಂಡ್ಯಕ್ಕೆ ಕಾಲಿಡಲು ಬಿಡಲ್ಲ

• ಉದಯವಾಹಿನಿ, ಮಂಡ್ಯ

ಜಿಲ್ಲಾ ಕಸಾಪ ಪದಾಧಿಕಾರಿಗಳು ನ್ಯಾಯಾಲಯದ ಮೆಟ್ಟಿಲೇರುವಂತೆ ಮಾಡಿರುವ ಹಾಗೂ ಜಿಲ್ಲೆಯ ಜನರನ್ನು ಅಪಮಾನಿಸಿರುವ ಕಸಾಪ ಅಧ್ಯಕ್ಷ ಮಹೇಶ ಜೋಶಿಯವರು ಬಹಿರಂಗವಾಗಿ ಕ್ಷಮೆ ಕೇಳದಿದ್ದರೆ ಜಿಲ್ಲೆಗೆ ಕಾಲಿಡಲು ಬಿಡುವುದಿಲ್ಲ' ಎಂದು ರಾಷ್ಟ್ರೀಯ ಯುವ ಪ್ರಶಸ್ತಿ ಪುರಸ್ಕೃತರಾದ ಕಾರಸವಾಡಿ ಮಹದೇವು ಮತ್ತು ಕೀಲಾರ ಕೃಷ್ಣಗೌಡ ಎಚ್ಚರಿಕೆ ನೀಡಿದರು.

87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಯಶಸ್ಸಿಗೆ ಹಗಲಿರುಳು ದುಡಿದ ಕಸಾಪ ಜಿಲ್ಲಾ ಕಾರ್ಯಕಾರಿ ಸಮಿತಿಯನ್ನು ಏಕಾಏಕಿ ವಿಸರ್ಜಿಸಿದರು. ಸಮ್ಮೇಳನದ ಯಶಸ್ಸಿಗೆ ಸಹಕರಿಸಿದವರಿಗೆ ಒಂದು ಕೃತಜ್ಞತೆ ಸಲ್ಲಿಸಲಿಲ್ಲ, ಸಮ್ಮೇಳನದ ಸಂಚಾಲಕಿ ಮೀರಾ ಶಿವಲಿಂಗಯ್ಯ ಅವರಿಗೆ ಪ್ರತಿ ಹಂತದಲ್ಲೂ ತೊಂದರೆ ನೀಡಿ, ಅವಮಾನಿಸಿದ್ದಾರೆ. ನಿರಂಕುಶ ಪ್ರಭುತ್ವದಂತೆ ವರ್ತಿಸಿ ಮಂಡ್ಯ ಜಿಲ್ಲೆಗೆ ಅವಮಾನ ಮಾಡಿದ್ದಾರೆ' ಎಂದು ಆರೋಪಿಸಿದರು.

ಸಮ್ಮೇಳನದ ಆರಂಭದಿಂದಲೂ ಒಂದಲ್ಲ ಒಂದು ವಿವಾದಗಳನ್ನು ಜೋಶಿಯವರು ತೆಗೆದರು. ಸಮ್ಮೇಳನಾಧ್ಯಕ್ಷರಾಗಿ ಸಾಹಿತ್ಯೇತರರನ್ನು ಆಯ್ಕೆ ಮಾಡುವಂತೆ ಗಣ್ಯರು ಶಿಫಾರಸು ಪತ್ರ ಕೊಟ್ಟಿದ್ದಾರೆ ಎಂದು ಹೇಳುವ ಮೂಲಕ ಪರಿಷತ್ತಿನ

ಉದಯವಾಹಿನಿ ಚಿತ್ರ

ಪಾವಿತ್ರ್ಯತೆಗೆ ಕಳಂಕ ತಂದರು. ಸಮ್ಮೇಳನದ ಸ್ಥಳ ವಿವಾದಕ್ಕೆ ಜಿಲ್ಲಾಡಳಿತ ಕಾರಣ ಅಂತ ಹೇಳಿ ಗೊಂದಲ ಸೃಷ್ಟಿಸಿದರು. ಮದ್ಯಪಾನ- ಧೂಮಪಾನದ ಜೊತೆಗೆ ಮಾಂಸಾಹಾರವನ್ನು ಹೋಲಿಕೆ ಮಾಡಿ ನಿಷೇಧ ಹೇರುವ ಮೂಲಕ ಅವಾಂತರ ಸೃಷ್ಟಿಸಿದರು ಎಂದು ದೂರಿದರು.

ಸಮ್ಮೇಳನದ ಆಹ್ವಾನ ಪತ್ರಿಕೆಯಲ್ಲಿ ಜಿಲ್ಲೆಯ ಸಾಹಿತಿಗಳನ್ನು ಕಸಾಪ ಮಾಜಿ ಅಧ್ಯಕ್ಷರು, ಸಂಘಟಕರು, ಹೋರಾಟಗಾರರು ಮತ್ತು ಕನ್ನಡಪರ ಸಂಘಟನೆಗಳನ್ನು ನಿರ್ಲಕ್ಷಿಸಿದ ಜೋಶಿ ಅವರು ಹಿಟ್ಲರ್‌ನಂತೆ ವರ್ತಿಸಿದರು.

ತಮ್ಮ ಸ್ವಾರ್ಥ ಅಧಿಕಾರಕ್ಕಾಗಿ ಕಸಾಪ ಬೈಲಾವನ್ನು ತಿರುಚಿ, ತಮ್ಮನ್ನು ಪ್ರಶ್ನಿಸಿದವರನ್ನು ಕಸಾಪ ಸದಸ್ಯತ್ವದಿಂದ ತೆಗ

ಅಂತರಾಳದಿಂದ... EDITORIAL

ನಕ್ಸಲ್ ಮುಕ್ತವಾದಂತೆಯೇ, ಭಯಮುಕ್ತವಾಗಲಿ ಕರ್ನಾಟಕ

ಕೊನೆಗೂ ರಾಜ್ಯದ ನಾಲ್ವರು, ಹೊರ ರಾಜ್ಯದ ಇಬ್ಬರು ನಕ್ಸಲರು ಮುಖ್ಯಮಂತ್ರಿಯ ಸಮ್ಮುಖದಲ್ಲಿ ಶಸ್ತ್ರತ್ಯಜಿಸಿದ್ದು ಮುಖ್ಯವಾಹಿನಿಗೆ ಮರಳಿದ್ದಾರೆ. ಈ ಮೂಲಕ ಕರ್ನಾಟಕ ರಾಜ್ಯ ನಕ್ಸಲ್ ಮುಕ್ತ ರಾಜ್ಯವಾಗಿ ಗುರುತಿಸಲ್ಪಟ್ಟಿದೆ. ನೆರೆಯ ಆಂಧ್ರ, ತಮಿಳುನಾಡು, ಕೇರಳ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕ ರಾಜ್ಯದಲ್ಲಿ ನಕ್ಸಲ್ ಚಳವಳಿ ಆಳವಾಗಿ ಬೇರಿಳಿಸುವಲ್ಲಿ ವಿಫಲವಾಗಿದೆ. ಅದಕ್ಕೆ ಬೇರೆ ಬೇರೆ ಸಾಮಾಜಿಕ, ರಾಜಕೀಯ ಕಾರಣಗಳಿವೆ ಆಂಧ್ರದ ಪ್ರಭಾವವಿರುವ ಕೆಲವು ಭಾಗಗಳು ಮಾತ್ರ ನಕ್ಸಲ್ ಚಳವಳಿಗಾಗಿ ಗುರುತಿಸಲ್ಪಟ್ಟಿತ್ತು ಜಮೀನ್ದಾರರ ತೀವ್ರ ಶೋಷಣೆ, ಜಾತೀಯತೆ ಇತ್ಯಾದಿಗಳಿಂದ ಬಳಲಿ ಬೆಂಡಾಗಿರುವ ಜನರಲ್ಲಿ ಕೆಲವೇ ಕೆಲವರು ಅನಿವಾರ್ಯ ಎನ್ನುವ ಸ್ಥಿತಿಯಲ್ಲಿ ಈ ಹಿಂಸಾತ್ಮಕ ಚಳವಳಿಗೆ ಜಾರಿದರು. ಅಂತಹ ಅನಿವಾರ್ಯ ಸ್ಥಿತಿಯನ್ನು ನಿರ್ಮಾಣ ಮಾಡಿರುವುದು ನಮ್ಮದೇ ರಾಜಕೀಯ ಮತ್ತು ಸಾಮಾಜಿಕ ವ್ಯವಸ್ಥೆ ಎನ್ನುವ ಎಚ್ಚರ ನಮ್ಮಲ್ಲೂ ಇರಬೇಕು. ನಕ್ಸಲ್ ಚಳವಳಿಯ ಪ್ರಭಾವಕ್ಕೆ ಸಿಲುಕಿ ಭೂಗತರಾದವರಲ್ಲಿ ತಳಸ್ತರದ ಬಡ ಹುಡುಗರೇ ಹೆಚ್ಚಿನವರು. ಇವರಲ್ಲಿ ದೊಡ್ಡ ಸಂಖ್ಯೆಯ ಹುಡುಗರು ವಿಶೇಷ ವಿದ್ಯಾಭ್ಯಾಸವನ್ನು ಕೂಡ ಹೊಂದಿರಲಿಲ್ಲ. ಕುದುರೆ ಮುಖ ಉದ್ಯಾನವನದಿಂದ ಎತ್ತಂಗಡಿ ಕಾರ್ಯಕ್ರಮ ಪಶ್ಚಿಮಘಟ್ಟದಲ್ಲಿ ನಕ್ಸಲ್ ಹೋರಾಟಕ್ಕೆ ಕುಮ್ಮಕ್ಕು ನೀಡಿತು.

ಕರ್ನಾಟಕದ ಮಟ್ಟಿಗೆ, ಒಕ್ಕಲೆಬ್ಬಿಸುವುದರ ವಿರುದ್ಧದ ಹೋರಾಟ ಹಿಂಸೆಯ ರೂಪ ಪಡೆದದ್ದು ವ್ಯವಸ್ಥೆಗೆ ಅನುಕೂಲವನ್ನೇ ಮಾಡಿಕೊಟ್ಟಿತ್ತು. ಎಕೌಂಟರ್ ಹೆಸರಿನಲ್ಲಿ ಕೋವಿಯಿಂದಲೇ ಹೋರಾಟಗಾರರನ್ನು ಬಗ್ಗು ಬಡಿಯಲು ಸರಕಾರಕ್ಕೆ ಅನುಕೂಲವಾಯಿತು. ನಕ್ಸಲರ ಸಣ್ಣಪುಟ್ಟ ಹಿಂಸೆಯನ್ನೂ ಭೂತಗನ್ನಡಿಯಲ್ಲಿ ತೋರಿಸಿ, ತನ್ನ ಕೃತ್ಯಗಳನ್ನು ಪೊಲೀಸ್ ಪಡೆಗಳು ಸಮರ್ಥಿಸತೊಡಗಿದ್ದವು ಒಕ್ಕಲೆಬ್ಬಿಸುವುದರ ವಿರುದ್ಧ ನಾಡಿನಲ್ಲಿ ಪ್ರಜಾಸತ್ತಾತ್ಮಕವಾಗಿ ಜನರನ್ನು ಒಟ್ಟು ಸೇರಿಸಿ ಆಂದೋಲನವನ್ನು ವಿಸ್ತರಿಸಿದ್ದರೆ ಅದು ಇನ್ನಷ್ಟು ಪರಿಣಾಮಕಾರಿಯಾಗುತ್ತಿತ್ತು ಮತ್ತು ಒಕ್ಕಲೆಬ್ಬಿಸುವುದು ಸರಕಾರಕ್ಕೆ ಕಷ್ಟವಾಗುತ್ತಿತ್ತು ಬೆರಳಣಿಕೆಯ ಜನರು ಕೋವಿ ಕೈಗೆತ್ತಿಕೊಂಡಿರುವುದನ್ನೇ ನೆಪ ಮಾಡಿಕೊಂಡು ಕೂಂಬಿಂಗ್ ಹೆಸರಿನಲ್ಲಿ ಆದಿವಾಸಿಗಳ ಮೇಲೆ ದೌರ್ಜನ್ಯಗಳನ್ನು ಮುಂದುವರಿಸಿತು. ಇದೇ ಸಂದರ್ಭದಲ್ಲಿ ನಕ್ಸಲ್ ಪೀಡಿತ ಪ್ರದೇಶವೆಂದು ಆ ಭಾಗವನ್ನು ಘೋಷಿಸಿ ಕೆಲವು ಕಾಟಾಚಾರದ ಅಭಿವೃದ್ಧಿ ಕಾರ್ಯವನ್ನೂ ನಡೆಸತೊಡಗಿತ್ತು ಎನ್‌ಕೌಂಟರ್ ಹೆಸರಿನಲ್ಲಿ ಸ್ಥಳೀಯ ಗಿರಿಜನ ಹುಡುಗರ ಹೆಣಗಳು ಬೀಳತೊಡಗಿದಂತೆಯೇ, ಅಧಿಕಾರಿಗಳು ಅದಿವಾಸಿಗಳ ಅಳಲಿಗೆ ಕಿವಿಯಾದವರಂತೆ ನಟಿಸಿದರು. ಜೊತೆಗೆ ಗಿರಿಜನರ ಮೇಲೆ ನಡೆಯುತ್ತಿರುವ ಅರಣ್ಯಾಧಿಕಾರಿಗಳ ದೌರ್ಜನ್ಯಗಳಿಗೆ ಸಣ್ಣ ಮಟ್ಟಿನ ಕಡಿವಾಣ ಬಿತ್ತು ಎನ್ನುವುದೂ ಸುಳ್ಳಲ್ಲ. ಇತ್ತೀಚೆಗಷ್ಟೇ ವಿಕ್ರಮ್ ಗೌಡ ಎನ್ನುವ ಆದಿವಾಸಿ ತರುಣನ ಎಂಟರ್ ಮತ್ತೆ ಪೊಲೀಸ್ ಕಾರ್ಯಾಚರಣೆಗಳ ಬಗ್ಗೆ ಪ್ರಶ್ನೆಗಳನ್ನು ಹುಟ್ಟಿಸಿಹಾಕಿತು. ಆತನನ್ನು ಬಂಧಿಸುವ ಅವಕಾಶ ಪೊಲೀಸರಿಗಿದ್ದರೂ, ಕಾರಣವೇ ಇಲ್ಲದೆ ಪೊಲೀಸರು ನೇರವಾಗಿ ಗುಂಡು ಹಾರಿಸಿದ್ದಾರೆ ಎನ್ನುವ ಆರೋಪಗಳು ಕೇಳಿ ಬಂದಿತ್ತು. ಕಾಡಿನಲ್ಲಿ ಅಸಹಾಯಕ ಸ್ಥಿತಿಯಲ್ಲಿರುವ ಬೆರಳೆಣಿಕೆಯ ನಕ್ಸಲ್ ತರುಣರನ್ನೇ ಮುಂದಿಟ್ಟುಕೊಂಡು ಪಶ್ಚಿಮ ಘಟ್ಟವನ್ನು ರಣರಂಗವಾಗಿಸುವುದು ಎಷ್ಟು ಸರಿ? ಎಂಬ ಪ್ರಶ್ನೆಯೂ ಮುನ್ನೆಲೆಗೆ ಬಂದಿತ್ತು. ಇದೀಗ ಆ ಆರು ನಕ್ಸಲರೂ ಮುಖ್ಯವಾಹಿನಿಗೆ ಕಾಲಿಡುವ ನಿರ್ಧಾರವನ್ನು ತೆಗೆದುಕೊಳ್ಳುವ ಮೂಲಕ, ರಾಜ್ಯ ನಕ್ಸಲ್ ಮುಕ್ತವಾಗಿದೆ. ಆದರೆ, ಆದಿವಾಸಿಗಳು, ಗಿರಿಜನರು ತಳಸ್ತರದ ಬಡವರು ಇನ್ನಾದರೂ ಅರಣ್ಯ ಸಿಬ್ಬಂದಿಯಿಂದ, ಪೊಲೀಸ್ ಪಡೆಗಳಿಂದ ನೆಮ್ಮದಿಯಾಗಿ ಬದುಕುವ ವಾತಾವರಣ ನಿರ್ಮಾಣವಾಗಲಿದೆಯೇ? ಎನ್ನುವ ಪ್ರಶ್ನೆಗೆ ಇನ್ನೂ ಉತ್ತರ ದೊರಕಬೇಕಷ್ಟೇ. ರಾಜ್ಯ ನಕ್ಸಲರಿಂದ ಮುಕ್ತವಾಗುವುದು ಎಷ್ಟು ಮುಖ್ಯವೋ, ಆದಿವಾಸಿ ಜನರು ವ್ಯವಸ್ಥೆಯ ಭಯದಿಂದ ಮುಕ್ತವಾಗಿ ಬದುಕುವ ವಾತಾವರಣ ನಿರ್ಮಾಣವಾಗುವುದು ಕೂಡ ಅಷ್ಟೇ ಮುಖ್ಯ ಶರಣಾಗತರಾಗಿರುವ ಆರೂ ಜನರ ಹಿನ್ನೆಲೆಯನ್ನು ನಾವು ಗಮನಿಸಬೇಕಾಗಿದೆ. ಮುಂಡಗಾರು ಲತಾ, ಸುಂದರಿ ಕುತ್ತೂರು ಸೇರಿದಂತೆ ಅಷ್ಟೂ ಜನರು ಅತ್ಯಂತ ಹಿಂದುಳಿದ ಮತ್ತು ದಲಿತ ಸಮುದಾಯಕ್ಕೆ ಸೇರಿದವರು. ಬಹುತೇಕ ತರುಣ, ತರುಣಿಯರು ಕೂಲಿ ಕೆಲಸವನ್ನು ಮಾಡುತ್ತಾ ಬದುಕು ಸವೆಸುತ್ತಿದ್ದವರು. ತಮ್ಮ ಕುಟುಂಬದ ಮೇಲೆ, ಮನೆಗಳ ಮೇಲೆ ಅಧಿಕಾರಿಗಳು, ಸರಕಾರ ಎಸಗಿದ ದೌರ್ಜನ್ಯಗಳನ್ನು ಪ್ರಶ್ನಿಸುತ್ತಾ ಪ್ರತಿಭಟಿಸುತ್ತಾ ಅವರು ಹೋರಾಟದ ಕಣಕ್ಕೆ ಇಳಿದರು. ಪ್ರಜಾಸತ್ತಾತ್ಮಕವಾಗಿ ಹೋರಾಡುತ್ತಿದ್ದ ಅವರ ಮೇಲೆ ಕ್ರಿಮಿನಲ್ ಪ್ರಕರಣಗಳನ್ನು ಜಡಿದು ಅವರು ತಲೆಮರೆಸಿಕೊಳ್ಳುವ ಸ್ಥಿತಿ ನಿರ್ಮಾಣ ಮಾಡಿರುವುದು ಕೂಡ ಅಧಿಕಾರಿಗಳೇ ಅವರು ಮತ್ತು ಅವರ ಕುಟುಂಬದ ಮೇಲೆ ಅಧಿಕಾರಿಗಳು ಎಸಗಿದ ದೌರ್ಜನ್ಯದ ಮುಂದೆ, ಕೋವಿ ಹಿಡಿದು ಈ ತರುಣರು ಎಸಗಿದ ಹಿಂಸೆ ತೀರಾ ಅಲ್ಪ. ಇವರ್ಯಾರೂ ರಾಜಕೀಯ ದುರುದ್ದೇಶಗಳಿಗಾಗಿ ಅಥವಾ ಸ್ವಾರ್ಥ ಸಾಧನೆಗೆ, ಜನರನ್ನು ಲೂಟಿ ಮಾಡಲು ಕಾಡು ಸೇರಿಕೊಂಡವರಲ್ಲ. ಅವರು ಹಾದಿ ತಪ್ಪಲು ಸರಕಾರದ ಕೊಡುಗೆ ಬಹಳಷ್ಟಿದೆ. ಇದೀಗ ನಾಡಿಗೆ ಬಂದ ಅವರು ನೆಮ್ಮದಿಯಿಂದ ಬದುಕುವುದಕ್ಕೆ ಅವಕಾಶ ನೀಡಬೇಕು. ಈ ಮೂಲಕ, ಪಶ್ಚಿಮಘಟ್ಟದಲ್ಲಿ ಬದುಕುತ್ತಿರುವ ಉಳಿದ ಮಲೆಕುಡಿಯ ಯುವಕರಲ್ಲಿ ಸರಕಾರ ವಿಶ್ವಾಸವನ್ನು ತುಂಬಬೇಕು. ಮುಖ್ಯವಾಹಿನಿಗೆ ಸೇರಬಂದವರನ್ನು ನಾಡು ಅಷ್ಟೇ ಹೃದಯ ವೈಶಾಲ್ಯದಿಂದ ಸ್ವೀಕರಿಸದೇ ಇದ್ದರೆ, ಅವರು ನಾಡಿನಲ್ಲಿದ್ರೂ ಪ್ರತ್ಯೇಕವಾಗಿಯೇ ಉಳಿಯುತ್ತಾರೆ. ಈ ನಿಟ್ಟಿನಲ್ಲಿ ಸಮಾಜ ಅವರ ಜೊತೆಗೆ ನಿಲ್ಲಬೇಕು. ಮುಂದಿನ ದಿನಗಳಲ್ಲಿ ಯಾವ ಯುವಕರೂ ಹಿಂಸೆಯ ಕಡೆಗೆ ಮುಖ ಮಾಡಬಾರದು. ಪ್ರಜಾಸತ್ತಾತ್ಮಕ ಹೋರಾಟಗಳು ಬಲಪಡೆಯಬೇಕು.

ಒಕ್ಕಲೆಬ್ಬಿಸುವ ಸಂದರ್ಭದಲ್ಲಿ ಸರಕಾರ ತೋರಿಸಿದ ಬೇಜವಾಬ್ದಾರಿತನ, ಅರಣ್ಯ ಭಾಗದಲ್ಲಿ ಬದುಕುತ್ತಿದ್ದ ಗಿರಿಜನರ ಮೇಲೆ ಅರಣ್ಯ ಸಿಬ್ಬಂದಿಯ ದೌರ್ಜನ್ಯ ಇವೆಲ್ಲವು ಹಿಂಸಾತ್ಮಕ ಹೋರಾಟಕ್ಕೆ ಮುನ್ನುಡಿ ಬರೆಯಿತು. ಸಾಕೇತ್ ರಾಜನ್ ಅವರ ಹತ್ಯೆಯೊಂದಿಗೆ ಪಶ್ಚಿಮಘಟ್ಟದಲ್ಲಿ ನಕ್ಸಲ್ ವಿರೋಧಿ ಕಾರ್ಯಾಚರಣೆ ಭೀಕರ ರೂಪವನ್ನು ಪಡೆಯಿತು. ಈ ಎಕೌಂಟರ್ ಬಳಿಕ, ಕರ್ನಾಟಕದ ಗಡಿ ಭಾಗದಲ್ಲಿ ಪೊಲೀಸರ ಮೇಲಿನ ಬರ್ಬರ ದಾಳಿಗೂ ಕಾರಣವಾಯಿತು.

ಕಲಾ ಸಾಹಿತ್ಯ

ವೈ.ಕೆ. ಸಂಧ್ಯಾಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

ಮನಸೂರೆಗೊಂಡ ಸುಮನೋಹರ ರಾಮಾಯಣ ಚಿತ್ರಣ

ನೃತ್ಯರೂಪಕದ ಆಕರ್ಷಣೆಯಾಗಿದ್ದ ಕಣ್ಸೆಳೆದ ಸುಂದರ ವೇಷಭೂಷಣ, ಪ್ರಸಾದನ, ರಮ್ಯ ಆಂಗಿಕಾಭಿನಯ, ಚಲನೆ- ಮುಖಾಭಿವ್ಯಕ್ತಿಗಳು ಸೂಕ್ತವಾಗಿದ್ದವು. ಹಾಗೇ ಪಾತ್ರಗಳಿಗೆ ನರ್ತಕರ ಸೂಕ್ತ ಆಯ್ಕೆ, ಮಾರ್ಗದರ್ಶನ ಚೆನ್ನಿದ್ದು, ಪ್ರಯೋಗ ಸಫಲವಾಗಿತ್ತು. ಇದಕ್ಕಾಗಿ ಸಾಧನಾ ಡ್ಯಾನ್ಸ್ ಸೆಂಟರಿನ ಎಲ್ಲ ಶಿಷ್ಯರಿಗೆ ಮತ್ತು ಇದನ್ನು ಅಪಾರ ಶ್ರದ್ಧೆ- ಬದ್ಧತೆ -ಪರಿಶ್ರಮದಿಂದ ಸೊಗಸಾಗಿ ರಂಗಕ್ಕೆ ತಂದ ಗುರು ಭಾವನಾ ಅವರಿಗೆ ಅಭಿನಂದನೆಗಳು.

- ಉದಯವಾಹಿನಿ, ವಿಶೇಷ

ನಮ್ಮ ಭಾರತೀಯ ಪರಂಪರೆಯ ಅಸ್ಮಿತೆಯಾದ ರಾಮಾಯಣ ಮತ್ತು ಮಹಾಭಾರತದ ಕಥೆಗಳು ನಮ್ಮ ಸಾಂಸ್ಕೃತಿಕ ಜಗತ್ತಿನ ಒಂದು ಅವಿಭಾಜ್ಯ ಅಂಗವಾಗಿ ಹಾಸುಹೊಕ್ಕಾಗಿದೆ. ಸಂಗೀತ-ನೃತ್ಯ-ನಾಟಕ ಯಾವುದೇ ಕಲಾಪ್ರಕಾರದ ಹೂರಣ ಈ ಮಹಾಕಾವ್ಯಗಳನ್ನು ಬಿಟ್ಟು ಬೇರಿಲ್ಲ. ಎಲ್ಲಾ ಕಥೆಗಳ ಆಗರ ಅವು. ಎಲ್ಲಕ್ಕೂ ಸ್ಫೂರ್ತಿ-ಪ್ರೇರಣೆ. ಅದರಲ್ಲೂ ನೃತ್ಯಗಳಲ್ಲಿ ಇವು ಬಹು ಬಳಕೆಯಲ್ಲಿದ್ದು ಆಕರ್ಷಣೆಯ ಕೇಂದ್ರಬಿಂದುವೂ ಆಗಿದೆ. ರಾಮಾಯಣ ಮಹಾಭಾರತದ ಕಥಾವಸ್ತುಗಳನ್ನು ಕಾಲಾನುಕಾಲದಿಂದ ಯಶಸ್ವಿಯಾಗಿ ನೃತ್ಯಗಳಲ್ಲಿ ಅಳವಡಿಸಿಕೊಳ್ಳಲಾಗಿದೆ. ಜನಜನಿತ ಕಥೆಯಾಗಿದ್ದು, ಇವು ಅನೇಕ ತಿರುವುಗಳನ್ನು, ಸ್ವಾರಸ್ಯವಾದ ಕಥಾ ಓಟವನ್ನು ಉಳ್ಳದ್ದಾದ್ದರಿಂದ ಇವುಗಳು ಬಹು ಜನಪ್ರಿಯ ಕೂಡ. ಅದರಂತೆ ಇತ್ತೀಚೆಗೆ ಜಯನಗರದ ವಿವೇಕ ಸಭಾಂಗಣದಲ್ಲಿ ಸಾಧನ ನೃತ್ಯ ಶಾಲೆಯ 11 ನೇ ವಾರ್ಷಿಕೋತ್ಸವದ ಪ್ರಯುಕ್ತ ಪ್ರದರ್ಶಿತವಾದ 'ರಾಮಾಯಣ' ನೃತ್ಯರೂಪಕ ಸೊಗಸಾಗಿ ಮೂಡಿಬಂದು, ನೋಡುಗರನ್ನು ಆಕರ್ಷಿಸಿತು.

ತೆರೆ ಸರಿದೊಡನೆ ಸರ್ವರ ಪ್ರಥಮ ದೃಷ್ಟಿಯನ್ನು ಆಕರ್ಷಿಸಿದ್ದು ಶ್ರೀರಾಮ-ಲಕ್ಷ್ಮಣ-ಸೀತಾ ಸಮೇತನಾದ ಆಂಜನೇಯ ಮೂರ್ತಿ. ಆಲಂಕೃತ ಪ್ರಭಾವಳಿಯ ಏಕಚ್ಛತ್ರದಡಿ ದಿವ್ಯಮೂರ್ತಿಗಳು ಅನಾವರಣಗೊಂಡ ಹೃನ್ಮನ ತಣಿಸುವ ದೃಶ್ಯ ಆಕರ್ಷಿಸಿತು.

ಉದಯವಾಹಿನಿ ಚಿತ್ರ

ಇಡೀ ರಾಮಾಯಣದ ಕಥೆ, ಘಟನೆಗಳಲ್ಲಿ ಅರಳುತ್ತ, ಸಂಚಾರಿ ಕಥಾನಕಗಳಲ್ಲಿ, ಸುಂದರ ದೃಶ್ಯಗಳಲ್ಲಿ ಸಾಗುತ್ತ ದಶರಥ ಮಹಾರಾಜನ ಪುತ್ರಕಾಮೇಷ್ಟಿ ಯಾಗದಿಂದ ನೃತ್ಯರೂಪಕ ಪ್ರಾರಂಭವಾಯಿತು. ಪಾಯಸಪ್ರಾಪ್ತಿ, ಶ್ರೀರಾಮಾದಿಗಳ ಜನನ, ಯಾಗರಕ್ಷಣೆಗಾಗಿ ವಿಶ್ವಾಮಿತ್ರರು ರಾಮ-ಲಕ್ಷ್ಮಣರನ್ನು ತಮ್ಮೊಡನೆ ಕರೆದೊಯ್ಯುವುದು, ಯಜ್ಞಕ್ಕೆ ಅಡ್ಡಿ ಉಂಟುಮಾಡಿದ ರಕ್ಕಸರ ಸಂಹಾರ, ಅಹಲ್ಯಾ ಶಾಪ ವಿಮೋಚನಾ, ಸೀತಾ ಸ್ವಯಂವರದವರೆಗೂ ಎಲ್ಲ ಸನ್ನಿವೇಶಗಳೂ ನಾಟಕೀಯ ಆಯಾಮದಲ್ಲಿ ಕುತೂಹಲಭರಿತವಾಗಿ ಸಾಗಿದವು. ಸ್ವಯಂವರಕ್ಕೆ ಬಂದ ವಿವಿಧ ರಾಜರು ಶಿವಧನಸ್ಸನ್ನು ಎತ್ತಲು ವಿಫಲರಾದ ದೃಶ್ಯ ಮತ್ತು ಶ್ರೀರಾಮನು ಪಣವನ್ನು ಗೆದ್ದು ಸುಂದರಿ ಸೀತೆಯನ್ನು ವರಿಸಿದ ದೃಶ್ಯಗಳು ಸುಂದರವಾಗಿ ಮೂಡಿಬಂದವು.

ಹೃದಯಂಗಮ ರಾಮಾಯಣ ನೃತ್ಯರೂಪಕ

ಸಂಕ್ಷಿಪ್ತ ಗತಿಯಲ್ಲಿ ಚುರುಕಾಗಿ ಸಾಗಿದ ಕಥಾನಕ, ಎಲ್ಲೂ ಯಾಂತ್ರಿಕವೆನಿಸದೆ, ಕೈಕೇಯಿಯ ಬಯಕೆಯಂತೆ ನವ ವಿವಾಹಿತ ರಾಮ, ಲಕ್ಷ್ಮಣ ಮತ್ತು ಸೀತೆಯೊಡನೆ ವನವಾಸಕ್ಕೆ ತೆರಳುವುದು, ಗುಹನ ಸಹಾಯದಿಂದ ಸರಯೂ ನದಿ ದಾಟಿ, ಅರಣ್ಯ ಜೀವನದಲ್ಲಿ ದಿನಗಳನ್ನು ಕಳೆಯುವುದು, ಶೂರ್ಪನಖಾ ಪ್ರಸಂಗ, ಮಾಯಾಜಿಂಕೆಯನ್ನು ಬಯಸಿ, ಸೀತೆ ರಾವಣನಿಂದ ಅಪಹರಿಸಲ್ಪಟ್ಟು ಲಂಕೆ ಸೇರಿ, ಆಂಜನೇಯನ ಭೇಟಿಯಿಂದ ಧೈರ್ಯ ಪಡೆದು, ಕಡೆಗೆ ರಾಮ-ರಾವಣರ ಯುದ್ಧ, ಅಗ್ನಿಪ್ರವೇಶ ಕೊನೆಯಲ್ಲಿ ಶ್ರೀರಾಮ ಪಟ್ಟಾಭಿಷೇಕದ ಸುಖಾಂತ್ಯದ ಮಂಗಳಕರ ಸನ್ನಿವೇಶದೊಂದಿಗೆ ಸುಸಂಪನ್ನಗೊಂಡಿತು.

ಸಾಂಪ್ರದಾಯಕ ಕಥೆಗೆ ಎಲ್ಲೂ ಭಂಗ ಬಾರದಂತೆ, ಅದರ ಕೆಲವು ಆಯ್ದ ಭಾಗಗಳನ್ನು ಕೇಂದ್ರೀಕರಿಸಿ ಹೆಣೆದ ಸುಮಾರು ಒಂದು ಘಂಟೆಯ ಕಾಲಾವಧಿಯ ನೃತ್ಯರೂಪಕ ಮನಸೆಳೆಯಿತು. ಸಾಧನಾಶಾಲೆಯ ವಿದ್ಯಾರ್ಥಿಗಳು ಸಮಯೋಚಿತ ಹದವಾದ ಅಭಿನಯದಿಂದ ಗಮನ ಸೆಳೆದರು. ಇಡೀ ಕಥೆಯನ್ನು ನಿರೂಪಿಸುವ ಹಿನ್ನಲೆಯ ಗಾಯನಕ್ಕೆ ಅನುಗುಣವಾಗಿ ಪಾತ್ರಗಳು-ನರ್ತಕರು ಎಲ್ಲೂ ಅರಕೆ ತೋರದಂತೆ ಪರಿಣಾಮಕಾರಿಯಾಗಿ ತಮ್ಮರಮ್ಯಾಭಿನಯದಿಂದ ಸಮಗ್ರ ರಾಮಾಯಣದ ಕಥೆಯನ್ನು ಹರಿತವಾಗಿ ಕಟ್ಟಿಕೊಟ್ಟರು. ಪೂರಕ ಧ್ವನಿ ಪರಿಣಾಮಗಳು ಹದವಾಗಿದ್ದವು.

ಸೀತೆಯ ಪಾತ್ರವನ್ನು ಸುಮನೋಹರವಾಗಿ ನಿರ್ವಹಿಸಿ, ತಮ್ಮ ಪರಿಕಲ್ಪನೆಯ ಎರಕದಲ್ಲಿ ರೂಪಕವನ್ನು ಯಶಸ್ವಿಯಾಗಿ ಮುನ್ನಡೆಸಿಕೊಂಡು ಸಾಗಿದ ಗುರು ಭಾವನಾ ಅವರ ಕಲಾತ್ಮಕ ನಿರ್ದೇಶನದ ಆಯಾಮ ದೃಗ್ಗೋಚರವಾಗಿತ್ತು.

ಚಳಿಗಾಲದಲ್ಲಿ ಕಿಡ್ನಿ ಬಗ್ಗೆ ಇರಲಿ ಕಾಳಜಿ

- ಉದಯವಾಹಿನಿ, ಬೆಂಗಳೂರು

ಸಾಮಾನ್ಯವಾಗಿ ನಾವು ನೀರಿನ ಕೊರತೆ, ಅತಿಯಾದ ಉಪ್ಪು ಸೇವನೆ, ಬಿಸಿ ಆಹಾರ ಮತ್ತು ಅತಿಯಾದ ಚಹಾ-ಕಾಫಿ ಸೇವನೆ ಮುಂತಾದ ವಿಷ್ಯಗಳ ಬಗ್ಗೆ ಗಮನ ಹರಿಸುವುದಿಲ್ಲ, ಇದು ಮೂತ್ರಪಿಂಡಗಳಿಗೆ ಹಾನಿಯನ್ನುಂಟುಮಾಡುತ್ತದೆ ಮತ್ತು ವೈದ್ಯರ ಸಲಹೆಯ ಬಗ್ಗೆ ನಮಗೆ ತಿಳಿಸಿ ಹಾನಿಕಾರಕ ಮತ್ತು ಅವುಗಳನ್ನು ಸರಿಪಡಿಸಲು ಸುಲಭವಾದ ಮಾರ್ಗಗಳು.ಮೂತ್ರಪಿಂಡವು ದೇಹದ ಪ್ರಮುಖ ಭಾಗವಾಗಿದೆ, ಇದು ದೇಹದಿಂದ ಹಾನಿಕಾರಕ ವಿಷವನ್ನು ತೆಗೆದುಹಾಕುವ ಕೆಲಸ ಮಾಡುತ್ತದೆ.

ಈ ಹುರುಳಿ-ಆಕಾರದ ಅಂಗವು ನಿಮ್ಮ ರಕ್ತವನ್ನು ಶೋಧಿಸುತ್ತದೆ ಮತ್ತು ಎಲೆಕ್ಟ್ರೋಲೈಟ್‌ಗಳ ಸಮತೋಲನವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ಆದ್ದರಿಂದ, ಮೂತ್ರಪಿಂಡಗಳನ್ನು ಆರೋಗ್ಯವಾಗಿಡುವುದು ಬಹಳ ಮುಖ್ಯ. ಮೂತ್ರಪಿಂಡದ ಅನಾರೋಗ್ಯಕ್ಕೆ ಹಲವು ಕಾರಣಗಳಿವೆ. ಇದು ವಿವಿಧ ರೋಗಗಳಿಗೆ ಕಾರಣವಾಬಹುದು. ಅದರಲ್ಲೂ ಚಳಿಗಾಲದಲ್ಲಿ ಕಿಡ್ನಿಯ ಆರೋಗ್ಯಕ್ಕೆ ಹಾನಿಕಾರಕವಾದ ಕೆಲವೊಂದು ಅಭ್ಯಾಸಗಳನ್ನು ನಾವು ನಮಗರಿವಿಲ್ಲದೆಯೇ ಆಳವಡಿಸಿಕೊಳ್ಳುತ್ತೇವೆ. ಅವುಗಳ ಬಗ್ಗೆ ನಾವಿಲ್ಲಿ ತಿಳಿಯೋಣ.

ನೀರಿನ ಕೊರತೆ: ಕೌಶಾಂಬಿಯ ಯಶೋದಾ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ನೆಫ್ರಾಲಜಿಯ ಹಿರಿಯ ಸಲಹೆಗಾರ ಡಾ.ಪ್ರಜಿತ್ ಮಜುಂದಾರ್ ಪ್ರಕಾರ, ಚಳಿಗಾಲದಲ್ಲಿ ಚಳಿಯಿಂದ ಬಾಯಾರಿಕೆ ಕಡಿಮೆಯಾಗುತ್ತದೆ, ಇದರಿಂದ ಜನರು ಕಡಿಮೆ ನೀರು ಕುಡಿಯುತ್ತಾರೆ. ಆದರೆ ಈ ಅಭ್ಯಾಸವು ಮೂತ್ರಪಿಂಡಗಳಿಗೆ ತುಂಬಾ ಹಾನಿಕಾರಕವಾಗಿದೆ, ಏಕೆಂದರೆ ನೀರಿನ ಕೊರತೆಯು ಮೂತ್ರಪಿಂಡಗಳ ಮೇಲೆ ಹೆಚ್ಚುವರಿ ಒತ್ತಡವನ್ನು ಉಂಟುಮಾಡುತ್ತದೆ ಮತ್ತು ಅದರ ಕಾರ್ಯನಿರ್ವಹಣೆಗೆ ಅಡ್ಡಿಯಾಗಬಹುದು. ಚಳಿಗಾಲದಲ್ಲಿ ನಿಮಗೆ ಬಾಯಾರಿಕೆಯಾಗದಿರಬಹುದು ಆದರೆ ದೇಹವನ್ನು ತೇವಾಂಶದಿಂದ ಇಡಲು ನೀರನ್ನು ಕುಡಿಯುವುದು ಬಹಳ ಮುಖ್ಯ. ದಿನಕ್ಕೆ ಕನಿಷ್ಠ 8 ರಿಂದ 10 ಗ್ಲಾಸ್ ನೀರು ಕುಡಿಯಿರಿ. ಇದು ಮೂತ್ರಪಿಂಡಗಳನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ ಮತ್ತು ದೇಹದಿಂದ ವಿಷವನ್ನು ತೆಗೆದುಹಾಕುತ್ತದೆ.



ಅತಿಯಾದ ಚಹಾ ಮತ್ತು ಕಾಫಿ ಸೇವನೆ: ಚಹಾ ಮತ್ತು ಕಾಫಿಯ ಸೇವನೆಯು ಚಳಿಗಾಲದಲ್ಲಿ ಹೆಚ್ಚಾಗುತ್ತದೆ, ಅವುಗಳ ಅತಿಯಾದ ಸೇವನೆಯು ದೇಹದ ನಿರ್ಜಲೀಕರಣಕ್ಕೆ ಕಾರಣವಾಗಬಹುದು, ಏಕೆಂದರೆ ಅವುಗಳು ಕೆಫೀನ್ ಅನ್ನು ಹೊಂದಿರುತ್ತವೆ, ಇದು ದೇಹದಲ್ಲಿನ ನೀರನ್ನು ಕಡಿಮೆ ಮಾಡುತ್ತದೆ. ಇದು ಮೂತ್ರಪಿಂಡಗಳಿಗೆ ಒಳ್ಳೆಯದಲ್ಲ.

ಚಹಾ ಮತ್ತು ಕಾಫಿಯ ಬದಲಿಗೆ, ಗಿಡಮೂಲಿಕೆ ಚಹಾ ಅಥವಾ ಎಳ ನೀರಿನಂತಹ ನೈಸರ್ಗಿಕ ಪಾನೀಯಗಳನ್ನು ಸೇವಿಸಿ, ಇದು ದೇಹವನ್ನು ತೇವಾಂಶದಿಂದ ಇಡುವುದಲ್ಲದೆ ಮತ್ತು ಮೂತ್ರಪಿಂಡಗಳಿಗೆ ಪ್ರಯೋಜನಕಾರಿಯಾಗಿದೆ.

ಅತ್ಯಂತ ಬಿಸಿ ಆಹಾರಗಳ ಬಳಕೆ:ಚಳಿಗಾಲದಲ್ಲಿ, ಜನರು ಸಾಮಾನ್ಯವಾಗಿ ಬಿಸಿ ಬಿಸಿಯಾಗಿರುವ ಆಹಾರ ಮತ್ತು ಪಾನೀಯಗಳನ್ನು ಇಷ್ಟಪಡುತ್ತಾರೆ.

ರಾಜಕೀಯ ಶಕ್ತಿ ಕುಗ್ಗಿಸಲು ಬಿಜೆಪಿಗರ ಹುನ್ನಾರ: ಟೈಗರ್

ದಲಿತ ನಾಯಕರಿಗೆ ಧಮನ ಮಾಡುವ ಹುನ್ನಾರ ವ್ಯವಸ್ಥಿತ ಪಿತೂರಿ ಬಿಜೆಪಿ, ಸಂಘ ಪರಿವಾರ ಮಾಡುತ್ತಿದೆ: ಟೈಗರ್ ಆರೋಪ

• ಉದಯವಾಹಿನಿ,ಚಿಂಚೋಳಿ

ದಲಿತ ನಾಯಕರಿಗೆ ಖರ್ಗೆ ಕುಟುಂಬವನ್ನು ರಾಜಕೀಯವಾಗಿ ಧಮನ ಮಾಡುವ ಹುನ್ನಾರ ವ್ಯವಸ್ಥಿತ ಪಿತೂರಿ ಸಂಘ ಪರಿಹಾರ, ಬಿಜೆಪಿಗರು ಮಾಡುತ್ತಿದ್ದಾರೆ, ಇದನ್ನು ನಿಲ್ಲಿಸಿ ಇಲ್ಲಾದಿದ್ದರೆ ಬಿಜೆಪಿ ಶಾಸಕರುಗಳ ಮತ್ತು ಮುಖಂಡರ ಮನೆಗಳ ಎದುರು ದಲಿತಪರ ಸಂಘಟನೆಗಳು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್ ಎಚ್ಚರಿಕೆ ನೀಡಿದ್ದಾರೆ.

ಉದಯವಾಹಿನಿ ಚಿತ್ರ

ತನಿಖೆ ಮುಗಿಯುವ ವರೆಗೆ ಸುಮ್ಮನೆ ಕೊಡಿ

ಪಟ್ಟಣದ ಪ್ರವಾಸಿ ಮಂದಿರದಲ್ಲಿ ದಲಿತಪರ ಸಂಘಟನೆಗಳಿಂದ ಕರೆದ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿನ್ ಪಂಚಾಳ ಕುಟುಂಬಕ್ಕೆ ನ್ಯಾಯ ದೊರಕಲಿ ಈಗಾಗಲೇ ಸಿಒಡಿಯವರು ಪಾರದರ್ಶಕವಾಗಿ ತನಿಖೆ ಮಾಡುತ್ತಿದ್ದು ತನಿಖೆ ವರದಿ ಬಂದ ನಂತರ ತಪ್ಪಿಸ್ಥರಿಗೆ ಕಾನೂನು ಕ್ರಮಕೈಗೊಳ್ಳತ್ತಾರೆ ತನಿಖೆ ನಡೆಯುವ ಸಂದರ್ಭದಲ್ಲಿಯೇ ಕಲಬುರ್ಗಿ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರ ರಾಜೀನಾಮೆ ಬಿಜೆಪಿ ಯವರು ಕೇಳುವುದು ಎಷ್ಟರ ಮಟ್ಟಿಗೆ ಸರಿಯಿದೆ.

ಬಿಜೆಪಿ ಗರು ಸುಳ್ಳು ಆರೋಪ ಮಾಡಿ ಪ್ರಿಯಾಂಕ್ ಖರ್ಗೆ ಮನೆ ಮುತ್ತಿಗೆ ಹಾಕುವುದು ಪ್ರತಿಭಟನೆ ಮಾಡುವುದು ಒಳ್ಳೆದಲ್ಲಾ ಈಶ್ವರಪ್ಪ ಪ್ರಕರಣವೆ ಬೇರೆ ಸಚಿನ್ ಪಂಚಾಳ ಪ್ರಕರಣವೆ ಬೇರೆ ಈಶ್ವರಪ್ಪ ಪ್ರಕರಣದಲ್ಲಿ ನೇರವಾಗಿ ಆಗಿನ ಸಚಿವ ಈಶ್ವರಪ್ಪ ಹೆಸರು ಪ್ರಸ್ತಾಪಿಸಲಾಗಿತ್ತು ಆದರೆ ಸಚಿನ್ ಪಂಚಾಳ ಬರೆದ ಡೆತ್‌ನೋಟ್‌ನಲ್ಲಿ ಎಲ್ಲಿಯೂ ಪ್ರಿಯಾಂಕ್ ಖರ್ಗೆ ಹೆಸರಿಲ್ಲ ಅವರ ಬೆಂಬಲಿಗರೆಂದು ಇದ್ದು ಬೆಂಬಲಿಗರ ಮೇಲೆ ಈಗಾಗಲೇ ಪ್ರಕರಣ ದಾಖಲಾಗಿಸಲಾಗಿದೆ ಆದರಂತೆ ಕಾನೂನು ಕ್ರಮಕೈಗೊಳ್ಳಲಾಗುವುದು.

ಪ್ರಿಯಾಂಕ್ ಖರ್ಗೆಯವರು ಸ್ವತಃ ಸಿಎಂಗೆ ಗೃಹ ಸಚಿವರಿಗೆ ಪಾರದರ್ಶಕವಾಗಿ ತನಿಖೆ ನಡೆಸಿ ಸಚಿನ್ ಕುಟುಂಬಕ್ಕೆ ನ್ಯಾಯ ದೊರಕಿಸಿಕೊಡುವಂತೆ ಪತ್ರ ಬರೆದಿದ್ದಾರೆ, ತನಿಖೆ ಮೊದಲೆ ಬಿಜೆಪಿಗರು ಸಂಘ ಪರಿವಾರದವರು ರಾಜಿನಾಮೆ ಕೇಳುವುದು ನೋಡಿದರೆ ಪ್ರಿಯಾಂಕ್ ಖರ್ಗೆಯವರ ಏಳಿಗ್ಗೆ ಅವರು ರಾಜ್ಯದ ಪಂಚಾಯತ್ ರಾಜ್, ಐಟಿಬಿಟಿ ಸಚಿವರಾಗಿ ರಾಜ್ಯದಲ್ಲಿ ಉದ್ಯೋಗ ಸೃಷ್ಟಿ ಮಾಡುವುದು ರಾಜ್ಯದ ಅಭಿವೃದ್ಧಿ ಮಾಡುವುದು ಮತ್ತು ಜಿಲ್ಲೆಯಲ್ಲಿ ನಡೆಯುವ ಎಲ್ಲಾ ಅಕ್ರಮ ಚಟುವಟಿಕೆಗಳಿಗೆ ಬ್ರೇಕ್ ಹಾಕಿರುವುದು ಬಿಜೆಪಿಗರಿಗೆ ಸಹಿಸಿಕೊಳ್ಳಲು ಆಗುತ್ತಿಲ್ಲ ಎಂಬುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ.

ಬಿಜೆಪಿಗರು ಮೃತರ ಮನೆಯಿಂದ ರಾಜಕೀಯ ಮಾಡುವುದು ನಾಚಿಕೆಯಾಗಬೇಕು, ಪ್ರಿಯಾಂಕ್ ಖರ್ಗೆಯವರ ನಡೆ, ನುಡಿ, ಆಚಾರ, ವಿಚಾರ, ಬುದ್ಧ ಬಸವ ಅಂಬೇಡ್ಕರ್ ತತ್ವ ಸಿದ್ಧಾಂತಗಳು ಪಾಲನೆ ಮಾಡು ವುದು ಬಿಜೆಪಿಗರಿಗೆ ಸಹಿಸಲು ಆಗುತ್ತಿಲ್ಲ, ಬಿಜೆಪಿಗರು ಖರ್ಗೆ ಕುಟುಂಬದ ಬಗ್ಗೆ ಅಪಪ್ರಚಾರ ಮಾಡಿ ರಾಜಕೀಯವಾಗಿ ಹಿನ್ನಡೆ ಮಾಡುವ ಪ್ರಯತ್ನ ಬಿಜೆಪಿಯವರು ಮಾಡುತ್ತಿದ್ದಾರೆ, ಬಿಜೆಪಿಯವರ ಪ್ರವೃತ್ತಿ ಹೀಗೆ ಮುಂದುವರೆದಿದರೆ ರಾಜ್ಯಾದ್ಯಂತ ದಲಿತಪರ ಸಂಘಟನೆಗಳು ಬಿದಿಗಿಳಿದು ಬಿಜೆಪಿ ಶಾಸಕರ ಮುಖಂಡರ ಮನೆಗಳ ಎದುರು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು.

ಪ್ರಿಯಾಂಕ್ ಖರ್ಗೆ ಯಾವುದೇ ತಪ್ಪು ಮಾಡಿಲ್ಲ ಅವರು ರಾಜೀನಾಮೆ ಕೊಡುವ ಪ್ರಶ್ನೆಯಿಲ್ಲ,ತನಿಖೆ ಪಾರದರ್ಶಕವಾಗಿ ನಡೆಯುತ್ತಿದೆ ತನಿಖೆ ಮುಗಿಯುವವರೆಗೆ ಸುಮ್ಮನೆ ಕೊಡಿ ತಪ್ಪಿಸ್ಥರ ವಿರುದ್ಧ ಕ್ರಮವಾಗುತ್ತದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಗೋಪಾಲ ರಾಂಪೂರೆ, ಕಾಶಿನಾಥ ಸಿಂದೆ, ಜಗದೇವ ಗೌತಮ್, ಒಮನರಾವ ಕೊರವಿ, ಪಾಂಡುರಂಗ ಲೋಡನೂರ, ರಾಜಶೇಖರ ಹೊಸಮನಿ, ರಾಜಕುಮಾರ ಕೊಳ್ಳೂರ ಇದ್ದರು.

> ಪ್ರಿಯಾಂಕ್ ಖರ್ಗೆಯವರ ನಡೆ, ನುಡಿ, ಆಚಾರ, ವಿಚಾರ, ಬುದ್ಧ ಬಸವ ಅಂಬೇಡ್ಕರ್ ತತ್ವ ಸಿದ್ಧಾಂತಗಳು ಪಾಲನೆ ಮಾಡುವುದು ಬಿಜೆಪಿಗರಿಗೆ ಸಹಿಸಲು ಆಗುತ್ತಿಲ್ಲ, ಪ್ರಿಯಾಂಕ್ ಖರ್ಗೆಯವರು ವಿರೋಧ ಪಕ್ಷದಲ್ಲಿದಾಗ ಬಿಜೆಪಿಗರ ಆಕ್ರಮಗಳಾದ ಬಿಟ್ ಕೋಯಿನ್ ಹಗರಣ, ಪಿಎಸ್‌ಐ ಹಗರಣ, ಕೊವೀಡ್ ಹಗರಣ, ಕೆಕೆಆರ್‌ಡಿಬಿ ಹಗರಣ ಇತ್ಯಾದಿಗಳು ಹೊರತಂದಿದ್ದಾರೆ ಈಗ ಬಿಜೆಪಿಗರು ಜೈಲಿಗೆ ಹೋಗುವ ಸಮಯ ಬಂದಿರುವುದರಿಂದ ಪ್ರಿಯಾಂಕ್ ಖರ್ಗೆಯವರಿಗೆ ಟಾರ್ಗೆಟ್ ಮಾಡಿ ರಾಜಕೀಯ ಶಕ್ತಿ ಕುಗ್ಗಿಸುವ ವ್ಯವಸ್ಥಿತ ಹುನ್ನಾರ ಪಿತೂರಿ ಬಿಜೆಪಿಗರು ಸಂಘ ಪರಿವಾರ ಮಾಡುತ್ತಿದೆ, ಇದನ್ನು ದಲಿತಪರ ಸಂಘಟನೆಗಳು ಸುಮ್ಮನೆ ಕುಳಿತುಕೊಳ್ಳದೆ ಬರುವ ದಿನಗಳಲ್ಲಿ ಬೃಹತ್ ಪ್ರತಿಭಟನೆಗೆ ಸಿದ್ದರಾಗುತ್ತೇವೆ
> –ಆನಂದಕುಮಾರ ಟೈಗರ್, ಅಧ್ಯಕ್ಷರು ಪುರಸಭೆ ಚಿಂಚೋಳಿ

ಅಂಬೇಡ್ಕರ್ ಬಗ್ಗೆ ಅಪಮಾನ ಹೇಳಿಕೆ ನೀಡುವರ ವಿರುದ್ಧ ಅಂಬೇಡ್ಕರ್ ಸಂವಿಧಾನದಿಂದಲೆ ಕ್ರಮ

• ಉದಯವಾಹಿನಿ,ಚಿಂಚೋಳಿ



ಅಂಬೇಡ್ಕರ್ ಬಗ್ಗೆ ದಂದ್ವ ಹೇಳಿಕೆ ಅಪಮಾನ ಮಾಡು ವವರ ವಿರುದ್ಧ ಅಂಬೇಡ್ಕರ್ ಅವರೆ ರಚಿಸಿದ ಸಂವಿಧಾನ ಬದ್ಧ ಕಾಯ್ದೆ ಕಾನೂನುಗಳ ಅನ್ವಯ ಅವರ ವಿರುದ್ಧ ಪ್ರಧಾನ ಮಂತ್ರಿಗಳು, ರಾಷ್ಟ್ರಪತಿಗಳು ಕ್ರಮ ಜರುಗಿಸಬೇಕು ಎಂದು ಸಮಾಜ ಸೇವಕ ರಮೇಶ ಯಾಕಾಪೂರ ಒತ್ತಾಯಿಸಿದರು.

ಎಂಎಲ್‌ಸಿ ಬಿ.ಕೆ.ಹರಿಪ್ರಸಾದ್ ಅವರಿಗೆ ಪತ್ರ ಬರೆದು ತಿಳಿಸಿದ ಅವರು, ಸಂಸತ್ತಿನಲ್ಲಿ ಕೇಂದ್ರ ಗೃಹ ಸಚಿವ ಅಮಿತಶಾರವರ ಹೇಳಿಕೆ ಹಿನ್ನಲೆಯಲ್ಲಿ ಎಂಎಲ್‌ಸಿ ಬಿ.ಕೆ. ಹರಿಪ್ರಸಾದ್ ಅವರೆ ತಾವು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ್ದು ಅಂಬೇಡ್ಕರ ರವರನ್ನು ಸೋಲಿಸಿದ್ದು ಕಾಂಗ್ರೇಸ್ ಹಾಗೂ ಅವರ ಅಂತ್ಯಕ್ರೀಯೆಗೆ ದೆಹಲಿಯಲ್ಲಿ ಸ್ಥಳ ನೀಡಲಿಲ್ಲ ಎಂಬುವುದು ಹಸಿ ಸುಳ್ಳುವೆಂದಿದ್ದು ಸುಳ್ಳಾದರೆ ಈ ಹಿಂದೆ ಕಾಂಗ್ರೇಸ್ ನವರೆ ಮಾಜಿ ಸ್ವೀಕರ ರಮೇಶ ಕುಮಾರ ರವರು ಸದನದಲ್ಲಿ ಭಾಷಣ ಮಾಡುವಾಗ ಈ ವಿಷಯ ಪ್ರಸ್ತಾಪಿಸಿದ ವಿಡೀಯೋ ಜಾಲತಾಣದಲ್ಲಿ ಹರಿದಾಡುತ್ತಿದೆ, ಸದನದಲ್ಲಿ ಈ ಬಗ್ಗೆ ಮಾತಾಡಿದ್ದಾಗ ಯಾರೊಬ್ಬ ಕಾಂಗ್ರೇಸಿಗರು ಚಕಾರವೆತ್ತದೆ ಮೌನಕ್ಕೆ ಜಾರಿದರು, ಈ ಬಗ್ಗೆ ಸ್ಪಷ್ಟತೆ ತಿಳಿದುಕೊಳ್ಳಬೇಕಾದರೆ ತಾವು ಅಂಬೇಡ್ಕರರವರ ಜೀವನ ಮತ್ತು ಸಾಧನೆ, ಅಂತಿಮ ಪ್ರಯಾಣದವರೆಗಿನ ಇತಿಹಾಸ ಓದಿ ತಿಳಿದುಕೊಳ್ಳುವುದು ಉತ್ತಮವಾಗಿದೆ.

ಸಂಸತ್ತಿನಲ್ಲಿ ಶಾ ಹೇಳಿದ ವಿಷಯ ದೇಶದ ಪ್ರತಿಯೊಬ್ಬ ನಾಗರಿಕರು ಖಂಡಿಸುವಂತದ್ದು,ಅಂಬೇಡ್ಕರ ಅಭಿಮಾನಿಗಳು ದೇಶದ ಹಳ್ಳಿಯಿಂದ ದಿಲ್ಲಿವರೆಗಿದ್ದಾರೆ ಆದರೂ ಕೇವಲ ಬೀದಿಗಿಳಿದು ಬಂದ್ ಆಚರಣೆಯಲ್ಲಿ ಭಾಗವಹಿಸಿದವರು ಮತ್ತು ಇಂತಹ ಹೇಳಿಕೆ ನೀಡುವವರೆ ಮಾತ್ರ ಅಲ್ಲ,ಅವರವರು ಅವರದೆ ಆದ ಅನುಕೂಲಕರ ರೀತಿಯಲ್ಲಿ ಅಭಿಮಾನಿಗಳಾಗಿರುತ್ತಾರೆ.

ಎಲ್ಲಾ ಅಭಿಮಾನಿಗಳು ಕೆಲವು ನಿರ್ದಿಷ್ಟ ಕಾರಣಗಳಿಂದ ಅನಿವಾರ್ಯವಾಗಿ ಆಚರಣೆಯಲ್ಲಿ ಭಾಗವಹಿಸಲು ಆಗುವುದಿಲ್ಲಾ, ಅಂಬೇಡ್ಕರ ದೇಶದ ಆಸ್ತಿ ಆಗಿದ್ದಾರೆ ಯಾರೋಬ್ಬರ ಸ್ವತ್ತಲ್ಲಾ ಎಂದು ತಿಳಿಸಿದ್ದಾರೆ.

ಶಾ ಹೇಳಿಕೆ ಖಂಡಿಸಿ ಪ್ರತಿಭಟನೆ; ವಿಜಯನಗರ ಜಿಲ್ಲಾ ಬಂದ್‌ಗೆ ಮಿಶ್ರ ಪ್ರತಿಕ್ರಿಯೆ

• ಉದಯವಾಹಿನಿ, ಹೊಸಪೇಟೆ

ಅಂಬೇಡ್ಕರ್ ಕುರಿತಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನೀಡಿದ ಹೇಳಿಕೆ ವಿರೋಧಿಸಿ ಸಂವಿಧಾನ ಸಂರಕ್ಷಣಾ ಸಮಿತಿ ಕರೆ ನೀಡಿರುವ ವಿಜಯನಗರ ಜಿಲ್ಲಾ ಬಂದ್ ಗುರುವಾರ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಹೊಸಪೇಟೆಯಲ್ಲಿ ಬಂದ್ ಬಹುತೇಕ ಯಶಸ್ವಿಯಾದರೆ, ಕೂಡ್ಲಿಗಿ, ಹಗರಿಬೊಮ್ಮನಹಳ್ಳಿಗಳಲ್ಲಿ ಭಾಗಶಃ ಯಶಸ್ವಿಯಾಯಿತು.

ಉದಯವಾಹಿನಿ ಚಿತ್ರ

ಟ್ಯಾಕ್ಸಿಗಳು ಸಹ ರಸ್ತೆಗೆ ಇಳಿಯಲಿಲ್ಲ

ಆದರೆ ಹರಪನಹಳ್ಳಿ, ಹೂವಿನ ಹಡಗಲಿ ಮತ್ತು ಕೊಟ್ಟೂರು ತಾಲ್ಲೂಕುಗಳಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಯಿತು. ಹೊಸಪೇಟೆಯಲ್ಲಿ ಬಹುತೇಕ ಎಲ್ಲಾ ಅಂಗಡಿ ಮುಂಗಟ್ಟುಗಳು, ವಾಣಿಜ್ಯ ಮಳಿಗೆಗಳು, ಹೋಟೆಲ್‌ಗಳು ಮುಚ್ಚಿದ್ದವು. ಬಸ್ ಸಂಚಾರ ಇರಲಿಲ್ಲ. ಆಟೊ ಸಂಚಾರ ಬೆಳಿಗ್ಗೆ 10 ಗಂಟೆಯ ಬಳಿಕ ತೀರಾ ವಿರಳವಾಯಿತು. ಟ್ಯಾಕ್ಸಿಗಳು ಸಹ ರಸ್ತೆಗೆ ಇಳಿಯಲಿಲ್ಲ, ಸರ್ಕಾರಿ ಕಚೇರಿಗಳು, ಬ್ಯಾಂಕ್‌ಗಳು ಬಾಗಿಲು ತೆರೆದಿದ್ದವು. ಆದರೆ ಸಾರ್ವಜನಿಕರ ಸಂಖ್ಯೆ ಕಡಿಮೆ ಇತ್ತು.

ಹೊಸಪೇಟೆ ತಾಲ್ಲೂಕಿನ ಎರಡು ಪ್ರಮುಖ ಹೋಬಳಿಗಳಾದ ಮರಿಯಮ್ಮನಹಳ್ಳಿ ಮತ್ತು ಕಮಲಾಪುರಗಳಲ್ಲಿ ಸಹ ಬಂದ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು.

ಹಂಪಿಗೆ ಬಂದ ಪ್ರವಾಸಿಗರ ಸಂಖ್ಯೆ ಕಡಿಮೆ ಇತ್ತು. ಕೂಡ್ಲಿಗಿ, ಹಗರಿಬೊಮ್ಮನಹಳ್ಳಿ ತಾಲ್ಲೂಕು ಕೇಂದ್ರಗಳಲ್ಲಿ ಪ್ರತಿಭಟನೆ ನಡೆಸಿದ ಕಾರ್ಯಕರ್ತರು ತಹಶೀಲ್ದಾರ್ ಮೂಲಕ ರಾಷ್ಟ್ರಪತಿ ಅವರಿಗೆ ಮನವಿ ಸಲ್ಲಿಸಿದರು.

ಗ್ರಾಹಕರ ಸಂಖ್ಯೆ ತೀರಾ ಕಡಿಮೆ

ತರಕಾರಿ ಮಾರುಕಟ್ಟೆಯಲ್ಲಿ ಶೇ 40ರಷ್ಟು ಅಂಗಡಿಗಳು ತೆರೆದಿದ್ದವು. ಆದರೆ ಕೊಳ್ಳುವ ಗ್ರಾಹಕರ ಸಂಖ್ಯೆ ತೀರಾ ಕಡಿಮೆ ಇತ್ತು. ಸರ್ಕಾರಿ ಶಾಲಾ ಕಾಲೇಜುಗಳು ತೆರೆದಿದ್ದವು, ಬಸ್, ರಿಕ್ಷಾ ಓಡಾಟ ಇಲ್ಲದ ಕಾರಣ ವಿದ್ಯಾರ್ಥಿಗಳ ಸಂಖ್ಯೆ ತೀರಾ ಕಡಿಮೆ ಇತ್ತು. ಹೆಚ್ಚಿನ ಶಾಲೆಗಳಲ್ಲಿ ತರಗತಿಗಳು ನಡೆಯಲಿಲ್ಲ. ಖಾಸಗಿ ಶಾಲೆಗಳು ರಜೆ ಘೋಷಿಸಿದ್ದವು.

ಹರಪನಹಳ್ಳಿ, ಹೂವಿನಹಡಗಲಿ, ಕೊಟ್ಟೂರು ಗಳಲ್ಲಿ ಬಂದ್ ನಡೆಯಲಿಲ್ಲ, ಕೆಲವೇ ಮಂದಿ ಸಾಂಕೇತಿಕವಾಗಿ ಮನವಿ ಸಲ್ಲಿಸಿದರು. ಪ್ರತಿಭಟನೆ ಜಿಲ್ಲೆಯ ಮಟ್ಟಿಗೆ ಹೊಸಪೇಟೆಯಲ್ಲೇ ಉತ್ತಮ ರೀತಿಯಲ್ಲಿ ಪ್ರತಿಭಟನೆ ಮೆರವಣಿಗೆ ಮತ್ತು ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ಸಭೆ ನಡೆಯಿತು. ನೂರಾರು ಮಂದಿ ಪಾಲ್ಗೊಂಡಿದ್ದರು.

ಮಾವಿನಕಟ್ಟೆ ಶಾಲೆ ವಿದ್ಯಾರ್ಥಿಗಳಿಗೆ ಬೇಕಿದೆ ನೆರವಿನ ಹಸ್ತ

• ಉದಯವಾಹಿನಿ, ದಾವಣಗೆರೆ

ರಾಷ್ಟ್ರಮಟ್ಟದ ವಿಜ್ಞಾನ ನಾಟಕ ಸ್ಪರ್ಧೆಗೆ ಆಯ್ಕೆಯಾಗಿ, ಹಳ್ಳಿಯಿಂದ ದಿಲ್ಲಿಗೆ ಹೋಗಬೇಕಿರುವ ಚನ್ನಗಿರಿ ತಾಲ್ಲೂಕಿನ ಮಾವಿನಕಟ್ಟೆ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳ ಕನಸು ಕಮರುತ್ತಿದೆ. ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದರೂ ಆರ್ಥಿಕ ತೊಂದರೆಯ ಕಾರಣಕ್ಕೆ ಸ್ಪರ್ಧೆಯಿಂದ ವಂಚಿತರಾಗುವ ಆತಂಕ ಎದುರಾಗಿದೆ. ಗ್ರಾಮೀಣ ಭಾಗದ, ಕೂಲಿ ಕಾರ್ಮಿಕರ ಮಕ್ಕಳೇ ಹೆಚ್ಚಿನ ಸಂಖ್ಯೆಯಲ್ಲಿರುವ ಕಾರಣ ಆರ್ಥಿಕವಾಗಿ ಯಾರೂ ಸಬಲರಾಗಿಲ್ಲ.

ಜಾಗತಿಕ ನೀರಿನ ಬಿಕ್ಕಟ್ಟು

ಉದಯವಾಹಿನಿ ಚಿತ್ರ

ಈಗಾಗಲೇ ಒಮ್ಮೆ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಭಾಗ ವಹಿಸಲು ಹೋಗಿ ಬಂದಿರುವ ವಿದ್ಯಾರ್ಥಿಗಳಿಗೆ ಮತ್ತೆ ಹೋಗಲು ಹಣಕಾಸಿನ ಮುಗ್ಗಟ್ಟು ಎದುರಾಗಿದೆ. ಡಿಸೆಂಬರ್‌ನಲ್ಲಿ ನಡೆಯಲಿದ್ದ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ವಿದ್ಯಾರ್ಥಿಗಳು ರಾಷ್ಟ್ರ ರಾಜಧಾನಿ ನವದೆಹಲಿಗೆ ತೆರಳಿದ್ದರಾದರೂ, ಮಾಜಿ ಪ್ರಧಾನಿ ಮನಮೋಹನ ಸಿಂಗ್ ನಿಧನದಿಂದ ಸ್ಪರ್ಧೆ ರದ್ದಾಗಿದ್ದರಿಂದ ಪ್ರದರ್ಶನ ನೀಡುವ ಅವಕಾಶ ಸಿಕ್ಕಿರಲಿಲ್ಲ, ಈಗ ಮತ್ತೆ ನವದೆಹಲಿಗೆ ಹೋಗಬೇಕಿದ್ದು ಆರ್ಥಿಕ ಸಮಸ್ಯೆಯ ಕಾರಣ ಆಸೆ ಕಮರುವ ಚಿಂತೆ ಕಾಡುತ್ತಿದೆ.

ಜನವರಿ 17, 18ರಂದು ನವದೆಹಲಿಯಲ್ಲಿ ರಾಷ್ಟ್ರಮಟ್ಟದ ವಿಜ್ಞಾನ ನಾಟಕ ಸ್ಪರ್ಧೆ ನಡೆಯಲಿದೆ. ಡಿಸೆಂಬರ್‌ನಲ್ಲಿ ನವದೆಹಲಿಗೆ ಹೋಗಲು ವಿದ್ಯಾರ್ಥಿಗಳು ದಾನಿಗಳು, ಪಾಲಕರು ಸೇರಿದಂತೆ ಹಲವರ ನೆರವಿನಿಂದ 2.50 ಲಕ್ಷ ಖರ್ಚಿನಲ್ಲಿ ದೆಹಲಿ ತಲುಪಿದ್ದರು. ಖರ್ಚು ಮಾಡಿಹೋಗಿದ್ದರೂ ಪ್ರಯೋಜನವಾಗಲಿಲ್ಲ. ಮತ್ತೆ 8 ಜನ ವಿದ್ಯಾರ್ಥಿಗಳು, ಶಿಕ್ಷಕರು, ನಿರ್ದೇಶಕರು, ನಾಟಕ ಪರಿಕರಗಳು ಹಾಗೂ ಅದರ ನಿರ್ವಹಣೆ ಸಿಬ್ಬಂದಿ ಸೇರಿ 15 ಜನರ ತಂಡ ದೆಹಲಿಗೆ ಹೋಗಬೇಕಿದೆ. ಜನವರಿ 17ರಂದು ದೆಹಲಿ ತಲುಪಲು ವಿದ್ಯಾರ್ಥಿಗಳಿಗೆ ರೈಲು ಟಿಕೆಟ್ ಖರೀದಿಸಬೇಕಿದೆ.

ತ್ವರಿತವಾಗಿ ಟಿಕೆಟ್ ಬುಕ್ ಮಾಡಲು ಅಗತ್ಯ ಹಣಕಾಸು ಬೇಕು. ರೈಲು ಅಥವಾ ವಿಮಾನದಲ್ಲಿ ವಿದ್ಯಾರ್ಥಿಗಳು ತೆರಳಲು ಕನಿಷ್ಠ 2 ಲಕ್ಷದಿಂದ ಗರಿಷ್ಠ 3.50 ಲಕ್ಷ ಬೇಕು. ಆದರೆ ಅಷ್ಟೊಂದು ಹಣ ಹೊಂದಿಸಲು ಆಗುತ್ತಿಲ್ಲ. ಜಿಲ್ಲಾಡಳಿತ, ಕನ್ನಡ, ಸಂಸ್ಕೃತಿ ಇಲಾಖೆ, ಯುವಜನ ಸಬಲೀಕರಣ ಇಲಾಖೆ, ಶಿಕ್ಷಣ ಇಲಾಖೆಯಿಂದ ಆರ್ಥಿಕ ಸಹಕಾರ ಇಲ್ಲ. ಕಳೆದ ಬಾರಿ ಪಾಲಕರು, ದಾನಿಗಳ ನೆರವು ಪಡೆದಿದ್ದ ತಂಡಕ್ಕೆ ಈ ಬಾರಿ ಮತ್ತೆ ಅವರಿಂದ ನೆರವು ಬಯಸುವ ಇರಾದೆ ಇಲ್ಲ. ಮಾನವನ ಒಳಿತಿಗಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ವಿಷಯ ಆಧರಿಸಿ ಜಾಗತಿಕ ನೀರಿನ ಬಿಕ್ಕಟ್ಟು ಎಂಬ ಉಪ ವಿಷಯದ ಮೇಲೆ ವೆಂಕಟೇಶ್ವರ ಕೆ. ನಾಟಕ ರಚಿಸಿ, ನಿರ್ದೇಶಿಸಿದ್ದಾರೆ.

ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ಬೀದರ್ ಬಂದ್

• ಉದಯವಾಹಿನಿ, ಬೀದರ್

ಕೇಂದ್ರ ಗೃಹಸಚಿವ ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ಡಾ.ಬಿ.ಆರ್. ಅಂಬೇಡ್ಕರ್ ವಾದಿಗಳ ಹೋರಾಟ ಸಮಿತಿ ಕರೆ ಕೊಟ್ಟಿರುವ ಬೀದರ್ ಬಂದ್‌ಗೆ ಗುರುವಾರ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ನಗರದಲ್ಲಿರುವ ಮಳಿಗೆಗಳು, ಹೋಟೆಲ್‌ಗಳು ಬಂದ್ ಆಗಿವೆ. ಸಾರಿಗೆ ಸಂಚಾರ ಸ್ಥಗಿತಗೊಂಡಿದೆ. ಆಟೋ, ಟಂಟಂ, ಕ್ರೂಸರ್ ಸೇರಿದಂತೆ ಯಾವುದೇ ವಾಹನಗಳು ರಸ್ತೆಗೆ ಇಳಿದಿಲ್ಲ. ಪ್ರಮುಖ ರಸ್ತೆಗಳಲ್ಲಿ ಜನರ ಓಡಾಟ ವಿರಳವಾಗಿದೆ.

ಜಿಲ್ಲಾಡಳಿತ ಶಾಲಾ, ಕಾಲೇಜುಗಳಿಗೆ ಬುಧವಾರ ಸಂಜೆ ರಜೆ ಘೋಷಿಸಿದ್ದರಿಂದ ಸರ್ಕಾರಿ ಹಾಗೂ ಖಾಸಗಿ ಶಾಲಾ, ಕಾಲೇಜುಗಳೆಲ್ಲ ಬಂದ್ ಆಗಿವೆ. ಪ್ರಮುಖ ವೃತ್ತಗಳು, ರಸ್ತೆಗಳು, ಕೇಂದ್ರ ಬಸ್ ನಿಲ್ದಾಣ ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಸಮಿತಿಯ ಕಾರ್ಯಕರ್ತರು ವಾಹನಗಳಿಗೆ ನೀಲಿ ಧ್ವಜಗಳನ್ನು ಕಟ್ಟಿಕೊಂಡು ನಗರದಲ್ಲಿ ಸುತ್ತಾಡುತ್ತಿದ್ದಾರೆ. ಆಸ್ಪತ್ರೆ, ಔಷಧಿ ಮಳಿಗೆಗಳು ಎಂದಿನಂತೆ ತೆರೆದಿವೆ. ಆಂಬುಲೆನ್ಸ್‌ಗಳು ಓಡಾಡುತ್ತಿವೆ. ನೆರೆಯ ಮಹಾರಾಷ್ಟ್ರ ಹಾಗೂ ತೆಲಂಗಾಣದ ಸಾರಿಗೆ ಸಂಸ್ಥೆಯ ಬಸ್ ಗಳು ಗಡಿಭಾಗದ ವರೆಗೆ ಸಂಚರಿಸಿ ವಾಪಸ್ ಆಗುತ್ತಿವೆ. ಅಂಬೇಡ್ಕರ್.. ಅಂಬೇಡ್ಕರ್ ಎನ್ನುವುದು ಕೆಲವರಿಗೆ ಫ್ಯಾಶನ್ ಆಗಿದೆ. ಅಂಬೇಡ್ಕರ್ ಬದಲು ದೇವರ ಹೆಸರು ಹೇಳಿದರೆ ಸ್ವರ್ಗ ಸಿಗುತ್ತದೆ ಎಂದು ಗೃಹಸಚಿವ ಅಮಿತ್ ಶಾ ರಾಜ್ಯಸಭೆಯಲ್ಲ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	10:30 ರಿಂದ 12:00
ಗುಳಿಕ ಕಾಲ	ಬೆಳಿಗ್ಗೆ	07:30 ರಿಂದ 09:00
ಯಮಗಂಡ ಕಾಲ	ಮಧ್ಯಾಹ್ನ	03:00 ರಿಂದ 04:30

ಮೇಷ ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು.

ವೃಷಭ ಗೃಹಪ್ರವೇಶಕ್ಕೆ ಮಂಗಳಕರ ದಿನ. ನಿಮ್ಮ ಮನದನ್ನೆಯ ವಿಚಿತ್ರ ನಡವಳಿಕೆ ಇಂದು ನಿಮ್ಮ ಪ್ರೇಮವನ್ನು ಘಾಸಿಗೊಳಿಸುತ್ತದೆ. ನಿಮ್ಮ ಬಾಸ್ ಮತ್ತು ಹಿರಿಯರನ್ನು ನಿಮ್ಮಲ್ಲಿ ಆಮಂತ್ರಿಸಲು ಒಳ್ಳೆಯ ದಿನವಲ್ಲ.

ಮಿಥುನ ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

ಕರ್ಕಾಟಕ ಭಾವನಾತ್ಮಕವಾಗಿ ನೀವು ತುಂಬ ಸ್ಥಿರವಾಗಿರುವುದಿಲ್ಲ, ನೀವು ಇತರರ ಮುಂದೆ ಹೇಗೆ ವರ್ತಿಸುತ್ತೀರಿ ಮತ್ತು ಏನು ಹೇಳುತ್ತೀರಿ ಎನ್ನುವ ಬಗ್ಗೆ ಎಚ್ಚರದಿಂದಿರಿ. ನೀವು ನಿಮ್ಮ ಹಣವನ್ನು ಖರ್ಚು ಮಾಡುವ ಅಗತ್ಯವಿಲ್ಲ.

ಸಿಂಹ ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

ಕನ್ಯಾ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್‌ಗಳ ಬಗ್ಗೆ ಎಚ್ಚರಿಕೆಯಿಂದಿರಿ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ.

ತುಲಾ ನಿಮ್ಮ ಆರೋಗ್ಯದ ಬಗ್ಗೆ ಎಚ್ಚರ ವಹಿಸಿ. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ. ನಿಮ್ಮ ಸಹೋದರನಿಗೆ ವಿಷಯಗಳನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಸಹಾಯ ಮಾಡಿ.

ವೃಶ್ಚಿಕ ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ.

ಧನಸ್ಸು ನೀವು ಇಂದು ಕೆಲಸದಲ್ಲಿ ಓರ್ವ ಅದ್ಭುತ ವ್ಯಕ್ತಿಯನ್ನು ಭೇಟಿಯಾಗಬಹುದು. ಇಂದು ಸಂವಹನ ನಿಮ್ಮ ಬಲವಾಗಿರುತ್ತದೆ. ನಿಮ್ಮ ಸಂಗಾತಿಯ ಒಂದು ಕೆಲಸದ ಬಗ್ಗೆ ನಿಮಗೆ ಇರುಸುಮುರುಸಾಗಬಹುದು.

ಮಕರ ನಿಮ್ಮ ಯೋಜನೆಗಳ ಬಗ್ಗೆ ತುಂಬಾ ಮುಕ್ತತೆ ಹೊಂದಿದ್ದಲ್ಲಿ ನೀವು ಅವುಗಳನ್ನು ಹಾಳುಮಾಡಬಹುದು. ಇಂದು ಟಿವಿ ಅಥವಾ ಮೊಬೈಲ್ ನಲ್ಲಿ ಯಾವುದೇ ಚಲಚಿತ್ರ ನೋಡುವಲ್ಲಿ ನೀವು ನಿರತರಾಗಿರಬಹುದು.

ಕುಂಭ ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಒಬ್ಬ ಹಳೆಯ ಸ್ನೇಹಿತರು ಅನಿರೀಕ್ಷಿತ ಭೇಟಿ ನೀಡಿ.

ಮೀನ ಯುವಕರು ಶಾಲಾ ಯೋಜನೆಗಳಲ್ಲಿ ಕೆಲವು ಸಲಹೆ ಪಡೆಯಬಹುದು. ಪ್ರೀತಿಯಲ್ಲಿ ನಿರಾಶೆಯಾಗಬಹುದಾದರೂ ಪ್ರೇಮಿಗಳು ಯಾವತ್ತೂ ಮುಖಸ್ತುತಿ ಮಾಡುವವರಾದ್ದರಿಂದ ನೀವು ಧೃತಿಗೆಡಬೇಡಿ.

ಮೊಬೈಲ್ ಮೋಹ ಜೀವಕ್ಕೆ ಮಾರಕ: ಉಮರ ಶರೀಫ್ ಕುಂಟೋಜಿ

ಯುವಪೀಳಿಗೆ ಮೊಬೈಲ್ ಮಾಯಾಂಗನೆಯ ಸೆಳತಕ್ಕೆ ಒಳಗಾಗಿ ತಮ್ಮ ಸುಂದರ ಭವಿಷ್ಯ ಹಾಳುಗೆಡವುತ್ತಲ್ಲಿದ್ದಾರೆ

• ಉದಯವಾಹಿನಿ ವಿಜಯಪುರ

ಎಲ್ಲೆಲ್ಲೂ ಯುವ ಜನತೆಯ ಕೈಯಲ್ಲಿಂದು ಸ್ಕ್ರೀನ್ ಟಚ್ ಮೊಬೈಲ್ ರಾರಾಜಿಸುತ್ತಿವೆ. ಮೊಬೈಲ್ ಗುಂಗು ತೆಲೆ ಕಡಿಸಿವೆ. ಮೊಬೈಲ್ ವ್ಯಾಮೋಹದ ಹಾವಳಿ ಅಧಿಕಗೊಂಡಿದೆ. ಹೊತ್ತು ಗೊತ್ತಿಲ್ಲದೇ ದಿನವಿಡೀ ಮೊಬೈಲ್‌ನಲ್ಲಿ ಕಾಲಹರಣ ಮಾಡುವ ಪ್ರವೃತ್ತಿ ಹೆಚ್ಚಾಗಿದೆ. ಅದರಲ್ಲೂ ಯುವಪೀಳಿಗೆ ಮೊಬೈಲ್ ಮಾಯಾಂಗನೆಯ ಸೆಳತಕ್ಕೆ ಒಳಗಾಗಿ ತಮ್ಮ ಸುಂದರ ಭವಿಷ್ಯ ಹಾಳುಗೆಡವುತ್ತಲ್ಲಿದ್ದಾರೆ.

ಇದರಿಂದ ಪಾಲಕ,ಪೋಷಕರು ಹಾಗೂ ಶಿಕ್ಷಕ ಸಮೂಹ ತೀವ್ರ ಆತಂಕ ಪಡುವುಂಥ ದುಸ್ಥಿತಿ ಬಂದೊದಗಿರುವುದು ದುರದೃಷ್ಟಕರ ಎಂದು ವಿಜಯಪುರ ಸಿಕ್ಯಾಬ್ ಬಾಲಕಿಯರ ಪಪೂ ಕಾಲೇಜ್ ಹಿರಿಯ ಉಪನ್ಯಾಸಕ ಉಮರ ಶರೀಫ್ ಕುಂಟೋಜಿ ವಿಷಾಧಿಸಿದರು.

ಬಿಜಾಪುರ ಜಿಲ್ಲಾ ಅಂಗವಿಕಲರ ಕ್ಷೇಮಾಭಿವೃದ್ಧಿ ಸಂಸ್ಥೆ ವಿಜಯಪುರದ ಎಸ್.ಕೆ.ವಿ.ಎಂ.ಎಸ್. ಕಲಾ, ವಾಣಿಜ್ಯ, ವಿಜ್ಞಾನ ಪದವಿಪೂರ್ವ ಕಾಲೇಜಿನ ಸಭಾ ಭವನದಲ್ಲಿ ಹಮ್ಮಿಕೊಂಡಿದ್ದ 2024-25 ನೇ ಸಾಲಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

> ಡಾ,ಬಾಬಾ ಸಾಹೇಬ್ ಅಂಬೇಡ್ಕರ್, ಡಾ,ಅಬ್ದುಲ್ ಕಲಾಂ ರಂಥ ಮಹಾನ ನಾಯಕರು ಕಡು ಬಡತನದಲ್ಲಿ ಜನ್ಮತಾಳಿ ಹೆಜ್ಜೆ ಹೆಜ್ಜೆಗೂ ಬೆಂದು ನೊಂದು ಸಾಧಕರಾಗಿ ಮಿನುಗಿದ್ದಾರೆ.ಇಡೀ ಜಗತ್ತೇ ತಮ್ಮತ್ತ ನೋಡುವಂತೆ ಅಪ್ರತಿಮ ಸಾಧನೆ ಮಾಡಿದ್ದಾರೆ. ಇಂಥ ಮಹಾನುಭಾವರ ಆದರ್ಶದ ಗುಣಗಳನ್ನು ಅಳವಡಿಸಿಕೊಂಡು ಸಾಧಕರಾಗಲು ಯುವಜನತೆ ಪ್ರಯತ್ನಿಸಬೇಕು. ಅಂಬೇಡ್ಕರ್, ಕಲಾಂ ಅವರಂಥ ಸಾಧಕ ರತ್ನ ಮಣಿಗಳೇ ನಿಮಗೆಲ್ಲ ರೋಲ್ ಮಾಡೆಲ್ ಆಗಿದ್ದಾರೆ -ಕುಂಟೋಜಿ

ಇಂದಿನ ಯುವಜನತೆ ಮೊಬೈಲ್‌ದಲ್ಲಿ ಕಳೆಯುವ ಸಮಯ ಪುಸ್ತಕಕ್ಕೆ ಮೀಸಲಿಟ್ಟರೆ ಬದುಕು ಹಸನ. ಪುಸ್ತಕ ಓದಾಭ್ಯಾಸದ ವ್ಯಾಮೋಹ ಮಸ್ತಕಕ್ಕೆ ಇಳಿದರೆ ಜೀವನೋಲ್ಲಾಸ ಕಾಣಬಹುದು ಎಂದರು. ಮೊಬೈಲ್‌ದಿಂದ ಶಿಕ್ಷಣದ ಅಭ್ಯಾಸ ಮಾಯವಾಗುತ್ತಿದೆ. ಬಂದು,ಬಳಗ,ಸ್ನೇಹತ್ವದ ಅನ್ಯೋನ್ಯತೆ ಸಂಬಂಧ ಕಳೆದುಕೊಳ್ಳುತ್ತಲ್ಲಿದ್ದೇವೆ ಎಂದರು.

ಉದಯವಾಹಿನಿ ಚಿತ್ರ

ಖೇಡ ಸಂಸ್ಥೆ ಕಾಲೇಜು ಉತ್ತಮ ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡುತ್ತಿದೆ.ಇಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಸೌಭಾಗ್ಯವಂತರು. ಪಿಯುಸಿ ಫಲಿತಾಂಶದಲ್ಲಿ ಮುಂಚೂಣಿಯಲ್ಲಿದೆ. ಉತ್ತಮ ಅಭ್ಯಾಸದೊಂದಿಗೆ ಈ ಬಾರಿಯ ಪರೀಕ್ಷೆಯಲ್ಲಿ ಅತ್ಯುನ್ನತ ಸಾಧನೆ ಮಾಡಿ ಎಂದು ಮಕ್ಕಳಿಗೆ ಕರೆ ನೀಡಿದರು.

ಆಲಮಟ್ಟಿ ಎಂ.ಎಚ್.ಎಂ.ಪ್ರೌಢಶಾಲೆಯ ಹಿರಿಯ ದೈಹಿಕ ಶಿಕ್ಷಣ ಶಿಕ್ಷಕ ಗಂಗಾಧರ ಹಿರೇಮಠ ಮುಖ್ಯ ಅತಿಥಿಗಳಾಗಿ ಮಾತನಾಡಿ, ಯುವಜನತೆಗೆ ನಯ,ವಿನಯ,ಮೃದುತ್ವದ ಸ್ವಭಾವ ಅತ್ಯಗತ್ಯ. ಒಳ್ಳೆಯ ವಿಚಾರ,ಭಾವದಿಂದ ಪ್ರಾಮಾಣಿಕತೆ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು. ಕ್ರಿಯಾಶೀಲತೆಯಿಂದ ಸೃಜನಾತ್ಮಕವಾದ ಅಕ್ಷರ ಬರವಣಿಗೆ ಮೈಗೂಡಿಸಿಕೊಂಡು ಉನ್ನತಿ ಕಾಣಬೇಕು ಎಂದರು.

ನುಡಿಗಟ್ಟು ಆಲಿಸಿ ಪಾಲಿಸಿ

ಗುರು,ಹಿರಿಯರ ವೇದ ವಾಕ್ಯದಲ್ಲಿ ನಿಮ್ಮೆಲ್ಲರ ಹಿತ ಅಡಗಿದೆ. ಕಾರಣ ಅವರ ನುಡಿಗಟ್ಟು ಆಲಿಸಿ ಪಾಲಿಸಬೇಕು. ಶಿಕ್ಷಕರು ತಮ್ಮನ್ನು ತಾವು ಮೇಣದ ಬತ್ತಿ ಹಾಗೆ ಸುಟ್ಟುಕೊಂಡು ಮಕ್ಕಳ ಬಳಗಕ್ಕೆ ನವತನದ ಬೆಳಕು ಚೆಲ್ಲುತ್ತಾರೆ. ಅವರಿಗೆ ನಿಮ್ಮ ಶೈಕ್ಷಣಿಕ ಪ್ರಗತಿಯೇ ಮುಖ್ಯ ಹೊರತು ಬೇರೇನೂ ಇಲ್ಲ. ಯಾರು ಶ್ರದ್ಧೆ, ಆಸಕ್ತಿಯಿಂದ ಮನಸ್ಸು ಕೊಟ್ಟು ಓದು,ಬರಹದಲ್ಲಿ ತೋಡಗುತ್ತಾರೋ ಅವರೇ ಜೀವನದಲ್ಲಿ ಯಶಸ್ಸು ಕಾಣಲು ಸಾಧ್ಯ. ಜಾತಿ,ಮಥ,ಪಂಥ ತಲೆಯಿಂದ ಮೊದಲು ತಗೆದು ಹಾಕಿ ಎಂದು ಯುವ ಸಮೂಹಕ್ಕೆ ಸಲಹೆ ನೀಡಿದರು.

ಜಾತಿ,ಮಥ,ಪಂಥ ತಲೆಯಿಂದ ಮೊದಲು ತಗೆದು ಹಾಕಿ

ಅಧ್ಯಕ್ಷತೆ ವಹಿಸಿದ್ದ ವಿಜಯಪುರ ಬಿ.ಡಿ.ಪಿ.ಎಚ್.ಡಬ್ಲ್ಯೂ ಅಧ್ಯಕ್ಷ ಎಸ್.ಎಸ್.ಅಗರಖೇಡ ಮಾತನಾಡಿ, ಯುವಜನತೆಗೆ ಸಭ್ಯತೆಯೇ ಭೂಷಣ. ಸನ್ನಡತೆಯೊಂದಿಗೆ ಸಮಾಜಕ್ಕೆ ಋಣಿಯಾಗಬೇಕು ಎಂದು ಶುಭ ಹಾರೈಸಿದರು.

ವಿಜಯಪುರ ಬಿ.ಡಿ.ಪಿ.ಎಚ್.ಡಬ್ಲ್ಯೂ ವೆಲ್ಫೇರ್ ಟ್ರಸ್ಟ್ ಅಧ್ಯಕ್ಷ ವಿನೋದ ಖೇಡ, ನಿರ್ದೇಶಕ ವಿಜಯಕುಮಾರ ಖೇಡ, ವಿಕಾಸ ಖೇಡ, ವಿಜಯಪುರ ಎಸ್.ಕೆ.ವ್ಹಿ.ಎಂ.ಎಸ್.ಪಪೂ ಕಾಲೇಜ್ ನೋಡಲ್ ಅಧಿಕಾರಿ ಶಂಕರ ಭಾವಿಕಟ್ಟಿ, ಹಿರಿಯ ಶ್ರೇಣಿ ಉಪನ್ಯಾಸಕ ಆರ್.ವ್ಹಿ.ಪಟ್ಟಣದ, ಐಐಟಿ ಕಾಲೇಜಿನ ಗೌಡರ, ಪಂಪಾಪತಿ, ಬೊಮ್ಮನಳ್ಳಿ ಸೇರಿದಂತೆ ಕಾಲೇಜು ಉಪನ್ಯಾಸಕ ಸಿಬ್ಬಂದಿ ಇತರರಿದ್ದರು.

ಪ್ರಾಚಾರ್ಯ ಎಂ.ಡಿ.ಹೆಬ್ಬಿ ಸ್ವಾಗತಿಸಿದರು. ಸರೋಜನಿ ಕಾಂಬಳೆ ನಿರೂಪಿಸಿ ವಂದಿಸಿದರು.

ಕ್ಷಯ ರೋಗ ನಿಯಂತ್ರಣಕ್ಕೆ ಸಾರ್ವಜನಿಕರ ಸಹಕಾರ ಮುಖ್ಯ: ಮಹೇಶ ಡಿ.

• ಉದಯವಾಹಿನಿ ಚಿತ್ರದುರ್ಗ

ಜಿಲ್ಲಾ ಪಂಚಾಯತ್ ಚಿತ್ರದುರ್ಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಾಯಕದಲ್ಲಿ ಚಿತ್ರದುರ್ಗ ತಾಲ್ಲೂಕಿನ ಬೆಳಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪಿಯ ಹೋ.ಚಿ. ಬೋರಯ್ಯ ಬಡಾವಣೆ ಗ್ರಾಮದ ನಿರಾಶ್ರಿತರ ಪರಿಹಾರ ಕೇಂದ್ರದ ಸಭಾಂಗಣದಲ್ಲಿ ಗುರುವಾರ ಕ್ಷಯ ಮುಕ್ತ 100 ದಿನಗಳ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಬೆಳಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ನೀರಿಕ್ಷಣಾಧಿಕಾರಿ ಮಹೇಶ್ ಡಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿ ಕ್ಷಯ ರೋಗವು ಭಾರತದ ಸಾರ್ವಜನಿಕ ಆರೋಗ್ಯಕ್ಕೆ ಅತಿ ದೊಡ್ಡ ತೊಂದರೆಗಳಲ್ಲಿ ಒಂದಾಗಿರುತ್ತದೆ. ಪ್ರತಿ ವರ್ಷ ವಿಶ್ವದಲ್ಲೇ ಅತಿ ಹೆಚ್ಚು ಜನ ಕ್ಷಯ ರೋಗಕ್ಕೆ ತುತ್ತಾಗುತ್ತಾರೆ, ಈ ಹಿನ್ನಲೆಯಲ್ಲಿ ಭಾರತವನ್ನು ಕ್ಷಯ ಮುಕ್ತಗೊಳಿಸಲು ಸಮುದಾಯವು ಒಗ್ಗುಡಿ ಸಹಕಾರದೊಂದಿಗೆ ಕೆಲಸ ಮಾಡಬೇಕಾಗಿದೆ.

ಕ್ಷಯ ರೋಗವು ಮೈಕೋ ಬ್ಯಾಕ್ಟೀರಿಯಾ ಟ್ಯೂಬರ್ಕ್ಯುಲೋಸಿಸ್ ಎಂಬ ಸೂಕ್ಷ್ಮ ರೋಗಾಣುವಿನಿಂದ ಬರುತ್ತದೆ, ಕ್ಷಯರೋಗಿಯು ಕೆಮ್ಮಿದಾಗ ಅಥವಾ ಸೀನಿದಾಗ ಹೊರಬರುವ ತುಂತುರು ರೋಗಾಣುಗಳು ಗಾಳಿಯ ಮೂಲಕ ಆರೋಗ್ಯವಂತ ವ್ಯಕ್ತಿಯ ಶ್ವಾಸಕೋಶ ಸೇರಿ ಸೋಂಕು ಉಂಟುಮಾಡುತ್ತದೆ , ಕ್ಷಯ ರೋಗಿಗಳು

ಉದಯವಾಹಿನಿ ಚಿತ್ರ

ಕೆಮ್ಮುವಾಗ ಹಾಗೂ ಸೇರುವಾಗ ಬಾಯಿ ಮತ್ತು ಮೂಗಿನ ಹತ್ತಿರ ಕರವಸ್ತ್ರ ಇಟ್ಟುಕೊಳ್ಳಬೇಕು, ರೋಗಿಯ ಕಫವನ್ನು ಮನಸ್ಸಿಗೆ ಬಂದ ಕಡೆ ಉಗಿಯಬಾರದು, ಕಫವನ್ನು ಡಬ್ಬಿಯಲ್ಲಿ ಶೇಖರಿಸಿ ಗುಂಡಿ ತೋಡಿ ಮುಚ್ಚಬೇಕು, ನವಜಾತ ಶಿಶುಗಳಿಗೆ ಬಿಸಿಜಿ ಲಸಿಕೆ ಹಾಕಿಸಬೇಕು, ಕ್ಷಯ ರೋಗ ನಿಯಂತ್ರಣ ಸಾರ್ವಜನಿಕರ ಕಾಳಜಿ ಆಗಬೇಕು ಎಂದರು.

ಹಿರಿಯ ಆರೋಗ್ಯ ನೀರಿಕ್ಷಣಾಧಿಕಾರಿ ಕಾಂತಪ್ಪ ಅವರು ರೋಗದ ಅಪಾಯ ಇರುವವರನ್ನು ಆರೈಕೆ ಮಾಡಿ ದಿನಾಂಕ 07.12.2024 ರಿಂದ 24-03-2025 ರವರೆಗೆ ಕ್ಷಯ ಮುಕ್ತ ನೂರು ದಿನಗಳ ಅಭಿಯಾನ ತೀವ್ರ ಪ್ರಚಾರ ಕಾರ್ಯಕ್ರಮವನ್ನು ಎಲ್ಲಾ ಆಯುಷ್ಮಾನ್ ಆರೋಗ್ಯ ಮಂದಿರ ಪ್ರಾಥಮಿಕ ಆರೋಗ್ಯ ಕೇಂದ್ರದ, ಎಲ್ಲಾ ಗ್ರಾಮಗಳ ಮನೆಗಳಲ್ಲಿ ಸಮೀಕ್ಷೆ ನಡೆಸಿ ದುರ್ಬಲ ಜನಸಂಖ್ಯೆಯನ್ನು ಗುರುತಿಸಿ ಜಾಗೃತಿ ಸ್ಕ್ರೀನಿಂಗ್

> ನಿಮ್ಮ ಮನೆಯಲ್ಲಿ ಹಾಗೂ ಸುತ್ತಮುತ್ತಲಿನವರಲ್ಲಿ ಟಿಬಿ ರೋಗದ ಲಕ್ಷಣಗಳು ಕಂಡುಬಂದಲ್ಲಿ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ಪರೀಕ್ಷೆಗಾಗಿ ಕಳುಹಿಸಬೇಕು ಟಿಬಿ ರೋಗವನ್ನು ಬೇಗ ಪತ್ತೆ ಹಚ್ಚಿ ಪೌಷ್ಟಿಕ ಆಹಾರ ಸೇವಿಸಿ ಸಮಯಕ್ಕೆ ಸರಿಯಾಗಿ ಸೂಕ್ತ ಚಿಕಿತ್ಸೆ ಪಡೆದುಕೊಂಡು ಕ್ಷಯಮುಕ್ತ ಭಾರತವಾಗಲು ಸಹಕರಿಸಿ -ಪೃಥ್ವಿರಾಜ್,ಜಿಲ್ಲಾ ಕ್ಷಯರೋಗ ಸಂಯೋಜಕ

ಮತ್ತು ತೀವ್ರವಾದ ಪ್ರಕರಣ ಪತ್ತೆ ಹಚ್ಚುವುದು ಪೌಷ್ಟಿಕ ಬೆಂಬಲ ಮಧ್ಯಸ್ಥಿಕೆಯೊದಿಗೆ ವಿಭಿನ್ನವಾದ ಟಿಬಿ ಆರೈಕೆ ವಿಧಾನವನ್ನು ಅಳವಡಿಸುವ ಮೂಲಕ ಟಿಬಿ ಇರುವ ಜನರಲ್ಲಿ ಮರಣವನ್ನು ಕಡಿಮೆ ಮಾಡುವುದು ಹೊಸ ಟಿಬಿ ಪ್ರಕರಣಗಳು ಸಂಭವಿಸುವುದನ್ನು ತಡೆಗಟ್ಟುವುದು ಕ್ಷಯ ರೋಗದ ಬಗೆಗಿನ ಭೀತಿಯನ್ನು ತ್ವರಿತವಾಗಿ ಕೊನೆಗಾಣಿಸೋಣ ಎಂದರು.

ಹಿರಿಯ ಚಿಕಿತ್ಸಾ ಮೇಲ್ವಿಚಾರಕ ಅಧಿಕಾರಿ ಮಹೇಂದ್ರ ಅವರು ಡಾಟ್ಸ್ ಚಿಕಿತ್ಸೆಯ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ನಿರಾಶ್ರಿತರ ಪರಿಹಾರ ಕೇಂದ್ರದ ಅಧಿಕಾರಗಳಾದ ಮಹಾದೇವಯ್ಯ , ಪಿ.ಹೆಚ್.ಸಿ.ಓ. ನಿರ್ಮಲಾ, ಇತರರು ಉಪಸ್ಥಿತರಿದ್ದರು

50 ಸಾವಿರ ಲಂಚ ಸ್ವೀಕರಿಸುವ ವೇಳೆ ಲೋಕಾಯುಕ್ತ ಬಲೆಗೆ ಬಿದ್ದ ನಗರಸಭೆ ಆಯುಕ್ತ ಎಇಇ

• ಉದಯವಾಹಿನಿ ಹಾಸನ

50 ಸಾವಿರ ರೂಪಾಯಿ ಲಂಚ ಸ್ವೀಕರಿಸುವ ಸಂದರ್ಭದಲ್ಲಿ ನಗರಸಭೆಯ ಆಯುಕ್ತ ಹಾಗೂ ಎಇಇ ಅಧಿಕಾರಿಯು ಒಬ್ಬ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿರುವ ಘಟನೆ ಹಾಸನದಲ್ಲಿ ನಡೆದಿದೆ. ಹೌದು 50 ಸಾವಿರ ಲಂಚ ಸ್ವೀಕರಿಸುವ ವೇಳೆ ಹಾಸನ ನಗರಸಭೆ ಆಯುಕ್ತ ಹಾಗೂ ಎಇಇ ಬಲೆಗೆ ಬಿದ್ದಿದ್ದಾರೆ. 50 ಸಾವಿರ ಸ್ವೀಕರಿಸುತ್ತಿರುವಾಗ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬೆಲೆಗೆ ಬಿದ್ದಿದ್ದಾರೆ ಎಂದು ತಿಳಿದುಬಂದಿದೆ.ಆಯುಕ್ತ ನರಸಿಹಮೂರ್ತಿ, ಎಇಇ ವೆಂಕಟೇಶ್ ಕೆ ಆರ್ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಈ ವೇಳೆ ಲೋಕಾಯುಕ್ತ ಬಲೆಗೆ ಬಿದ್ದಂತಹ ಅಧಿಕಾರಿಗಳ ರಕ್ಷಣೆಗೆ ಕೌನ್ಸಿಲರ್‌ಗಳು ನಿಂತಿದ್ದಾರೆ. ವೆಂಕಟೇಶ್ವರ ನಗರಸಭೆಯ ಸದಸ್ಯರು ವಕಾಲತ್ತು ವಹಿಸಿದರು. 50,000 ಲಂಚ ಪಡೆದಿದ್ದರಲ್ಲಿ ಎಇಇ ವೆಂಕಟೇಶ್ ಪಾತ್ರ ಏನು ಇಲ್ಲ ನಗರಸಭೆ ಆಯುಕ್ತರ ಸೂಚನೆ, ಮೇರೆಗೆ ಲಂಚ ಪಡೆದಿದ್ದಾರೆ ಎಂದು ಸದಸ್ಯರು ಹೇಳಿದರು. ಈ ವೇಳೆ ಲೋಕಾಯುಕ್ತ ಪಿಐ ಬಾಲು ನಗರಸಭೆ ಸದಸ್ಯರಿಗೆ ಎಚ್ಚರಿಕೆ ನೀಡಿದರು.

ನಾವು ಅಮಾಯಕರ ಮೇಲೆ ದಾಳಿ ಮಾಡಿಲ್ಲ, ಲಂಚ ಸ್ವೀಕರಿಸಿದ್ದ ಎಇಇ ಕೆ ಆರ್ ವೆಂಕಟೇಶ್ ಅವರು ಸಹ ಇದರಲ್ಲಿ ಆರೋಪಿಯಾಗಿದ್ದಾರೆ. ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳುತ್ತೇವೆ ನೀವು ಆಯುಕ್ತರ ಸೂಚನೆ ಮೇರೆಗೆ ಲಂಚ ಪಡೆದಿದ್ದಾರೆ ಎಂದು ಹೇಳುತ್ತಿದ್ದೀರಿ. ಈ ವೇಳೆ ಎಇಇ, ನಗರ ಸಭೆ ಆಯುಕ್ತರ ಮಾತು ಕೇಳುವುದನ್ನು ಕಡಿಮೆ ಮಾಡಲು ಹೇಳಿ ಹಾಸನ ನಗರಸಭೆ ಸದಸ್ಯರಿಗೆ ಲೋಕಾಯುಕ್ತ ಇನ್ಸ್‌ಪೆಕ್ಟರ್ ಬಾಲು ಇದೇ ವೇಳೆ ತರಾಟೆ ತೆಗೆದುಕೊಂಡರು. ಪಿಐ ಬಾಲು ತಾರಾಟೆಯಿಂದ ನಗರಸಭೆಯ ಸದಸ್ಯರು ಮುಜುಗರಕ್ಕೆ ಒಳಗಾದರು. ಮರು ಮಾತನಾಡದೆ ನಗರಸಭೆ ಸದಸ್ಯರು ಸ್ಥಳದಿಂದ ಕಾಲ್ಕಿತ್ತಿದ್ದಾರೆ.

ಬ್ಯಾಟರಿ ಚಾಲಿತ ವೀಲ್‌ಚೇರ್ ಪಡೆಯಲು ಅರ್ಜಿ ಆಹ್ವಾನ

• ಉದಯವಾಹಿನಿ ಚಿತ್ರದುರ್ಗ

2024-25ನೇ ಸಾಲಿನಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಜಿಲ್ಲೆಯ 15 ವರ್ಷ ಮೇಲ್ಪಟ್ಟ ವಯಸ್ಸಿನ ದೈಹಿಕ ವಿಕಲಚೇತನರಿಗಾಗಿ ಬ್ಯಾಟರಿ ಚಾಲಿತ ವೀಲ್‌ಚೇರ್ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜ.21 ಅರ್ಜಿ ಸಲ್ಲಿಸಲು ಕೊನೆಯ ದಿನ.

ಬ್ಯಾಟರಿ ಚಾಲಿತ ವೀಲ್‌ಚೇರ್ ಯೋಜನೆಯಡಿ ಪ್ರಯೋಜನ ಪಡೆಯಲು 15 ವರ್ಷ ಮೇ

ಲಾಸ್ ಏಂಜಲಿಸ್‌ನಲ್ಲಿ ಭೀಕರ ಕಾಡ್ಗಿಚ್ಚು; ಹಾಲಿವುಡ್‌ನಿಂದ ಜನರ ಸ್ಥಳಾಂತರ

ರಕ್ಷಣಾ ಕಾರ್ಯಾಚರಣೆಗೆ ವೇಗ ನೀಡಿದ ಸ್ಥಳೀಯ ಆಡಳಿತ, ಸುರಕ್ಷಿತ ಪ್ರದೇಶಗಳತ್ತ ಸ್ಥಳೀಯ ನಿವಾಸಿಗಳ ವಲಸೆ



ತುರ್ತು ಪರಿಸ್ಥಿತಿ ಘೋಷಣೆ

ಲಾಸ್ ಏಂಜಲೀಸ್: ಅಮೆರಿಕದ ಲಾಸ್ ಏಂಜಲಿಸ್ ಪ್ರದೇಶದಲ್ಲಿ ಭೀಕರ ಕಾಡ್ಗಿಚ್ಚು ಕಾಣಿಸಿಕೊಂಡಿದ್ದು, ಸುತ್ತಲಿನ ಹಾಲಿವುಡ್ ಪ್ರದೇಶದಿಂದ ಜನರನ್ನು ಸ್ಥಳಾಂತರಿಸುವ ಕಾರ್ಯಕ್ಕೆ ರಕ್ಷಣಾ ಕಾರ್ಯಾಚರಣೆ ಸಿಬ್ಬಂದಿ ಚಾಲನೆ ನೀಡಿದ್ದಾರೆ. ದುರ್ಘಟನೆಯಲ್ಲಿ ಇದುವರೆಗೂ 5 ಜನ ಪ್ರಾಣ ಕಳೆದುಕೊಂಡಿದ್ದು, ಸುರಕ್ಷಿತ ಸ್ಥಳಗಳಿಗೆ ವಲಸೆ ಹೋಗುವಂತೆ ಸ್ಥಳೀಯ ಆಡಳಿತ ಜನರಲ್ಲಿ ಮನವಿ ಮಾಡಿದೆ. ಲಾಸ್ ಏಂಜಲಿಸ್‌ನಾದ್ಯಂತ ನಿಯಂತ್ರಣ ಮೀರಿದ ಕಾಡ್ಗಿಚ್ಚು ಉಲ್ಬಣಗೊಳ್ಳುತ್ತಿರುವುದರಿಂದ, ಸನ್‌ಸೆಟ್ ಫೈರ್ ಎಂದು ಕರೆಯಲ್ಪಡುವ ಹೊಸ ಜ್ವಾಲೆಯು ಹಾಲಿವುಡ್ ಹಿಲ್ಸ್‌ನಲ್ಲಿ ಕಾಣಿಸಿಕೊಂಡಿದೆ.

ಸನ್‌ಸೆಟ್ ಫೈರ್ ಸುಮಾರು 20 ಎಕರೆಗೂ ಹೆಚ್ಚಿನ ಪ್ರದೇಶಕ್ಕೆ ವ್ಯಾಪಿಸಿದ್ದು, ರನ್ಯಾನ್ ಕ್ಯಾನ್ಯನ್ ಮತ್ತು ವಾಟಲ್ಸ್ ಪಾರ್ಕ್ ಸಂಪೂರ್ಣವಾಗಿ ಬೆಂಕಿಗೆ ಆಹುತಿಯಾಗಿದೆ. ಸಾಂಪ್ರದಾಯಿಕ ಹಾಲಿವುಡ್ ಚಿಹ್ನೆಯ ಜೊತೆಗೆ, ವಾರ್ಷಿಕವಾಗಿ ಆಸ್ಕರ್ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯುವ ಡಾಲ್ಬಿ ಥಿಯೇಟರ್ ಕೂಡ ಸನ್‌ಸೆಟ್ ಫೈರ್ ಆಘಾತಕ್ಕೆ ಒಳಗಾಗಿದೆ. ಅದರಂತೆ ಹಾಲಿವುಡ್ ಬೌಲ್ ಹೊರಾಂಗಣ ಆಂಫಿಥಿಯೇಟರ್, ಹಾಲಿವುಡ್ ವಾಕ್ ಆಫ್ ಫೇಮ್ ಸೇರಿದಂತೆ ಇತರ ಐತಿಹಾಸಿಕ ಸ್ಥಳಗಳೂ ಸಹ ಅಪಾಯಕ್ಕೆ ಸಿಲುಕಿವೆ. ಹಾಲಿವುಡ್ ಸೆಲೆಬ್ರಿಟಿಗಳ ನಿವಾಸಗಳತ್ತಲೂ ಕಾಡ್ಗಿಚ್ಚು ವ್ಯಾಪಿಸುತ್ತಿದ್ದು, ಸೆಲಿಬ್ರಿಟಿಗಳು ಕೂಡ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಗೊಳ್ಳುತ್ತಿದ್ದಾರೆ. ಈ ಭೀಕರ ಕಾಡ್ಗಿಚ್ಚನ್ನು ಲಾಸ್ ಏಂಜಲಿಸ್ ಇತಿಹಾಸದಲ್ಲೇ ಅತ್ಯಂತ ವಿನಾಶಕಾರಿ ಎಂದು ಬಣ್ಣಿಸಲಾಗಿದೆ. ಇದುವರೆಗೂ ಸುಮಾರು 137,000ಕ್ಕಿಂತ ಹೆಚ್ಚು ಜನರನ್ನು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಅತ್ತ ದಕ್ಷಿಣ ಕ್ಯಾಲಿಫೋರ್ನಿಯಾದಲ್ಲೂ ಈ ಕಾಡ್ಗಿಚ್ಚಿನ ಪ್ರಭಾವ ಕಾಣಿಸಿಕೊಂಡಿದ್ದು, ಹೊಗೆ ಮತ್ತು ಧೂಳು ಪ್ರದೇಶದಾದ್ಯಂತ ಹಬ್ಬಿದೆ ಎಂದು ಮೂಲಗಳು ತಿಳಿಸಿವೆ. ಅಲ್ಲದೇ ಕ್ಯಾಲಿಫೋರ್ನಿಯಾದಲ್ಲಿ ವಿದ್ಯುತ್ ಸಂಪರ್ಕ ಕಡಿತ ಕೂಡ ಉಂಟಾಗಿದೆ ಎನ್ನಲಾಗಿದೆ.

ಲಾಸ್ ಏಂಜಲಿಸ್‌ನಲ್ಲಿ ನೀರಿನ ಅಭಾವದಿಂದಾಗಿ ಅಗ್ನಿಶಾಮಕ ದಳದವರು ಕಾಡ್ಗಿಚ್ಚು ನಂದಿಸುವ ಕಾರ್ಯಾಚರಣೆಯಲ್ಲಿ ಹಲವು ಸವಾಲುಗಳನ್ನು ಎದುರಿಸಬೇಕಾಯಿತು. ಸುತ್ತಲಿನ ಈಜುಕೊಳಗಳು ಮತ್ತು ಕೊಳಗಳಿಂದ ನೀರು ಸಂಗ್ರಹಿಸಿ ಕಾರ್ಯಾಚರಣೆ ನಡೆಸಲಾಗಿದೆ. ಒಟ್ಟಿನಲ್ಲಿ ಲಾಸ್ ಏಂಜಲಿಸ್ ಕಾಡ್ಗಿಚ್ಚು ಉಳಿವಿಗಾಗಿ ನಡೆಯುತ್ತಿರುವ ಪ್ರಕೃತಿ ಮತ್ತು ಮಾನವನ ನಡುವಿನ ಸಂಘರ್ಷವಾಗಿ ಕಾಣುತ್ತಿದೆ ಎಂದು ಹೇಳಬಹುದು.

ಇತಿಹಾಸದಲ್ಲೇ ವಿನಾಶಕಾರಿ

ಅಮೆರಿಕದ ಲಾಸ್ ಏಂಜಲಿಸ್ ಕಾಡ್ಗಿಚ್ಚು ಹಾಲಿವುಡ್‌ವರೆಗೂ ವ್ಯಾಪಿಸಿದ್ದು, ಇದೀಗ ಕ್ಯಾಲಿಫೋರ್ನಿಯಾದಲ್ಲೂ ತನ್ನ ಭೀಕರತೆಯ ಪ್ರದರ್ಶನ ಮಾಡುತ್ತಿದೆ. ಈ ಪ್ರದೇಶದಾದ್ಯಂತ ರಕ್ಷಣಾ ಕಾರ್ಯಾಚರಣೆಗಳು ಭರದಿಂದ ಸಾಗಿದ್ದು, ಇದುವರೆಗೂ ಸುಮಾರು 137,000ಕ್ಕಿಂತ ಹೆಚ್ಚು ಜನರನ್ನು ಹಾಲಿವುಡ್ ಪ್ರದೇಶದಿಂದ ಸುರಕ್ಷಿತ ಪ್ರದೇಶಗಳತ್ತ ಸ್ಥಳಾಂತರಿಸಲಾಗಿದೆ. ಲಾಸ್ ಏಂಜಲಿಸ್ ಇತಿಹಾಸದಲ್ಲೇ ಅತ್ಯಂತ ವಿನಾಶಕಾರಿ ಎಂದು ಬಣ್ಣಿಸಲಾದ ಈ ಕಾಡ್ಗಿಚ್ಚು, ಪ್ರಕೃತಿ ಮತ್ತು ಮಾನವನ ನಡುವಿನ ಸಂಘರ್ಷದಂತೆ ಕಾಣುತ್ತಿದೆ.

ಹಾಲಿವುಡ್ ಬೌಲೆವಾರ್ಡ್‌ನಿಂದ ಕೆಲವೇ ನೂರು ಮೀಟರ್ ದೂರದಲ್ಲಿ ಕಾಡ್ಗಿಚ್ಚು ವ್ಯಾಪಿಸಿದ್ದು, ಐತಿಹಾಸಿಕ ಹಾಲಿವುಡ್‌ನ ಹೃದಯಭಾಗದಲ್ಲಿ ವಾಸಿಸುವ ಜನರನ್ನು ಸ್ಥಳಾಂತರಿಸಲು ಬುಧವಾರ ಆದೇಶ ನೀಡಲಾಗಿದೆ ಎಂದು ಮೂಲಗಳು ಖಚಿತಪಡಿಸಿವೆ. ಕಾಡ್ಗಿಚ್ಚು ಹಬ್ಬಿರುವ ಪ್ರದೇಶವನ್ನು ಕಾನೂನುಬದ್ಧವಾಗಿ ಸಾರ್ವಜನಿಕ ಪ್ರವೇಶಕ್ಕೆ ಮುಚ್ಚಲಾಗಿದೆ.. ಎಂದು ಲಾಸ್ ಏಂಜಲಿಸ್ ಅಗ್ನಿಶಾಮಕ ಇಲಾಖೆ ತಿಳಿಸಿದೆ.

ಮಾರ್ಚ್‌ನಲ್ಲಿ ಸುನೀತಾ ವಿಲಿಯಮ್ಸ್ ಭೂಮಿಗೆ ವಾಪಸ್

ವಾಷಿಂಗ್ಟನ್: ಕಳೆದ ಹಲವಾರು ದಿನಗಳಿಂದ ಬಾಹ್ಯಾಕಾಶದಲ್ಲಿ ತಂಗಿರುವ ಭಾರತೀಯ ಮೂಲದ ಗಗನಯಾತ್ರಿ ಸುನೀತಾ ಮಿಲಿಯಮ್ಸ್ ಹಾಗೂ ಬುಚ್ ವಿಲೋರ್ ಅವರು ಮಾರ್ಚ್ ತಿಂಗಳಲ್ಲಿ ವಾಪಸ್ಸಾಗುವ ನಿರೀಕ್ಷೆ ಇದೆ. ಅಂತರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ತಿಂಗಳುಗಳ ಕಾಲ ಸಿಲುಕಿರುವ ಈ ಇಬ್ಬರು ಗಗನಯಾತ್ರಿಗಳು ತಮ್ಮ ಬಳಿ ಸಾಕಷ್ಟು ಆಹಾರವಿದೆ, ಲಾಂಡ್ರಿ ಬಿಕ್ಕಟ್ಟನ್ನು ಎದುರಿಸುತ್ತಿಲ್ಲ ನಾವು ಇಲ್ಲಿ ಆರಾಮಗಿದ್ದೇವೆ ಎಂದು ತಿಳಿಸಿದ್ದಾರೆ.

ಕಳೆದ ಜೂನ್‌ನಲ್ಲಿ ಬೋಯಿಂಗ್‌ನ ಸ್ಟಾರ್‌ಲೈನರ್ ಬಾಹ್ಯಾಕಾಶ ನೌಕೆಯಲ್ಲಿ ಬಾಹ್ಯಾಕಾಶ ನಿಲ್ದಾಣದಲ್ಲಿ ತಂಗಿರುವ ಅವರು ಕಕ್ಷೆಯ ಪ್ರಯೋಗಾಲಯದಲ್ಲಿ ಕೇವಲ ಎಂಟು ದಿನ ಗಳನ್ನು ಕಳೆಯಬೇಕಾಗಿತ್ತು. ಆದರೆ ಸ್ಟಾರ್‌ಲೈನರ್‌ನ ಪೊಪಲ್ಸನ್ ಸಿಸ್ಟಮ್‌ನೊಂದಿಗಿನ ಸಮಸ್ಯೆಗಳಿಂದಾಗಿ ಅವರು ಇನ್ನು ಅಲ್ಲೆ ನೆಲೆಸಿದ್ದು, ಈಗ ಮಾರ್ಚ್ ಅಂತ್ಯದಲ್ಲಿ ಹಿಂದಿರುಗುವ ಬಾಹ್ಯಾಕಾಶ ನೌಕೆಯನ್ನು ಸಿದ್ದಪಡಿಸಲಾಗಿದೆ.

ಅಂತಿಮವಾಗಿ ನಾವು ಮನೆಗೆ ಹೋಗಲು ಬಯಸುತ್ತೇವೆ, ಏಕೆಂದರೆ ನಾವು ಸ್ವಲ್ಪ ಸಮಯದ ಹಿಂದೆ ನಮ್ಮ ಕುಟುಂಬಗಳನ್ನು ತೊರೆದಿದ್ದೇವೆ ಆದರೆ ನಾವು ಇಲ್ಲಿರುವಾಗ ನಮಗೆ ಬಹಳಷ್ಟು ಕೆಲಸಗಳಿವೆ ಎಂದಿದ್ದಾರೆ. ಆಹಾರ ಪೂರೈಕೆಯ ಬಗ್ಗೆ ಭರವಸೆ ನೀಡುತ್ತಿರುವಾಗ ವಿಲೋರ್ ನಕ್ಕರು. ನಾವು ಚೆನ್ನಾಗಿ ತಿನ್ನುತ್ತಿದ್ದೇವೆ ಎಂದು ಅವರು ಹೇಳಿದರು. ಲಾಂಡ್ರಿ ಅವಶ್ಯಕತೆಗಳು ಸಹ ಭೂಮಿಗೆ ಹೋಲಿಸಲಾಗುವುದಿಲ್ಲ ಎಂದು ಅವರು ವಿವರಿಸಿದರು. ಬಟ್ಟೆಗಳು ಇಲ್ಲಿ ಸಡಿಲವಾಗಿ ಹೊಂದಿಕೊಳ್ಳುತ್ತವೆ, ನೀವು ಬೆವರು ಮತ್ತು ಅದು ಕೆಟ್ಟದಾಗುವುದು ಭೂಮಿಯ ಹಾಗೆ ಅಲ್ಲ.

ಅಂದರೆ, ಅವು ಸಡಿಲವಾಗಿ ಹೊಂದಿಕೊಳ್ಳುತ್ತವೆ. ಆದ್ದರಿಂದ ನೀವು ಒಂದು ಸಮಯದಲ್ಲಿ ವಾರಗಟ್ಟಲೆ ಪ್ರಾಮಾಣಿಕವಾಗಿ ವಸ್ತುಗಳನ್ನು ಧರಿಸಬಹುದು ಮತ್ತು ಅದು ನಿಮಗೆ ತೊಂದರೆ ಕೊಡುವುದಿಲ್ಲ ಎಂದು ಅವರು ಹೇಳಿದರು.

ವಿಲಿಯಮ್ಸ್ ಅವರು ಬಾಹ್ಯಾಕಾಶದಲ್ಲಿ ಅನಿರೀಕ್ಷಿತವಾಗಿ ದೀರ್ಘಕಾಲ ಉಳಿಯುವ ಹೊರತಾಗಿಯೂ ಉತ್ಸಾಹವು ಇನ್ನೂ ಹೆಚ್ಚಾಗಿರುತ್ತದೆ, ಇಲ್ಲಿ ಕೆಲಸ ಮಾಡುತ್ತಿರುವುದು ಸಂತೋಷ ತಂದಿದೆ ಎಂದು ಅವರು ನಾಸಾ ಅಧಿಕಾರಿಗಳೊಂದಿಗಿನ ಕರೆಯಲ್ಲಿ ಹೇಳಿದರು. ನಾವು ಎಸೆಯಲ್ಪಟ್ಟಿದ್ದೇವೆ ಎಂದು ಅನಿಸುವುದಿಲ್ಲ ಎಂದರು.

ಗುಂಡಿನ ಚಕಮಕಿಯಲ್ಲಿ ಮೂವರು ನಕ್ಸಲರು ಸಾವು



ಸುಕಾ: ಛತ್ತೀಸ್‌ಗಢದ ಸುಕಾ ಜಿಲ್ಲೆಯಲ್ಲಿ ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಮೂವರು ನಕ್ಸಲರು ಸಾವನ್ನಪ್ಪಿದ್ದಾರೆ ಎಂದು ರಾಜ್ಯ ಉಪಮುಖ್ಯಮಂತ್ರಿ ವಿಜಯ್ ಶರ್ಮಾ ಹೇಳಿದ್ದಾರೆ. ಸುಕಾದಲ್ಲಿ ನಕ್ಸಲ್ ವಿರೋಧಿ ಕಾರ್ಯಾಚರಣೆಯಲ್ಲಿ ಭದ್ರತಾ ಪಡೆಗಳು ಯಶಸ್ಸನ್ನು ಸಾಧಿಸಿವೆ ಎಂದು ಅವರು ಹೇಳಿದರು. ಇಲ್ಲಿಯವರೆಗೆ, ಮೂವರು ನಕ್ಸಲರ ಶವಗಳನ್ನು ವಶಪಡಿಸಿಕೊಳ್ಳಲಾಗಿದೆ ಮತ್ತು ಶೋಧ ಕಾರ್ಯಾಚರಣೆ ಇನ್ನೂ ನಡೆಯುತ್ತಿದೆ ಎಂದು ರಾಯ್‌ಪುರದಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ಕಳೆದ ಜ.6 ರಂದು ಬಿಜಾಪುರ ಜಿಲ್ಲೆಯಲ್ಲಿ ನಕ್ಸಲರು ನಡೆಸಿದ ಐಇಡಿ ಸ್ಫೋಟದಲ್ಲಿ ಎಂಟು ಭದ್ರತಾ ಸಿಬ್ಬಂದಿ ಮತ್ತು ವಾಹನ ಚಾಲಕ ಸಾವನ್ನಪ್ಪಿದ ಘಟನೆಯನ್ನು ಉಲ್ಲೇಖಿಸಿ, ಅವರು ನಕ್ಸಲರು ಮಾಡಿದ ಕೃತ್ಯದ ನಂತರ ಭದ್ರತಾ ಪಡೆಗಳಲ್ಲಿ ಭಾರಿ ಕೋಪವಿದೆ ಎಂದು ಹೇಳಿದರು. ನಾನು ಅವರನ್ನು (ಭದ್ರತಾ ಪಡೆಗಳನ್ನು) ಭೇಟಿ ಮಾಡಿದ್ದೇನೆ. ನಮ ಯೋಧರ ಶಕ್ತಿ ಮತ್ತು ಧೈರ್ಯದಿಂದ, ನಿಗದಿತ ಸಮಯದೊಳಗೆ ನಕ್ಸಲ್ ಬೆದರಿಕೆಯನ್ನು ನಿರ್ಮೂಲನೆ ಮಾಡಲಾಗುವುದು ಎಂದು ನಾನು ಪುನರುಚ್ಚರಿಸುತ್ತೇನೆ ಎಂದು ಅವರು ಹೇಳಿದರು. ಕೇಂದ್ರ ಗೃಹ ಸಚಿವ ಅಮಿತ್ ಶಾ ಸೋಮವಾರ ಮಾರ್ಚ್ 2026 ರೊಳಗೆ ದೇಶದಿಂದ ನಕ್ಸಲರನ್ನು ನಿರ್ಮೂಲನೆ ಮಾಡುವುದಾಗಿ ಪ್ರತಿಜ್ಞೆ ಮಾಡಿದರು ಮತ್ತು ಛತ್ತೀಸ್‌ಗಢದಲ್ಲಿ ಉಗ್ರರಿಂದ ಕೊಲ್ಲಲ್ಪಟ್ಟವರ ತ್ಯಾಗ ವ್ಯರ್ಥವಾಗುವುದಿಲ್ಲ ಎಂದು ಪ್ರತಿಪಾದಿಸಿದರು.

ಗುರುವಾರ ಬೆಳಿಗ್ಗೆ, ಸುಕಾ ಮತ್ತು ಬಿಜಾಪುರ ಜಿಲ್ಲೆಗಳ ಗಡಿಯಲ್ಲಿರುವ ಕಾಡಿನಲ್ಲಿ ಭದ್ರತಾ ಸಿಬ್ಬಂದಿಯ ಜಂಟಿ ತಂಡವು ನಕ್ಸಲೈಟ್ ವಿರೋಧಿ ಕಾರ್ಯಾಚರಣೆಗೆ ಹೊರಟಿದ್ದಾಗ ಎನ್‌ಕೌಂಟರ್ ನಡೆಯಿತು ಎಂದು ಪೊಲೀಸರು ತಿಳಿಸಿದ್ದಾರೆ. ಜಿಲ್ಲಾ ಮೀಸಲು ಪಡೆ, ವಿಶೇಷ ಕಾರ್ಯಪಡೆ ಮತ್ತು ಕೋಬ್ರಾಕ್ಕೆ ಸೇರಿದ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದಾರೆ ಎಂದು ಅವರು ಹೇಳಿದರು.

ತಿರುಪತಿ ದುರಂತ: ಮೃತರ ಕುಟುಂಬಕ್ಕೆ 25 ಲಕ್ಷ ರೂ. ಪರಿಹಾರ

ಏಳು ಮಂದಿ ಸಾವು

ತಿರುಪತಿ: ಶ್ರೀಕ್ಷೇತ್ರ ತಿರುಪತಿಯಲ್ಲಿ ಕಳೆದ ರಾತ್ರಿ ಕಾಲ್ತುಳಿತದಿಂದ ಉಂಟಾದ ನೂಕುನುಗ್ಗಲಿನಲ್ಲಿ ಸಾವನ್ನಪ್ಪಿದವರ ಸಂಖ್ಯೆ 7ಕ್ಕೆ ಏರಿದ್ದು, ಗಾಯಗೊಂಡಿರುವ ನಾಲ್ವರ ಸ್ಥಿತಿ ಈಗಲೂ ಗಂಭೀರವಾಗಿದೆ. ಈ ನಡುವೆ ಕಾಲ್ತುಳಿತದಲ್ಲಿ ಸಾವನ್ನಪ್ಪಿದ 7 ಮಂದಿಯಲ್ಲಿ ಕರ್ನಾಟಕದ ಬಳ್ಳಾರಿ ಜಿಲ್ಲೆಯ ನಿರ್ಮಲಾ (50) ಸೇರಿದ್ದಾರೆ ಎನ್ನಲಾಗಿದೆ. ಆದರೆ ಇದನ್ನು ಟಿಟಿಡಿ ನಿರಾಕರಿಸಿದೆ.

ಮೃತರು ವಿಶಾಖಪಟ್ಟಣದ ರಜನಿ(47), ಲಾವಣ್ಯ(40), ಶಾಂತಿ, ತಮಿಳುನಾಡಿನ ಸೇಲಂನ ಮಲ್ಲಿಕಾ (49), ನರಸೀಪಟ್ಟಣದ ನಾಯ್ಡು ಬಾಬು (59) ಎಂದು ಗುರುತಿಸಲಾಗಿದೆ.

ಘಟನೆಯಲ್ಲಿ ಒಟ್ಟು 40 ಮಂದಿ ಭಕ್ತರು ಗಾಯಗೊಂಡಿದ್ದು, ಗಂಭೀರವಾಗಿರುವವರನ್ನು ಹೆಲಿಕಾಪ್ಟರ್ ಮೂಲಕ ಹೈದ್ರಾಬಾದ್‌ನಲ್ಲಿ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗಿದೆ. ಮೃತರ ಕುಟುಂಬಕ್ಕೆ ಆಂಧ್ರ ಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ತಲಾ 25 ಲಕ್ಷ ರೂ. ಪರಿಹಾರ ಘೋಷಣೆ ಮಾಡಿದ್ದಾರೆ. ಗಾಯಾಳುಗಳಿಗೆ ಉಚಿತವಾಗಿ ಸರ್ಕಾರದ ವತಿಯಿಂದಲೇ ಚಿಕಿತ್ಸೆ ನೀಡುವುದಾಗಿ ತಿಳಿಸಿದ್ದಾರೆ.

ಈ ನಡುವೆ ಮೃತರ ಕುಟುಂಬಕ್ಕೆ ಒಂದು ಕೋಟಿ ರೂ. ಪರಿಹಾರ ನೀಡಬೇಕೆಂದು ಕಾಂಗ್ರೆಸ್ ಒತ್ತಾಯಿಸಿದೆ. ಘಟನೆಯ ಬಗ್ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಶ್ ಧನ್ಕರ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ಅಮಿತ್ ಶಾ, ಜಯಶಂಕರ್, ಆಂಧ್ರಪ್ರದೇಶದ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್, ಮಾಜಿ ಸಿಎಂ ಜಗಮೋಹನರೆಡ್ಡಿ ಸೇರಿದಂತೆ ಅನೇಕ ಗಣ್ಯರು ದಿಗ್ಭ್ರಾಂತಿ ವ್ಯಕ್ತಪಡಿಸಿದ್ದಾರೆ.

ಘಟನೆಯ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿರುವ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಆಂಧ್ರ ಪ್ರದೇಶ ಸರ್ಕಾರ ಭಕ್ತರಿಗೆ ಎಲ್ಲಾ ರೀತಿಯ ಸವಲತ್ತುಗಳನ್ನು ಒದಗಿಸಲು ಸಿದ್ಧವಿದೆ ಎಂದು ಹೇಳಿದ್ದಾರೆ. ತಮೆಲ್ಲಾ ಕಾರ್ಯಕ್ರಮಗಳನ್ನೂ ಬದಿಗೊತ್ತಿ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು, ಡಿಸಿಎಂ ಪವನ್ ಕಲ್ಯಾಣ್, ತಿರುಪತಿಗೆ ಆಗಮಿಸಿ ಘಟನೆ ಕುರಿತಂತೆ ಹಿರಿಯ ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಘಟನೆ ಬಗ್ಗೆ ಕ್ಷಣಕ್ಷಣಕ್ಕೂ ಮಾಹಿತಿ ಪಡೆಯುತ್ತಿರುವ ಪ್ರಧಾನಿ ನರೇಂದ್ರ ಮೋದಿಯವರು ಖುದ್ದು ಆಂಧ್ರ ಸಿಎಂ ಚಂದ್ರಬಾಬು ನಾಯ್ಡು ಹಾಗೂ ಟಿಟಿಡಿ ಅಧ್ಯಕ್ಷರ ಜೊತೆ ದೂರವಾಣಿ ಮೂಲಕ ಮಾತುಕತೆ ನಡೆಸಿ ಗಾಯಾಳುಗಳಿಗೆ ಸೂಕ್ತವಾದ ಚಿಕಿತ್ಸೆ ಕೊಡಿಸಲು ವ್ಯವಸ್ಥೆ ಕಲ್ಪಿಸಬೇಕೆಂದು ಸೂಚಿಸಿದ್ದಾರೆ. ಪ್ರಧಾನಿಯವರ ಸೂಚನೆಯಂತೆ ಗಾಯಾಳುಗಳನ್ನು ತಕ್ಷಣವೇ ತಿರುಪತಿಯಿಂದ ಹೆಲಿಕಾಪ್ಟರ್ ಮೂಲಕ ಕರೆದೊಯ್ಯಲಾಗಿದೆ. ಇವರಲ್ಲಿ ನಾಲ್ವರ ಸ್ಥಿತಿ ಚಿಂತಾಜನಕವಾಗಿದೆ.

ಒಂದು ಅಂದಾಜಿನ ಪ್ರಕಾರ ತಿರುಪತಿಯಲ್ಲಿ ಇಂದು ನಡೆಯಲಿರುವ ವೈಕುಂಠ ಏಕಾದಶಿಯ ವಿಶೇಷ ಸಂದರ್ಭದ ದರ್ಶನಕ್ಕಾಗಿ ದೇಶ-ವಿದೇಶಗಳಿಂದ 7 ಲಕ್ಷ ಭಕ್ತರು ಸೇರಿದ್ದರು ಎನ್ನಲಾಗಿದೆ.

ಇಷ್ಟು ದೊಡ್ಡ ಸಂಖ್ಯೆಯ ಭಕ್ತರಿಗೆ ತಕ್ಕಂತೆ ಸಿದ್ಧತೆ ಮಾಡಿಕೊಳ್ಳಲು ಟಿಟಿಡಿ ಭಕ್ತರಿಗೆ ಪೂರ್ವ ಸಿದ್ಧತೆ ಕೈಗೊಳ್ಳದಿರುವುದೇ ಈ ಘಟನೆಗೆ ಕಾರಣ ಎಂಬುದು ಮೇಲ್ನೋಟಕ್ಕೆ ಕಂಡುಬಂದಿದೆ.

ಭಕ್ತರ ಆಕ್ರೋಶ

ಘಟನೆ ಬಗ್ಗೆ ದೇಶ-ವಿದೇಶದಿಂದ ಆಗಮಿಸಿರುವ ಸಾವಿರಾರು ಭಕ್ತರು ಟಿಟಿಡಿ ಅವ್ಯವಸ್ಥೆ ಬಗ್ಗೆ ಆಕ್ರೋಶ ಹೊರಹಾಕಿದ್ದಾರೆ. ವೈಕುಂಠ ಏಕಾದಶಿ ಪ್ರಯುಕ್ತ ಹಲವಾರು ಭಾಗಗಳಿಂದ ಭಾರಿ ಸಂಖ್ಯೆಯ ಭಕ್ತರು ಆಗಮಿಸುತ್ತಿರುವುದು ಗೊತ್ತಿರುವುದು ಯಾವುದೇ ರೀತಿಯ ಪೂರ್ವಸಿದ್ಧತೆಗಳನ್ನು ಕೈಗೊಂಡಿರಲಿಲ್ಲ ಎಂದು ನೊಂದ ಭಕ್ತರು ಅಳಲು ತೋಡಿಕೊಂಡಿದ್ದಾರೆ. ಹೆಚ್ಚಿನ ಪ್ರಮಾಣದಲ್ಲಿ ಭಕ್ತರು ಆಗಮಿಸಿದ್ದರು. ಏಕಾಏಕಿ ವಿಶೇಷ ದರ್ಶನಕ್ಕಾಗಿ ಟಿಕೆಟ್‌ಗಳನ್ನು ನೀಡಲಾಗುತ್ತದೆ ಎಂದು ಮೈಕ್‌ನಲ್ಲಿ ಪ್ರಕಟಿಸಿದರು. ಹೀಗಾಗಿ ದಿಢೀರನೇ ನೂಕುನುಗ್ಗಲು ಉಂಟಾಗಿ ಕಾಲ್ತುಳಿತ ಉಂಟಾಯಿತು ಎಂದು ಭಕ್ತರು ನೋವು ಹೊರಹಾಕಿದ್ದಾರೆ.

ದೇಶದ ಪ್ರಗತಿಗೆ ಭಾರತೀಯ ವಲಸಿಗರ ಸಹಕಾರ ಬೇಕು

ಭುವನೇಶ್ವರ್: ದೇಶವು ಜಾಗತಿಕ ಕಾರ್ಯಪಡೆಯನ್ನು ನಿರ್ಮಿಸಲು ಭಾರತೀಯ ವಲಸಿಗರ ಪ್ರಾಮುಖ್ಯತೆ ಇರಬೇಕು ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಎಸ್ ಜೈಶಂಕರ್ ಕರೆ ನೀಡಿದ್ದಾರೆ. ಪ್ರವಾಸಿ ಭಾರತೀಯ ದಿವಸ್ ಸಮಾವೇಶದಲ್ಲಿ ಭಾರತೀಯ ವಲಸಿಗರನ್ನು ಉದ್ದೇಶಿಸಿ ಮಾತನಾಡಿದ ಜೈಶಂಕರ್, ವಿದೇಶದಲ್ಲಿ ಕಷ್ಟದ ಸಮಯದಲ್ಲಿ ನರೇಂದ್ರ ಮೋದಿ ಸರ್ಕಾರವು ನಿಮ ಬೆನ್ನನ್ನು ಪಡೆದುಕೊಂಡಿದೆ ಎಂದು ಅವರು ವಿಶ್ವಾಸ ಹೊಂದಬಹುದು ಎಂದು ಹೇಳಿದರು.

ನಮ ಭಾರತೀಯ ವಲಸಿಗರ ಸಾಧನೆಗಳ ಬಗ್ಗೆ ನಾವು ಹೆಮೆಪಡುತ್ತೇವೆ ಎಂದು ಅವರು ಹೇಳಿದರು. ಜಾಗತೀಕರಣಗೊಂಡ ಯುಗದಲ್ಲಿ, ಪ್ರತಿ ಹಾದುಹೋಗುವ ವರ್ಷದಲ್ಲಿ ಡಯಾಸ್ಪೊರಾ ಹೆಚ್ಚು ಮಹತ್ವದ್ದಾಗಿದೆ, ಅದು ತಂತ್ರಜ್ಞಾನ, ಉತ್ತಮ ಅಭ್ಯಾಸಗಳು ಅಥವಾ ಸಂಪನೂಲಗಳು, ಪ್ರವಾ ಸೋದ್ಯಮ, ವ್ಯಾಪಾರ ಅಥವಾ ಹೂಡಿಕೆಯಾಗಿರಲಿ, ನಾವು ಜಾಗತಿಕ ಉದ್ಯೋಗಿಗಳನ್ನು ನಿರ್ಮಿಸಲು ಪ್ರಯತ್ನಿಸುತ್ತಿರುವಾಗ ದ್ವಿಮುಖ ಹರಿವು ಅಮೂಲ್ಯವಾಗಿದೆ ಎಂದು ಜೈಶಂಕರ್ ಹೇಳಿದರು.

ಭಾರತ ಮತ್ತು ಅವರು ವಾಸಿಸುವ ದೇಶಗಳ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುವ ಡಯಾಸ್ಪೊರಾ ಪಾತ್ರ

ಮುಂಬೈನಲ್ಲಿ ಸೈಫ್ ಅಲಿ ಖಾನ್ ಜೊತೆ ಕಾಣಿಸಿಕೊಂಡ ಶ್ರೀಲೀಲಾ

ಕನ್ನಡದ ನಟಿ ಶ್ರೀಲೀಲಾ 'ಪುಷ್ಪ 2' ಚಿತ್ರದಲ್ಲಿ ಕಿಸ್ಸಿಕ್ ಹಾಡಿಗೆ ಸೊಂಟ ಬಳುಕಿಸಿದ ಮೇಲೆ ಬೇಡಿಕೆ ಹೆಚ್ಚಾಗಿದೆ. ಬಾಲಿವುಡ್‌ಗೆ ಪಾದಾರ್ಪಣೆ ಮಾಡಲು ಸಕಲ ತಯಾರಿ ಮಾಡಿಕೊಂಡಿದ್ದಾರೆ. ಇದೀಗ ಸೈಫ್ ಅಲಿ ಖಾನ್ ಪುತ್ರ ಇಬ್ರಾಹಿಂ ಅಲಿ ಖಾನ್ ಜೊತೆ ಶ್ರೀಲೀಲಾ ಮುಂಬೈನಲ್ಲಿ ಕಾಣಿಸಿಕೊಂಡಿದ್ದಾರೆ.



ಕೆಲ ತಿಂಗಳುಗಳಿಂದ ಶ್ರೀಲೀಲಾ ಬಾಲಿವುಡ್ ಎಂಟ್ರಿ ಬಗ್ಗೆ ಸಾಕಷ್ಟು ವಿಚಾರಗಳು ಚರ್ಚೆಗೆ ಗ್ರಾಸವಾಗಿತ್ತು. ಇಬ್ರಾಹಿಂ ಅಲಿ ಖಾನ್‌ಗೆ ಶ್ರೀಲೀಲಾ ನಾಯಕಿ ಎಂಬ ಸುದ್ದಿ ಭಾರೀ ವೈರಲ್ ಆಗಿತ್ತು. ಆದರೆ ಅದು ಯಾವುದಕ್ಕೂ ಕ್ಲ್ಯಾರಿಟಿ ಸಿಕ್ಕಿರಲಿಲ್ಲ. ಈಗ 'ಸ್ತ್ರೀ 2' ಸಿನಿಮಾ ನಿರ್ಮಿಸಿದ್ದ ಮಾಡೋಕ್ ಫಿಲ್ಮ್ಸ್ ಆಫೀಸ್‌ಗೆ ನಟಿ ಭೇಟಿ ನೀಡಿದ್ದಾರೆ. ಈ ವೇಳೆ, ಇಬ್ರಾಹಿಂ ಜೊತೆ ಶ್ರೀಲೀಲಾ ಪಾಪರಾಜಿಗಳ ಕ್ಯಾಮೆರಾಗೆ ಪೋಸ್ ನೀಡಿದ್ದಾರೆ. ಸಖತ್ ಗ್ಲ್ಯಾಮರಸ್ ಆಗಿ ಕಾಣಿಸಿಕೊಂಡಿದ್ದಾರೆ. ಈ ಮೂಲಕ ಜೊತೆಯಾಗಿ ಸಿನಿಮಾ ಮಾಡುವ ಬಗ್ಗೆ ಪಕ್ಕಾ ಆಗಿದೆ. ಅಂದಹಾಗೆ, ಶ್ರೀಲೀಲಾ ಲಿಸ್ಟ್‌ನಲ್ಲಿ 5ಕ್ಕೂ ಹೆಚ್ಚು ಸಿನಿಮಾಗಳಿವೆ. ನಿತಿನ್ ಜೊತೆಗಿನ 'ರಾಬಿನ್ ಹುಡ್' ಚಿತ್ರ, ಪವನ್ ಕಲ್ಯಾಣ್ ಜೊತೆ ಉಸ್ತಾದ್ ಭಗತ್ ಸಿಂಗ್, ಧಮಾಕ ಬಳಿಕ ರವಿತೇಜ ಜೊತೆ 2ನೇ ಬಾರಿ ಹೊಸ ಚಿತ್ರಕ್ಕೆ ನಟಿ ಓಕೆ ಎಂದಿದ್ದಾರೆ.



ಕೊಲ್ಲೂರು ದೇಗುಲಕ್ಕೆ ಹರ್ಷಿಕಾ ದಂಪತಿ ಭೇಟಿ

ಸ್ಯಾಂಡಲ್‌ವುಡ್ ನಟಿ ಹರ್ಷಿಕಾ ಪೂಣಚ್ಚ ಅವರು ಚೊಚ್ಚಲ ಮಗುವಿನ ಆರೈಕೆಯಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಮಗುವಿನೊಂದಿಗೆ ಕೊಲ್ಲೂರು ಮೂಕಾಂಬಿಕೆ ದೇವಸ್ಥಾನಕ್ಕೆ ಹರ್ಷಿಕಾ ಮತ್ತು ಭುವನ್ ಜೋಡಿ ಭೇಟಿ ನೀಡಿದ್ದಾರೆ. ಮಗು ಜನಿಸಿದ ಬಳಿಕ ಕೊಲ್ಲೂರಿಗೆ ಭೇಟಿ ನೀಡುತ್ತೇನೆ ಎಂದು ಹರ್ಷಿಕಾ ದಂಪತಿ ಹರಿಸಿಕೊಂಡಿದ್ದರು. ಅದರಂತೆ ಮಗಳ ಜೊತೆ ಮೊದಲ ಬಾರಿಗೆ ಕೊಲ್ಲೂರು ದೇಗುಲಕ್ಕೆ ಭೇಟಿ ಮೂಕಾಂಬಿಕೆ ಸನ್ನಿಧಿಯಲ್ಲಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಇನ್ನೂ 2023ರ ಆಗಸ್ಟ್ 24ರಂದು ಕೊಡಗಿನಲ್ಲಿ ಹರ್ಷಿಕಾ ಮತ್ತು ಭುವನ್ ಹೊಸ ಬಾಳಿಗೆ ಕಾಲಿಟ್ಟರು. ಹಲವು ವರ್ಷಗಳ ಪ್ರೀತಿಗೆ ಮದುವೆಯ ಮುದ್ರೆ ಒತ್ತಿದ್ದರು. ಈ ಮದುವೆಯಲ್ಲಿ ಗೋಲ್ಡನ್ ಸ್ಟಾರ್ ಗಣೇಶ್, ಪೂಜಾ ಗಾಂಧಿ ಸೇರಿದಂತೆ ಅನೇಕರು ಭಾಗಿಯಾಗಿದ್ದರು. ಕಳೆದ ವರ್ಷ ಅಕ್ಟೋಬರ್ 3ರಂದು ಹೆಣ್ಣು ಮಗುವಿಗೆ ನಟಿ ಜನ್ಮ ನೀಡಿದರು. ಮಗಳ ಪಾಲನೆಯಲ್ಲಿ ಬ್ಯುಸಿಯಿರುವ ಹರ್ಷಿಕಾ ನಟನೆಯಿಂದ ಅಂತರ ಕಾಯ್ದುಕೊಂಡಿದ್ದಾರೆ.

ಸಮರ್ಥಿಸಿಕೊಳ್ಳುವ ಅಗತ್ಯವಿಲ್ಲ



ಟೀಂ ಇಂಡಿಯಾ ಸ್ಟಾರ್ ಲೆಗ್ ಸ್ಪಿನ್ನರ್ ಯಜುವೇಂದ್ರ ಚಹಲ್ ಅವರು ಪತ್ನಿ ಧನಶ್ರೀ ವರ್ಮಾಗೆ ಡಿವೋರ್ಸ್ ಕೊಡಲಿದ್ದಾರೆ ಎಂಬ ವದಂತಿ ಬಗ್ಗೆ ಧನಶ್ರೀ ಮೌನ ಮುರಿದಿದ್ದಾರೆ. 2020ರ ಡಿಸೆಂಬರ್ 22ರಂದು ಉತ್ತರ ಪ್ರದೇಶದ ಗುರುಗ್ರಾಮ್‌ನಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದ ಚಹಲ್-ಧನಶ್ರೀ ವಿಚ್ಛೇದನಕ್ಕೆ ಮುಂದಾಗಿದ್ದಾರೆ ಎಂಬ ವದಂತಿ ಜಾಲತಾಣದಲ್ಲಿ ಸದ್ದು ಮಾಡುತ್ತಲೇ ಇತ್ತು. ಈ ಬಗ್ಗೆ ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಂಡಿರುವ ಧನಶ್ರೀ ವಂದತಿ ಬಗ್ಗೆ ತೀವ್ರ ಅಸಮಾಧಾನ ಹೊರಹಾಕಿದ್ದಾರೆ. ನಾನು, ನನ್ನ ಕುಟುಂಬದ ಸದಸ್ಯರು ಕಳೆದ ಕೆಲ ದಿನಗಳಿಂದ ಕಠಿಣ ಪರಿಸ್ಥಿತಿ ಎದುರಿಸುತ್ತಿದ್ದೇವೆ. ಕೆಲವರು ಸತ್ಯ ತಿಳಿಯದೇ ಸುಳ್ಳು ಸುಳ್ಳನ್ನೇ ಬರೆಯುತ್ತಿದ್ದಾರೆ. ನನ್ನ ಖ್ಯಾತಿಗೆ ಕಳಂಕ ತರಲು ಆಧಾರರಹಿತ ಬರವಣಿಗೆ, ಸತ್ಯ-ಪರಿಶೋಧವಿಲ್ಲದ ಬರಹಗಳು ಮತ್ತು ದ್ವೇಷ ಹರಡುವ ಟ್ರೋಲ್‌ಗಳನ್ನು ಮಾಡುತ್ತಿದ್ದಾರೆ. ಹಲವು ವರ್ಷಗಳ ಕಾಲ ಶ್ರಮಿಸಿದ ನಂತರವೇ ನಾನು ಈ ಮಟ್ಟಕ್ಕೆ ಬೆಳೆದಿದ್ದೇನೆ. ನಾನು ಮೌನವಾಗಿದ್ದ ಮಾತ್ರಕ್ಕೆ, ಅದು ನನ್ನ ದೌರ್ಬಲ್ಯ ಎಂದು ಭಾವಿಸಬೇಡಿ ಎಂದಿದ್ದಾರೆ. ಚಹಲ್, ಧನಶ್ರೀ ದಾಂಪತ್ಯದಲ್ಲಿ ಬಿರುಕು ಮದ್ದೆಯಾಗಿ 4 ವರ್ಷದ ಬಳಿಕ ಡಿವೋರ್ಸ್ ಮುಂದುವರಿದು ಇತರರಿಗೆ ಸಹಾನುಭೂತಿ ತೋರಿಸಲು ಧೈರ್ಯ ಬೇಕು. ನೈಜ ಪರಿಸ್ಥಿತಿ ಗಮನ ದಲ್ಲಿಟ್ಟುಕೊಂಡು ಮೌಲ್ಯಗಳೊಂದಿಗೆ ಮುಂದುವರಿಯುವುದರಲ್ಲಿ ನಾನು ನಂಬಿಕೆ ಇಡುತ್ತೇನೆ. ಇಲ್ಲಿ ಸಮರ್ಥಿಸಿಕೊಳ್ಳುವ ಅಗತ್ಯವಿಲ್ಲ. ನಾನು ನನ್ನ ಸತ್ಯದ ಮೇಲೆ ಕೇಂದ್ರೀಕರಿಸಲು ಮತ್ತು ನನ್ನ ಮೌಲ್ಯಗಳನ್ನು ಹಿಡಿದಿಟ್ಟುಕೊಂಡು ಮುಂದುವರಿಯುವುದನ್ನು ಆಯ್ಕೆ ಮಾಡುತ್ತೇನೆ. ಯಾವುದೇ ಸಾಕ್ಷ್ಯಗಳಿಲ್ಲದ್ರೂ ಸತ್ಯವು ಅದರ ಸ್ಥಾನದಲ್ಲಿ ದೃಢವಾಗಿ ನಿಂತಿದೆ. ಓಂ ನಮಃ ಶಿವಾಯ ಎಂದು ತಮ್ಮ ಇನ್‌ಸ್ಟಾಗ್ರಾಮ್ ಸ್ಟೋರಿಯಲ್ಲಿ ಹಂಚಿಕೊಂಡಿದ್ದಾರೆ. ಧನಶ್ರೀ ಅವರ ಈ ಪೋಸ್ಟ್ ಬಳಿಕ ಇನ್ನಷ್ಟು ಚರ್ಚೆಗಳು ಹುಟ್ಟಿಕೊಂಡಿವೆ.

ಡಿವೋರ್ಸ್ ವದಂತಿ ಬೆನ್ನಲ್ಲೇ ಮೌನ ಮುರಿದ ಧನಶ್ರೀ

ರಾಜ್ಯಪಾಲರಿಗೆ ಮದುವೆ ಆಮಂತ್ರಣ

ಸ್ಯಾಂಡಲ್‌ವುಡ್‌ನಟ ಡಾಲಿ ಫೆ.16ರಂದು ದಾಂಪತ್ಯ ಜೀವನಕ್ಕೆ ಕಾಲಿಡಲು ಸಜ್ಜಾಗಿದ್ದಾರೆ. ಈ ಹಿನ್ನೆಲೆ ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿಯಾಗಿ ಮದುವೆ ಪತ್ರಿಕೆಯನ್ನು ನೀಡಿದ್ದಾರೆ. ಶುಕ್ರವಾರ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಡಾಲಿ ಮದುವೆ ಪತ್ರಿಕೆ ನೀಡಿದ್ದಾರೆ.

ಅಂದಹಾಗೆ, ಡಾಲಿ ಧನಂಜಯ ಸಿನಿಮಾ ಕೆಲಸಕ್ಕೆ ಬ್ರೇಕ್ ನೀಡಿ ಮದುವೆ ತಯಾರಿಯಲ್ಲಿ ಬ್ಯುಸಿಯಾಗಿದ್ದಾರೆ. ಈಗಾಗಲೇ ಮಾಜಿ ಪಿಎಂ ದೇವೇಗೌಡ, ಡಿ.ಕೆ ಶಿವಕುಮಾರ್ ಹಾಗೂ ಡಿ.ಕೆ ಸುರೇಶ್, ಸಿಎಂ ಸಿದ್ದರಾಮಯ್ಯ ಸೇರಿದಂತೆ ಅನೇಕರಿಗೆ ಮದುವೆಗೆ ಆಹ್ವಾನಿಸಿದ್ದಾರೆ. ಇನ್ನೂ ಡಾಕ್ಟರ್ ಧನ್ಯತಾ ಜೊತೆ ಡಾಲಿ ಮೈಸೂರಿನಲ್ಲಿ ಹಸೆಮಣೆ ಏರಲಿದ್ದಾರೆ. ಫೆ.16ರಂದು ನಡೆಯಲಿರುವ ಈ ಮದುವೆಗೆ ರಾಜಕೀಯ ಗಣ್ಯರು, ಸಿನಿಮಾ ತಾರೆಯರು ಭಾಗಿಯಾಲಿದ್ದಾರೆ. ಇನ್ನೂ ಅಣ್ಣ ಫ್ರಮ್ ಮೆಕ್ಸಿಕೋ, ನಾಡಪ್ರಭು ಕೆಂಪೇಗೌಡ ಸೇರಿದಂತೆ ಹಲವು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಜೊತೆಗೆ ಹೊಸಬರ ಸಿನಿಮಾಗಳಿಗೆ ತಮ್ಮ ನಿರ್ಮಾಣ ಸಂಸ್ಥೆಯಿಂದ ನಿರ್ಮಾಣ ಕೂಡ ಮಾಡುತ್ತಿದ್ದಾರೆ.

ನಮ್ಮ ಜಗತ್ತನ್ನು ಯಾವಾಗಲೂ ಬೆಳಗಿಸುವ ಸ್ಟಾರ್

ರಾಕಿಂಗ್ ಸ್ಟಾರ್ ಯಶ್ ಅವರು ಜ.8ರಂದು 39ನೇ ವರ್ಷದ ಹುಟ್ಟುಹಬ್ಬವನ್ನು ಗೋವಾದಲ್ಲಿ ಆಚರಿಸಿದ್ದಾರೆ. ಚಿತ್ರರಂಗದ ಅನೇಕ ನಟ-ನಟಿಯರು ಶುಭಕೋರಿದ್ದಾರೆ. ಇದೀಗ ಯಶ್ ಬರ್ತ್‌ಡೇಗೆ ಪತ್ನಿ ರಾಧಿಕಾ ಪಂಡಿತ್ ಪ್ರೀತಿಯಿಂದ ವಿಶ್ ಮಾಡಿದ್ದಾರೆ. ನನ್ನ ಹೃದಯವನ್ನು ಆಳುವ ಕಿಂಗ್ ನೀವು ಎಂದು ಕ್ಯೂಟ್ ಆಗಿ ವಿಶ್ ಮಾಡಿದ್ದಾರೆ. ಯಶ್ ಜೊತೆಗಿನ ಬ್ಯೂಟಿಫುಲ್ ಫೋಟೋಸ್ ಶೇರ್ ಮಾಡಿದ ರಾಧಿಕಾ ಪಂಡಿತ್, ಬೆಸ್ಟ್ ಪತಿ ಹಾಗೂ ಅಪ್ಪ, ನೀವು ನಮ್ಮ ಮಕ್ಕಳಿಗೆ ಸದಾ ರಾಕ್, ನನ್ನ ಹೃದಯವನ್ನ ಆಳುವ ಕಿಂಗ್ ಮತ್ತು ನಮ್ಮ ಜಗತ್ತನ್ನು ಯಾವಾಗಲೂ ಬೆಳಗಿಸುವ ಸ್ಟಾರ್. ನಾವು ನಿಮ್ಮನ್ನು ಸದಾ ಪ್ರೀತಿಸುತ್ತೇವೆ. ಜನ್ಮದಿನದ ಶುಭಾಶಯಗಳು ಪತಿಗೆ ಶುಭಕೋರಿದ್ದಾರೆ. ಗೋವಾದಲ್ಲಿ ಮಧ್ಯರಾತ್ರಿ ಯಶ್ ಕೇಕ್ ಕತ್ತರಿಸಿ ಬರ್ತ್‌ಡೇ ಸೆಲೆಬ್ರೇಟ್ ಮಾಡಿದ್ದರು. ಪತ್ನಿ ರಾಧಿಕಾ ಮತ್ತು ಮಕ್ಕಳೊಂದಿಗೆ ಬರ್ತ್‌ಡೇ ಆಚರಿಸಿ ಯಶ್ ಖುಷಿಪಟ್ಟಿದ್ದಾರೆ. ನಟನ ಆಪ್ತ ಪಾನಿ ಪುರಿ ಕಿಟ್ಟಿ, ಕೆವಿಎನ್ ಸಂಸ್ಥೆಯ ರೂವಾರಿ ವೆಂಕಟ್ ಸೇರಿದಂತೆ ಅನೇಕರು ಹುಟ್ಟುಹಬ್ಬದ ಸಂಭ್ರಮದಲ್ಲಿ ಭಾಗಿಯಾಗಿ ಶುಭಕೋರಿದ್ದರು. ಈ ಮೊದಲೇ ತಾವು ಹುಟ್ಟುಹಬ್ಬ ಆಚರಿಸಿಕೊಳ್ಳಲ್ಲ. ಅಭಿಮಾನಿಗಳಿಗೆ ನೀವು ಇರುವ ಕಡೆಯಿಂದಲೇ ಹಾರೈಸಿ ಎಂದು ನಟ ತಿಳಿಸಿದ್ದರು. ಅದರಂತೆ ಜ.8ರಂದಯ 'ಟಾಕ್ಸಿಕ್' ಲುಕ್‌ನಿಂದ ಫ್ಯಾನ್ಸ್‌ಗೆ ಸರ್ಪ್ರೈಸ್ ಕೊಟ್ಟಿದ್ದಾರೆ.

ಸರಣಿಯಿಂದ ಹೊರಬಿದ್ದ ಸ್ಟಾರ್ ಆಟಗಾರರು

ಚಾಂಪಿಯನ್ಸ್ ಟ್ರೋಫಿ ಆರಂಭವಾಗಲು ಸುಮಾರು ಒಂದು ತಿಂಗಳು ಬಾಕಿ ಇದೆ. ಇದಕ್ಕೂ ಮುನ್ನ ಭಾರತ ತಂಡಕ್ಕೆ ಸಿದ್ಧಗೊಳ್ಳಲು ಒಂದೇ ಒಂದು ಅವಕಾಶವಿದ್ದು ಅದು ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯಾಗಿದೆ. ಈ ಸರಣಿಯಲ್ಲಿ ಅವಕಾಶ ಪಡೆಯುವ ಆಟಗಾರರು ಚಾಂಪಿಯನ್ಸ್ ಟ್ರೋಫಿಗೂ ತಂಡದಲ್ಲಿ ಸ್ಥಾನ ಪಡೆಯುವ ಸಾಧ್ಯತೆಗಳಿವೆ. ಆದರೆ ಈ ಸರಣಿಯಲ್ಲಿ ತಂಡದ ಐವರು 5 ಸ್ಟಾರ್ ಆಟಗಾರರಿಗೆ ಈಗಾಗಲೇ ಗೇಟ್‌ಪಾಸ್ ನೀಡಲಾಗಿದೆ.

ಭಾರತ ಮತ್ತು ಇಂಗ್ಲೆಂಡ್ ನಡುವೆ 3 ಪಂದ್ಯಗಳ ಏಕದಿನ ಸರಣಿ ನಡೆಯಲಿದೆ. ಇದು ಫೆಬ್ರವರಿ 6 ರಿಂದ ಪ್ರಾರಂಭವಾಗಲಿದ್ದು, ಕೊನೆಯ ಪಂದ್ಯ ಫೆಬ್ರವರಿ 12 ರಂದು ನಡೆಯಲಿದೆ. ಆದರೆ ಆಸ್ಟ್ರೇಲಿಯಾ ಪ್ರವಾಸದ ವೇಳೆ ಸಂಚಲನ ಮೂಡಿಸಿದ್ದ ಜಸ್ಪ್ರೀತ್ ಬುಮ್ರಾ ಈ ಸರಣಿಯಿಂದ ಹೊರಗುಳಿಯಲಿದ್ದಾರೆ. ಸಿಡ್ನಿಯಲ್ಲಿ ನಡೆದ ಕೊನೆಯ ಟೆಸ್ಟ್ ಪಂದ್ಯದ ವೇಳೆ ಗಾಯಗೊಂಡಿದ್ದರು. ಈ ಕಾರಣದಿಂದ ಸದ್ಯಕ್ಕೆ ಕ್ರಿಕೆಟ್‌ನಿಂದ ದೂರ ಉಳಿಯಲಿದ್ದಾರೆ.

ಬುಮ್ರಾ ಹೊರತುಪಡಿಸಿ, ಸುದೀರ್ಘ ಟೆಸ್ಟ್ ಸರಣಿಯ ನಂತರ ತಂಡದ ಪ್ರಮುಖ ವೇಗದ ಬೌಲರ್‌ಗಳಲ್ಲಿ ಒಬ್ಬರಾದ ಮೊಹಮ್ಮದ್ ಸಿರಾಜ್‌ಗೆ ವಿಶ್ರಾಂತಿ ನೀಡಲು ನಿರ್ಧರಿಸಲಾಗಿದೆ. ಹೀಗಾಗಿ ಅವರು ಈ ಸರಣಿಯಲ್ಲಿ ಕಾಣಿಸಿಕೊಳ್ಳುವುದಿಲ್ಲ. ಈಗ ಅವರನ್ನು ನೇರವಾಗಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಕಾಣಬಹುದು. ಇದು ಗಾಯಗೊಂಡು ದಣಿದ ಆಟಗಾರರ ವಿಚಾರ. ಈ ಇಬ್ಬರಲ್ಲದೆ ಸಂಪೂರ್ಣ ಫಿಟ್ ಮತ್ತು ಫ್ರೆಶ್ ಆಗಿರುವ 3 ಆಟಗಾರರಿಗೂ ಈ ಸರಣಿಯಲ್ಲಿ ಆಡುವ ಅವಕಾಶ ಸಿಗುವುದಿಲ್ಲ.

ಭಾರತ ಟಿ20 ತಂಡದ ನಾಯಕ ಸೂರ್ಯಕುಮಾರ್ ಯಾದವ್ ಕೂಡ ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ಅವಕಾಶ ಪಡೆಯುವ ಭರವಸೆ ಇಲ್ಲ. ಇದರ ಹಿಂದಿನ ದೊಡ್ಡ ಕಾರಣ ಅವರ ಪ್ರದರ್ಶನ. 2023ರ ಏಕದಿನ ವಿಶ್ವಕಪ್‌ವರೆಗೆ ಅವರು ಭಾರತದ ತಂಡದ ಪ್ರಮುಖ ಭಾಗವಾಗಿದ್ದರು. ಆದರೆ ವಿಶೇಷವಾದುದನ್ನು ಪ್ರದರ್ಶಿಸಲು ಸಾಧ್ಯವಾಗಲಿಲ್ಲ. ಆದ್ದರಿಂದ, ಫೈನಲ್‌ನಲ್ಲಿ ಸೋಲಿನ ನಂತರ ಅವರನ್ನು ತಂಡದಿಂದ ಕೈಬಿಡಲಾಯಿತು. ಇದಲ್ಲದೆ ದೇಶೀ ಟೂರ್ನಿಯಲ್ಲೂ ಸೂರ್ಯಕುಮಾರ್ ಪ್ರದರ್ಶನ ಉತ್ತಮವಾಗಿಲ್ಲ. ಹೀಗಾಗಿ ಅವರಿಗೆ ಏಕದಿನ ತಂಡದಲ್ಲಿ ಸ್ಥಾನ ಸಿಗುವುದಿಲ್ಲ.

ಇತ್ತೀಚಿನ ದಿನಗಳಲ್ಲಿ ಟಿ20ಯಲ್ಲಿ ಅದ್ಭುತ ಪ್ರದರ್ಶನ ನೀಡುತ್ತಿರುವ ಸಂಜು ಸ್ಯಾಮ್ಸನ್‌ಗೆ ಏಕದಿನ ಸರಣಿಯಲ್ಲಿ ಅವಕಾಶ ಸಿಗುವ ಭರವಸೆ ಇಲ್ಲ. ಅವರು 13 ತಿಂಗಳ ಹಿಂದೆ ಅಂದರೆ ಡಿಸೆಂಬರ್ 2023 ರಲ್ಲಿ ಕೊನೆಯ ಏಕದಿನ ಪಂದ್ಯವನ್ನು ಆಡಿದ್ದರು. ಇದಲ್ಲದೆ, ಅವರು ವಿಕೆಟ್ ಕೀಪರ್-ಬ್ಯಾಟ್ಸ್‌ಮನ್ ಆಗಿರುವ ಕಾರಣ, ರಿಷಬ್ ಪಂತ್ ಮತ್ತು ಕೆಎಲ್ ರಾಹುಲ್ ಅವರನ್ನು ಬಿಸಿಸಿಐನ ಮೊದಲ ಆಯ್ಕೆ ಎಂದು ಹೇಳಲಾಗುತ್ತದೆ. ಅಂದರೆ ಸ್ಯಾಮ್ಸನ್ ಕೂಡ ಏಕದಿನ ತಂಡದ ಯೋಜನೆಯಲ್ಲಿಲ್ಲ.

ಟಿ20ಯಲ್ಲಿ ಅದ್ಭುತ ಪ್ರದರ್ಶನ ನೀಡುತ್ತಿರುವ ಸಂಜು

ಬ್ಯಾಟ್ ಕಂಪೆನಿ ಕೋಟಿ ಕೋಟಿ ಡೀಲ್ ಕುದುರಿಸಿದ ಆಝಂ

7 ಕೋಟಿ ರೂ.ಗಳ ಒಪ್ಪಂದ

ಪಾಕಿಸ್ತಾನ್ ತಂಡದ ಮಾಜಿ ನಾಯಕ ಮುಂಬರುವ ಚಾಂಪಿಯನ್ಸ್ ಟ್ರೋಫಿಯಲ್ಲಿ ಹೊಸ ಬ್ಯಾಟ್‌ನೊಂದಿಗೆ ಕಾಣಿಸಿಕೊಳ್ಳಲಿದ್ದಾರೆ. ಈ ಹಿಂದೆಯಿದ್ದ ಗ್ರೇ ನಿಕಲ್ಸ್ ಕಂಪೆನಿ ಜತೆಗಿನ ಒಪ್ಪಂದ ಕೊನೆಗೊಳಿಸಿರುವ ಬಾಬರ್ ಇದೀಗ ಪಾಕಿಸ್ತಾನದ ಸಿಎ ಸ್ಪೋರ್ಟ್ಸ್ ಕಂಪೆನಿ ಜೊತೆ ಹೊಸ ಡೀಲ್ ಕುದುರಿಸಿಕೊಂಡಿದ್ದಾರೆ.

ಪಾಕ್ ಮಾಧ್ಯಮ ವರದಿಗಳ ಪ್ರಕಾರ, ಸಿಎ ಸ್ಪೋರ್ಟ್ಸ್‌ನಿಂದ ಬಾಬರ್ ಪ್ರತಿ ವರ್ಷ 7 ಕೋಟಿ ಪಾಕಿಸ್ತಾನಿ ರೂಪಾಯಿಗಳನ್ನು ಪಡೆಯಲಿದ್ದಾರೆ. ಈ ಹಿಂದೆ ಅವರು ಇಂಗ್ಲೆಂಡ್‌ನ ಗ್ರೇ ನಿಕೋಲ್ಸ್ ಜೊತೆ ಸುಮಾರು 5 ಕೋಟಿ ಪಾಕಿಸ್ತಾನಿ ರೂಪಾಯಿ ಮೌಲ್ಯದ ಒಪ್ಪಂದ ಮಾಡಿಕೊಂಡಿದ್ದರು. ಇದೀಗ ತಮ್ಮ ಬ್ಯಾಟ್ ಮೇಲೆ ಸಿಎ ಸ್ಪೋರ್ಟ್ಸ್ ಸ್ಟಿಕ್ಕರ್ ಹಾಕಿಕೊಳ್ಳಲು ಬಾಬರ್ ಆಝಂ 7 ಕೋಟಿ ರೂ.ಗಳ ಒಪ್ಪಂದ ಮಾಡಿಕೊಂಡಿದ್ದಾರೆ. ಇದರ ಜೊತೆಗೆ ಅರ್ಧಶತಕ ಮತ್ತು ಶತಕಗಳಿಗೂ ಹೆಚ್ಚುವರಿ ಮೊತ್ತ ಪಡೆಯಲಿದ್ದಾರೆ. ಅಂದರೆ ಬಾಬರ್ ಅರ್ಧಶತಕ ಮತ್ತು ಶತಕ ಬಾರಿಸಿ ಬ್ಯಾಟ್ ಮೇಲೆಕ್ಕೆತ್ತಿ ತೋರಿಸಿದರೆ ಅದಕ್ಕೆ ಬೋನಸ್ ಮೊತ್ತ ನೀಡಲಿದ್ದಾರೆ. ಇಂಟ್ರೆಸ್ಟಿಂಗ್ ವಿಷಯ ಎಂದರೆ ಈ ಡೀಲ್ ಬೆನ್ನಲ್ಲೇ ಬಾಬರ್ ಆಝಂ ಬ್ಯಾಕ್ ಟು ಬ್ಯಾಕ್ ಅರ್ಧಶತಕ ಬಾರಿಸಿದ್ದಾರೆ. 2022 ರಿಂದ ಟೆಸ್ಟ್‌ನಲ್ಲಿ ಒಂದೇ ಒಂದು ಹಾಫ್ ಸೆಂಚುರಿ ಸಿಡಿಸದಿದ್ದ ಬಾಬರ್, ಸಿಎ ಬ್ಯಾಟ್‌ನೊಂದಿಗೆ ಕಣಕ್ಕಿಳಿಯುತ್ತಿದ್ದಂತೆ ಸೌತ್ ಆಫ್ರಿಕಾ ವಿರುದ್ಧದ ಟೆಸ್ಟ್‌ನಲ್ಲಿ 58 ಮತ್ತು 81 ರನ್ ಬಾರಿಸಿ ಬ್ಯಾಟ್ ಮೇಲೆಕ್ಕೆತ್ತಿದ್ದಾರೆ. ಇನ್ನು ಬಾಬರ್ ಆಝಂ ಜೊತೆಗಿನ ಒಪ್ಪಂದ ಬಳಿಕ ಸಿಎ ಬ್ಯಾಟ್ ಮಾರಾಟದಲ್ಲಿ ಏರಿಕೆ ಕಂಡಿದೆ ಎಂದು ಕಂಪೆನಿ ಹೇಳಿಕೊಂಡಿದೆ. ಅದರಲ್ಲೂ ಈ ಬಾರಿಯ ಚಾಂಪಿಯನ್ಸ್ ಟ್ರೋಫಿ ಪಾಕಿಸ್ತಾನದಲ್ಲಿ ನಡೆಯಲಿದ್ದು, ಈ ವೇಳೆ ಬಾಬರ್ ಆಝಂ ಬಳಸುವ ಸಿಎ ಬ್ಯಾಟ್ ಪಾಕ್ ತಂಡದ ಕ್ರಿಕೆಟ್ ಪ್ರೇಮಿಗಳ ನೆಚ್ಚಿನ ಬ್ರಾಂಡ್ ಆಗುವ ನಿರೀಕ್ಷೆಯಲ್ಲಿದೆ ಸಿಎ ಸ್ಪೋರ್ಟ್ಸ್.

12 ವರ್ಷಗಳ ಬಳಿಕ ಅತ್ಯಂತ ಕೆಳಸ್ತರಕ್ಕೆ ಕುಸಿದ ವಿರಾಟ್ ಕೊಹ್ಲಿ

ವಿರಾಟ್ ಕೊಹ್ಲಿ ಈ ಬಾರಿಯ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯಲ್ಲಿ ಅತ್ಯಂತ ಕಳಪೆ ಪ್ರದರ್ಶನ ನೀಡಿದ್ದರು. 9 ಇನಿಂಗ್ಸ್ ಆಡಿದ ಕೊಹ್ಲಿ 190 ರನ್‌ಗಳಿಸಲಷ್ಟೇ ಶಕ್ತರಾಗಿದ್ದರು. ಅಂದರೆ 23.75 ರ ಸರಾಸರಿಯಲ್ಲಿ ರನ್ ಈ ಕಳಪೆ ಪ್ರದರ್ಶನದ ಫಲವಾಗಿ ಇದೀಗ ಐಸಿಸಿ ಟೆಸ್ಟ್ ಬ್ಯಾಟರ್‌ಗಳ ಶ್ರೇಯಾಂಕದಲ್ಲೂ ಕುಸಿತ ಕಂಡಿದ್ದಾರೆ. ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯಲ್ಲಿ ಅತ್ಯಂತ ಕಳಪೆ ಪ್ರದರ್ಶನ ನೀಡಿದ್ದ ವಿರಾಟ್ ಕೊಹ್ಲಿ ಇದೀಗ ಐಸಿಸಿ